ಸಂಪುಟ: 05 ಸಂಚಿಕೆ: 324 ಪುಟಗಳು: 08 ಶುಕ್ರವಾರ 06 ಫೆಬ್ರವರಿ 2026

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ನಮ್ಮ ದೇಶಕ್ಕೆ ಪುರುಷಸಿಂಹರು ಬೇಕಾಗಿದ್ದಾರೆ, ಪುರುಷಸಿಂಹರಾಗಿ, ಬಂಡೆಯಂತೆ ಸ್ಥಿರವಾಗಿ ನಿಲ್ಲಿ, ಸತ್ಯವು ಯಾವಾಗಲೂ ಜಯಿಸುತ್ತದೆ


## ವಿನ್ಯಾಸಗಾರರು ಬೇಕಾಗಿದ್ದಾರೆ



ಪೇಜ್ ಮೇಕರ್, ಇನ್ ಡಿಸೈನರ್, ಕನ್ನಡ ಟೈಪ್ ಮಾಡಬಲ್ಲವರು. ಬೆಂಗಳೂರಿನಲ್ಲಿ ವಾಸವಿರುವ ಬೆಂಗಳೂರು ಕಚೇರಿಯಲ್ಲಿ ಕೆಲಸ ಮಾಡಲು ಇಚ್ಛಿಸುವ (4 ಮಂದಿ) ಪತ್ರಿಕೋದ್ಯಮದಲ್ಲಿ ತೀವ್ರ ಆಸಕ್ತಿ, ಕನ್ನಡ ಭಾಷೆಯ ಮೇಲೆ ಹಿಡಿತ, ಸಾಮಾನ್ಯ ಜ್ಞಾನ, ಓದುವ ಹವ್ಯಾಸ ಹಾಗೂ ಉತ್ಸಾಹ ಕಾತುರವಿರುವ ಆಸಕ್ತರಿಗೆ ನಿರ್ದಿಷ್ಟ ಪದವಿಯ ಅಗತ್ಯವಿಲ್ಲ. ವಯೋಮಿತಿ ಗರಿಷ್ಠ 25 ವರ್ಷ.

ಆಸಕ್ತರು ಕೂಡಲೇ ಈ ಕೆಳಗಿನ ವಿಳಾಸಕ್ಕೆ ತಮ್ಮ ಪೂರ್ಣ ವಿವರಗಳುಳ್ಳ ಅರ್ಜಿ ಸಲ್ಲಿಸಿ ಅಥವಾ ಮುಖತಃ ಭೇಟಿ ನೀಡಿ.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ

**9448225696**

ಉದಯ ವಾಹಿನಿ

#: 1230 'JAYAMAHAL 13th cross, 2nd phase, Girinagar, Bangalore-560085. (Near to bangalore one park, opposite mandya medical)
udayavahininews@gmail.com


## ಪ್ರಧಾನಿ ಉತ್ತರವಿಲ್ಲದೆ ರಾಷ್ಟ್ರಪತಿ ಭಾಷಣ ಅಂಗೀಕಾರ
## 21 ವರ್ಷದ ಬಳಿಕ ಮುರಿದ ಸಂಪ್ರದಾಯ!

• ಉದಯವಾಹಿನಿ, ದೆಹಲಿ

1 ರಾಷ್ಟ್ರಪತಿಗಳ ಭಾಷಣಕ್ಕೆ ವಂದನಾ ನಿರ್ಣಯ ಭಾಷಣಕ್ಕೆ ಆಗಮಿಸಿದ ಪ್ರಧಾನಿ ಮೋದಿ

2 ತನ್ನ ವಿನಂತಿಯ ಮೇರೆಗೆ ಪ್ರಧಾನಿ ಸದನಕ್ಕೆ ಆಗಮಿಸಿಲ್ಲ ಎಂದು ಸ್ಪೀಕರ್ ಬಿರ್ಲಾ ಹೇಳಿಕೆ

3 ಕಾಂಗ್ರೆಸ್ ಅಹಿತಕರ ಘಟನೆ ನಡೆಸುವ ಮಾಹಿತಿ ಸಿಕ್ಕಿತ್ತು ಎಂದು ಗಂಭೀರ ಆರೋಪ

ಬಜೆಟ್ ಅಧಿವೇಶನದ ನಡುವೆ ಗುರುವಾರ ಲೋಕಸಭೆಯಲ್ಲಿ ಅಪರೂಪದ ಬೆಳವಣಿಗೆ ಕಂಡುಬಂದಿದೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಭಾಷಣಕ್ಕೆ ಸಂಬಂಧಿಸಿದ ಧನ್ಯವಾದ ನಿರ್ಣಯವನ್ನು ಪ್ರಧಾನಿಯವರ ಪ್ರತಿಕ್ರಿಯೆಯಿಲ್ಲದೆ ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು. ಸುಮಾರು 21 ವರ್ಷದ ಬಳಿಕ ಸಂಸತ್ತಿನ ಸಂಪ್ರದಾಯದಲ್ಲಿ ಇಂತಹ ಬದಲಾವಣೆ ಕಂಡುಬಂದಿರುವುದು ಗಮನಾರ್ಹವಾಗಿದೆ.

ಸಂಸತ್ತಿನಲ್ಲಿ ನಿರಂತರ ಗದ್ದಲ ಮತ್ತು ವಿರೋಧ ಪಕ್ಷದ ಪ್ರತಿಭಟನೆಗಳ ಕಾರಣದಿಂದ ಕಲಾಪಗಳು ಸರಾಗವಾಗಿ ನಡೆಯಲಿಲ್ಲ. ಪ್ರಧಾನಿ ಮೋದಿ ಅವರು ರಾಷ್ಟ್ರಪತಿ ಭಾಷಣದ ಕುರಿತು ಉತ್ತರ ನೀಡಬೇಕಿದ್ದರೂ, ಪದೇ ಪದೇ ಕಲಾಪ ಸ್ಥಗಿತಗೊಂಡ ಹಿನ್ನೆಲೆ ಅದಕ್ಕೆ ಅವಕಾಶ ಸಿಗಲಿಲ್ಲ. ಈ ಹಿನ್ನೆಲೆಯಲ್ಲಿ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರು ಧನ್ಯವಾದ ನಿರ್ಣಯವನ್ನು ಓದಿ, ಸದನದಲ್ಲಿ ಧ್ವನಿ ಮತದ ಮೂಲಕ ಅಂಗೀಕರಿಸಿದರು.

ಬೆಳಿಗ್ಗೆ ಕಲಾಪ ಆರಂಭವಾದ ಕೆಲವೇ ಕ್ಷಣಗಳಲ್ಲಿ ಮತ್ತೆ ಗದ್ದಲ ಹೆಚ್ಚಾಗಿ ಸದನವನ್ನು ಮುಂದೂಡಬೇಕಾದ ಪರಿಸ್ಥಿತಿ ನಿರ್ಮಾಣವಾಯಿತು. ವಿರೋಧ ಪಕ್ಷದ ಸದಸ್ಯರು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಾ ಪ್ರತಿಭಟನೆ ಮುಂದುವರೆಸಿದರು. ಇತ್ತೀಚೆಗೆ ಕೆಲವು ಕಾಂಗ್ರೆಸ್ ಸಂಸದರನ್ನು ಅಮಾನತು ಮಾಡಿರುವ ವಿಚಾರವೂ ಈ ಗೊಂದಲಕ್ಕೆ ಕಾರಣವಾಗಿದೆ ಎಂದು ಹೇಳಲಾಗುತ್ತಿದೆ.



2004ರ ಬಳಿಕ ಇದೇ ಮೊದಲ ಬಾರಿಗೆ ಪ್ರಧಾನಿಯವರ ಪ್ರತಿಕ್ರಿಯೆಯಿಲ್ಲದೆ ನಿರ್ಣಯ ಅಂಗೀಕರಿಸಲಾಗಿದೆ ಎಂಬುದು ವಿಶೇಷ.

**ಸರ್ಕಾರದಿಂದ ತಪ್ಪು ಮಾಹಿತಿ:** ವಿಪಕ್ಷವಾಗಿರುವ ಕಾಂಗ್ರೆಸ್ ಸ್ಪೀಕರ್ ಅವರ ಈ ಆರೋಪಗಳನ್ನು ಅಲ್ಲಗೆಳೆದಿದ್ದಾರೆ. ಕಾಂಗ್ರೆಸ್ ನಾಯಕ ಪವನ್ ಖೇರಾ ಅವರು ಸ್ಪೀಕರ್ ಕಾರ್ಯಾಲಯದ ಆರೋಪಗಳನ್ನು ಸ್ಪಷ್ಟವಾಗಿ ತಳ್ಳಿ ಹಾಕಿದ್ದಾರೆ. ಸರ್ಕಾರವು ವಿಪಕ್ಷಗಳ ಬಗ್ಗೆ ಮಾಧ್ಯಮಗಳಿಗೆ ತಪ್ಪು ಮಾಹಿತಿ ನೀಡುತ್ತಿದೆ. ಅದೇ ರೀತಿ ಪಕ್ಷದ ಮಹಿಳಾ ಸಂಸದರ ವಿರುದ್ಧವೂ ತಪ್ಪು ಕಲ್ಪನೆ ಮಾಡುವ ಹುನ್ನಾರ ನಡೆಸಿದೆ. ಮಹಿಳೆಯೊಬ್ಬರು ಪ್ರತಿಭಟನೆ ನಡೆಸಿದರೆ ಅದು ಭಯೋತ್ಪಾದನೆಯಾಗುತ್ತದೆಯೇ ಎಂದು ಖಾರವಾಗಿ ಪ್ರಶ್ನಿಸಿದ್ದಾರೆ. ದಲಿತ ಮಹಿಳಾ ಸಂಸದೆಯೊಬ್ಬರು ಎದ್ದು ನಿಂತು ಪ್ರಶ್ನಿಸಿದ್ದು ಮೋದಿ ಸರ್ಕಾರ ಮತ್ತು ಅವರ ಹಿಂಬಾಲಕರಂತಿರುವ ಮಾಧ್ಯಮಗಳಿಗೆ ಅಪಥ್ಯವಾಯಿತೇ? ಮೋದಿ ಸರ್ಕಾರ ಮತ್ತು ಪತ್ರಕರ್ತರು ದೇಶದ ಮಹಿಳೆಯರು ಅದರಲ್ಲೂ ವಿಶೇಷವಾಗಿ ದಲಿತ ಮಹಿಳೆಯ ಕ್ಷಮೆ ಕೇಳಬೇಕು ಎಂದು ಪವನ್ ಖೇರಾ ಒತ್ತಾಯಿಸಿದ್ದಾರೆ. ಖೇರಾ ಅವರು ಮಾಡಿರುವ ಆರೋಪಗಳಿಗೆ ಪ್ರಧಾನ ಮಂತ್ರಿ ಕಾರ್ಯಾಲಯ ಆಗಲಿ ಅಥವಾ ಸ್ಪೀಕರ್ ಅವರ ಕಾರ್ಯಾಲಯವಾಗಲಿ ಯಾವುದೇ ರೀತಿಯ ಪ್ರತಿಕ್ರಿಯೆ ನೀಡಿಲ್ಲ.

**ಪ್ರಿಯಾಂಕಾ ಗಾಂಧಿ ತರಾಟೆ:** ಲೋಕಸಭೆ ಕಲಾಪಕ್ಕೆ ಪ್ರಧಾನಿ ನರೇಂದ್ರ ಮೋದಿ ಗೈರು ಹಾಜರಾಗಿರುವ ಬಗ್ಗೆ ಕಾಂಗ್ರೆಸ್ ಸಂಸದೆ ಪ್ರಿಯಾಂಕಾ ಗಾಂಧಿ ವಾದ್ರಾ ಸರ್ಕಾರವನ್ನು ತೀವ್ರವಾಗಿ ತರಾಟೆಗೆ ತೆಗೆದುಕೊಂಡಿದ್ದಾರೆ. ವಿರೋಧ ಪಕ್ಷಗಳು ಎತ್ತಿರುವ ವಿಷಯಗಳಿಗೆ ಸರಿಯಾಗಿ ಉತ್ತರ ಕೊಡದೇ ಸರ್ಕಾರ ದಾರಿ ತಪ್ಪಿಸುತ್ತಿದೆ ಎಂದು ಆರೋಪಿಸಿದರು. ರಾಜ್ಯಸಭೆಯಲ್ಲಿ ಕೇಂದ್ರ ಸಚಿವ ಜೆ.ಪಿ. ನಡ್ಡಾ ಅವರು ರಾಹುಲ್ ಗಾಂಧಿಯನ್ನು ಮುಗ್ಧ ಎಂದು ಕರೆದಿದ್ದಕ್ಕೆ ಪ್ರತಿಕ್ರಿಯಿಸಿದ ಪ್ರಿಯಾಂಕಾ ಗಾಂಧಿ, ವಿರೋಧ ಪಕ್ಷದ ನಾಯಕಿಗೆ ಸಂಸತ್ತಿನಲ್ಲಿ ಮುಕ್ತವಾಗಿ ಮಾತನಾಡಲು ಅವಕಾಶ ನೀಡಬೇಕು ಎಂದು ಹೇಳಿದರು.ಯಾರ ಬಗ್ಗೆಯಾದರೂ ಮಾತನಾಡಲು ಇದು ಒಂದು ಮಾರ್ಗವೇ? ಈ ರೀತಿ ಪದ ಬಳಕೆ ಸರಿಯೇ ? ಅವರಿಗೆ ಮಾತನಾಡಲು ಅವಕಾಶ ನೀಡಬೇಕು. ಮಾತನಾಡುವುದಕ್ಕೆ ಅವಕಾಶ ನೀಡದೇ, ಸುಮ್ಮಸುಮ್ಮನೆ ಆರೋಪ ಮಾಡುವುದು ಸರಿಯಲ್ಲ ಎಂದರು



**ಜೆ ಪಿ ನಡ್ಡಾ ವಾಗ್ದಾಳಿ**

ತಮ್ಮ ಹೇಳಿಕೆಯಲ್ಲಿ, ಪ್ರತಿಪಕ್ಷಗಳು ಉದ್ದೇಶಪೂರ್ವಕವಾಗಿ ಕಲಾಪವನ್ನು ಸ್ಥಗಿತಗೊಳಿಸುತ್ತಿವೆ ಎಂದು ಜೆಪಿ ನಡ್ಡಾ ಆರೋಪಿಸಿದರು. ನೀವು ಸದನವನ್ನು ಕಾರ್ಯನಿರ್ವಹಿಸಲು ಬಿಡಲಿಲ್ಲ, ಪ್ರಜಾಪ್ರಭುತ್ವ ಅಪಾಯದಲ್ಲಿದೆ ಎಂಬ ಆರೋಪವನ್ನು ನಾನು ಬಲವಾಗಿ ಖಂಡಿಸುತ್ತೇನೆ. ಪಕ್ಷದೊಳಗೆ ಸಹ ನೀವು ಇದನ್ನು ಅರ್ಥಮಾಡಿಕೊಳ್ಳಬೇಕು. ಪ್ರಜಾಪ್ರಭುತ್ವದಲ್ಲಿ, ಕೆಲಸಗಳನ್ನು ಪ್ರಜಾಸತ್ತಾತ್ಮಕವಾಗಿ ಮಾಡಬೇಕು. ಪಕ್ಷವು ಮುಗ್ಧ ಮಗುವಿಗೆ ಒತ್ತೆಯಾಳು ಆಗಲು ಬಿಡಬೇಡಿ ಎಂದು ವಾಗ್ದಾಳಿ ನಡೆಸಿದರು.ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಮಾತನಾಡಿ, ಸರ್ಕಾರವು ಚರ್ಚೆಯನ್ನು ಹತ್ತಿಕ್ಕುತ್ತಿದೆ ಮತ್ತು ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕರು ಮಾತನಾಡದಂತೆ ತಡೆಯುತ್ತಿದೆ ಎಂದು ಆರೋಪಿಸಿದರು.

ವಿಪಕ್ಷಗಳ ತೀವ್ರ ಗದ್ದಲ, ಲೋಕಸಭೆ ಕಲಾಪ ಮುಂದೂಡಿಕೆ

# ಲೋಕ ಗದ್ದಲ ಜೋರು
# ಹೊರ ನಡೆದ ಕೈ ನಾಯಕರು



ಮಲ್ಲಿಕಾರ್ಜುನ ಖರ್ಗೆ ಕೆಂಡಾಮಂಡಲ

**ಸದನ ನಾಯಕರ ಸಭೆ**

ಕಳೆದ ಹಲವು ದಿನಗಳಿಂದ ಲೋಕಸಭೆ ಮತ್ತು ರಾಜ್ಯಸಭೆಯಲ್ಲಿ ಆರೋಪ, ಪ್ರತ್ಯಾರೋಪ,ಗದ್ದಲ, ವಿರೋಧ ಪಕ್ಷದ ಸದಸ್ಯರ ಅಮಾನತು ಸೇರಿದಂತೆ ವಿವಿಧ ವಿಷಯಗಳ ಕುರಿತು ರಾಜ್ಯಸಭೆಯ ಪ್ರತಿ ಪಕ್ಷದ ನಾಯಕ ಮಲ್ಲಿಕಾರ್ಜುನ್ ಖರ್ಗೆ ನೇತೃತ್ವದಲ್ಲಿ ಉಭಯ ಸದನಗಳ ವಿರೋಧ ಪಕ್ಷದ ಸದನ ನಾಯಕರ ಸಭೆ ನಡೆಯಿತು. ಸಂಸತ್ತಿನ ಅಧಿವೇಶನಕ್ಕೆ ಸಂಬಂಧಿಸಿದ ಪ್ರಮುಖ ವಿಷಯಗಳ ಕುರಿತು ಚರ್ಚೆ ನಡೆಸಲಾಗಿದೆ.ಈ ಸಭೆಯಲ್ಲಿ ಇಂಡಿಯಾ ಮೈತ್ರಿಕೂಟದ ನಾಯಕರು ಭಾಗಿಯಾಗಿದ್ದರು. ಕಾಂಗ್ರೆಸ್ ಅಧ್ಯಕ್ಷ ಮತ್ತು ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಭಾಗವಹಿಸಿದ್ದರು ಎಂದು ಕಾಂಗ್ರೆಸ್ ತಿಳಿಸಿದೆ.

**ಪ್ರತಿಪಕ್ಷಗಳ ಆಕ್ರೋಶ**

ಲೋಕಸಭೆಯಲ್ಲಿ ರಾಷ್ಟ್ರಪತಿಗಳ ಭಾಷಣಕ್ಕೆ ವಂದನಾ ನಿರ್ಣಯದ ಮೇಲಿನ ಪ್ರಧಾನ ಮಂತ್ರಿ, ನರೇಂದ್ರ ಮೋದಿಯವರ ಭಾಷಣ ರದ್ದುಗೊಳಿಸಿದ್ದಕ್ಕೆ ಸಂಸತ್ತಿನಲ್ಲಿ ಪ್ರತಿಪಕ್ಷಗಳು ತೀವ್ರ ಆಕ್ರೋಶ ವ್ಯಕ್ತಪಡಿಸಿವೆ.ಈ ವಿಚಾರವಾಗಿ ಭಾರೀ ಗದ್ದಲ, ಕೋಲಾಹಲ ಉಂಟಾಗಿದ್ದರಿಂದ ಸ್ಪೀಕರ್ ಓಂ ಬಿರ್ಲಾ ಕಲಾಪವನ್ನು ಮಧ್ಯಾಹ್ನ 2 ಗಂಟೆಗೆ ಮುಂದೂಡಿದರು. ಕೇಂದ್ರ ಸರ್ಕಾರದ ನಡೆಯನ್ನು ಕಾಂಗ್ರೆಸ್ ಮುಖಂಡ ಮಲ್ಲಿಕಾರ್ಜುನ ಖರ್ಗೆ ಖಂಡಿಸಿದ್ದಾರೆ. ಗದ್ದಲ ನೆಪ ಹೇಳಿ ಪ್ರಧಾನಿಯವರು ಭಾಷಣದಿಂದ ತಪ್ಪಿಸಿಕೊಂಡಿರುವುದು ಸದನದ ಸಂಪ್ರದಾಯಕ್ಕೆ ಮಾಡಿದ ಅವಮಾನ ಎಂದು ಕಿಡಿಕಾರಿದ್ದಾರೆ. ಲೋಕಸಭೆಯಲ್ಲಿ ಗದ್ದಲ ಉಂಟಾದ ಕಾರಣ ಪ್ರಧಾನಿ ಭಾಷಣವನ್ನು ರದ್ದುಪಡಿಸಲಾಗಿದೆ ಎಂದು ಈ ಸಂಬಂಧ ಸರ್ಕಾರ ಮಾಧ್ಯಮ ಪ್ರಕಟಣೆ ಬಿಡುಗಡೆ ಮಾಡಿದೆ.

## ಹೈಕಮಾಂಡ್ ಹೇಳಿದವರು ಸಿಎಂ ಆಗುತ್ತಾರೆ, ಅವರಿಗೆ ಜೈ ಹೇಳುತ್ತೇವೆ

• ಉದಯವಾಹಿನಿ, ಬೆಂಗಳೂರು



'ಹೈಕಮಾಂಡ್ ಹೇಳಿದವರು ಮುಖ್ಯಮಂತ್ರಿ ಆಗುತ್ತಾರೆ. ಹೈಕಮಾಂಡ್ ಯಾರನ್ನು ಆಯ್ಕೆ ಮಾಡುತ್ತದೆಯೊ ಅವರಿಗೆ ಜೈ ಹೇಳುತ್ತೇವೆ' ಎಂದು ಸಚಿವ ಸತೀಶ ಜಾರಕಿಹೊಳಿ ತಿಳಿಸಿದರು.

ಸುದ್ದಿಗಾರರ ಜೊತೆ ಗುರುವಾರ ಮಾತನಾಡಿದ ಅವರು, 'ನಾಯಕತ್ವ ಬದಲಾವಣೆ, ಸಂಪುಟ ಪುನರ್‌ರಚನೆ ಕುರಿತ ಗೊಂದಲವನ್ನು ಹೈಕಮಾಂಡ್ ಆದಷ್ಟು ಬೇಗ ಪರಿಹರಿಸಬೇಕು' ಎಂದರು. 'ಸತೀಶ ಜಾರಕಿಹೊಳಿ ಮುಖ್ಯಮಂತ್ರಿ ಆಗಬೇಕು' ಎಂಬ ಬೇಡಿಕೆಯ ಕುರಿತು ಪ್ರತಿಕ್ರಿಯಿಸಿ, 'ಈ ರೀತಿ ನಾನು ಬೇಡಿಕೆ ಇಟ್ಟಿಲ್ಲ. ಸಚಿವನಾಗಿ ಎರಡು ವರ್ಷ ಕೆಲಸ ಮಾಡುತ್ತೇನೆ. ಮುಂದೆ ನೋಡೋಣ' ಎಂದರು. 'ಕೆಪಿಸಿಸಿ ಅಧ್ಯಕ್ಷ ಹುದ್ದೆಯ ರೇಸ್‌ನಲ್ಲಿಯೂ ನಾನು ಇಲ್ಲ. ನಾಯಕತ್ವ ಬದಲಾವಣೆ ವಿಚಾರದಲ್ಲಿ ಗೊಂದಲ ನಿಜ. ಆದಷ್ಟು ಬೇಗ ಹೈಕಮಾಂಡ್ ಇದಕ್ಕೆ ಇತಿಶ್ರೀ ಹೇಳಬೇಕು ಎಂಬುದು ನಮ್ಮ ಆಶಯ' ಎಂದರು. ಲೋಕೋಪಯೋಗಿ ಇಲಾಖೆಯಿಂದಲೂ ಅವರಿಗೆ ಬಿಲ್ ಕೊಡಬೇಕು. ನಾವು ಆದ್ಯತೆ ಮೇಲೆ ಕೊಡುತ್ತಿದ್ದೇವೆ' ಎಂದರು. 'ಬಿಲ್ ಕೊಡದಿದ್ದರೆ ಕಾಮಗಾರಿ ತೆಗೆದುಕೊಳ್ಳುವುದಿಲ್ಲ' ಎಂದು ಗುತ್ತಿಗೆದಾರರು ಎಚ್ಚರಿಕೆ ನೀಡಿರುವ ಬಗ್ಗೆ ಕೇಳಿದಾಗ, 'ಕಾಮಗಾರಿ ತೆಗೆದುಕೊಳ್ಳದಿದ್ದರೆ ಅವರಿಗೇ ನಷ್ಟ. ಹೊರಗಿನವರು ಟೆಂಡರ್‌ನಲ್ಲಿ ಭಾಗವಹಿಸಿದರೆ ಯಾರಿಗೆ ನಷ್ಟ ಹೇಳಿ' ಎಂದರು. 'ತಮ್ಮ ಸಮಸ್ಯೆಗಳನ್ನು ಹೇಳಿಕೊಳ್ಳಲು ಪರಿಶಿಷ್ಟ ಜಾತಿ, ಪಂಗಡದ ಉದ್ಯಮಿಗಳು ನನ್ನನ್ನು ಭೇಟಿ ಮಾಡಿದ್ದರು. ಅವರ ಸಮಸ್ಯೆಗಳ ಬಗ್ಗೆ ಮುಖ್ಯಮಂತ್ರಿ ಜೊತೆ ಮಾತನಾಡುತ್ತೇನೆ' ಎಂದರು.

## ಕರ್ನಾಟಕ ಮಾಹಿತಿ ಆಯೋಗ: 36,474 ಮೇಲ್ಮನವಿ ವಿಲೇವಾರಿ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಮಾಹಿತಿ ಆಯೋಗವು 2025ರ ಫೆಬ್ರುವರಿಯಿಂದ 2026ರ ಜನವರಿ ಅಂತ್ಯದವರೆಗೆ ಒಟ್ಟು 36,474 ಮೇಲ್ಮನವಿಗಳನ್ನು ವಿಲೇವಾರಿ ಮಾಡಿದೆ. ಅಧಿಕಾರಿಗಳು ಮಾಹಿತಿ ನೀಡದ, ಮಾಹಿತಿ ನಿರಾಕರಿಸಿದ. ತಪ್ಪು ಮಾಹಿತಿ ನೀಡಿದ ಸಂಬಂಧ ಪರಿಹಾರ ಕೋರಿ ಆಯೋಗಕ್ಕೆ ಸಲ್ಲಿಸಿದ್ದ ದ್ವಿತೀಯ ಮೇಲ್ಮನವಿಗಳು ಇವಾಗಿದ್ದವು. 2025ರ ಫೆಬ್ರುವರಿಯಲ್ಲಿ ಆಯೋಗದ ಮುಂದೆ ಇಂತಹ 69,471 ಅರ್ಜಿಗಳು ಇದ್ದವು. ಅವುಗಳಲ್ಲಿ ಅರ್ಧಕ್ಕೂ ಹೆಚ್ಚು ಅರ್ಜಿಗಳ ವಿಲೇವಾರಿ ಆಗಿದ್ದು, 32,997 ಅರ್ಜಿಗಳು ಬಾಕಿ ಉಳಿದಿವೆ.

2023ರಿಂದ 2025ರ ಫೆಬ್ರುವರಿವರೆಗೆ ಮೂವರು ಮಾಹಿತಿ ಆಯುಕ್ತರಷ್ಟೇ ಕಾರ್ಯನಿರ್ವಹಿಸುತ್ತಿದ್ದರು. ನಾನು ಅಧಿಕಾರ ವಹಿಸಿಕೊಂಡ ನಂತರ ಅರ್ಜಿಗಳ ತ್ವರಿತ ವಿಲೇವಾರಿಗೆ ಕ್ರಮ ತೆಗೆದುಕೊಂಡೆ. ಹೀಗಾಗಿ ಆಯೋಗದ ಮೇಲಿದ್ದ ಅರ್ಜಿಗಳ ಹೊರೆಯನ್ನು ಗಣನೀಯ ಪ್ರಮಾಣದಲ್ಲಿ ಕಡಿಮೆ ಮಾಡಲು ಸಾಧ್ಯವಾಯಿತು' ಎಂದು ರಾಜ್ಯ ಮುಖ್ಯ ಮಾಹಿತಿ ಆಯುಕ್ತ ರಾಮನ್ ಕೆ. ಅವರು ಹೇಳಿದ್ದಾರೆ. 'ಸಾರ್ವಜನಿಕರಿಗೆ ಮಾಹಿತಿ ನೀಡಬೇಕಾದುದರ ಬಗ್ಗೆ ಮಾಹಿತಿ ಅಧಿಕಾರಿಗಳಿಗೆ ಜಾಗೃತಿ ಮೂಡಿಸುವ ಸಲುವಾಗಿ 23 ಜಿಲ್ಲೆಗಳಲ್ಲಿ ಕಾರ್ಯಾಗಾರ ನಡೆಸಲಾಗಿದೆ. ಪರಿಣಾಮವಾಗಿ, ಮಾಹಿತಿ ಹಕ್ಕು ಕಾಯ್ದೆ ಅಡಿ ಸಲ್ಲಿಸಲಾಗುವ ಅರ್ಜಿಗಳಿಗೆ ಸರಿಯಾದ ಮಾಹಿತಿ ಒದಗಿಸುವ ಪ್ರಮಾಣ ಶೇ.90ರಷ್ಟಕ್ಕೆ ಏರಿಕೆಯಾಗಿದೆ' ಎಂದು ವಿವರಿಸಿದ್ದಾರೆ.

## ಮೆಟ್ರೋ ದರ ಏರಿಕೆಯಲ್ಲಿ ಕೇಂದ್ರ ಹಸ್ತಕ್ಷೇಪ ಇಲ್ಲ

• ಉದಯವಾಹಿನಿ, ಬೆಂಗಳೂರು



ಮೆಟ್ರೋ ದರ ಏರಿಕೆಯನ್ನು ರಾಜ್ಯ ಸರ್ಕಾರದ ಒಂದು ಕಮಿಟಿ ಇದೆ. ಈ ಕಮಿಟಿ ಮತ್ತು ರಾಜ್ಯ ಸರ್ಕಾರ ತೀರ್ಮಾನ ಮಾಡುತ್ತದೆ. ಇದಕ್ಕೆ ಕೇಂದ್ರ ಹಸ್ತಕ್ಷೇಪ ಮಾಡುವುದಿಲ್ಲವೆಂದು ವಿಧಾನಸಭೆ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣ ಸ್ವಾಮಿ ಸ್ಪಷ್ಟಪಡಿಸಿದರು. ಮೆಟ್ರೋ ದರ ಏರಿಕೆ ಕುರಿತಾಗಿ ಕೇಳಿಬರುತ್ತಿರುವ ಆರೋಪಗಳಿಗೆ ಈ ರೀತಿಯಾಗಿ ಪ್ರತಿಕ್ರಿಯೆ ನೀಡಿದರು. ಮೆಟ್ರೋ ನಷ್ಟದಲ್ಲಿ ನಡೀತಿದೆ ಇದು ಬೆಲೆ ಏರಿಕೆ ಮಾಡುವುದಾಗಿ ಹೇಳಿದ್ದಾರೆ. ರಾಜ್ಯ ಸರ್ಕಾರವು ಏನು ಕಾರಣ ಕೊಡುತ್ತದೆಯೋ ನೋಡಿ ನಂತರದಲ್ಲಿ ಸಾಧಕ ಬಾಧಕಗಳನ್ನು ನೋಡಿ ಮಾತನಾಡುವುದಾಗಿ ಹೇಳಿದರು.

ಅಬಕಾರಿ ಇಲಾಖೆ ಬಗ್ಗೆಯ ಮಾತನಾಡುತ್ತಾ ನಮ್ಮ ಮುಖಂಡರ ಜೊತೆ ಕುಳಿತು ಇವತ್ತು ಇಲ್ಲ ನಾಳೆ ಮಾತನಾಡುತ್ತೇವೆ. ಇದು ದೊಡ್ಡ ಹೋರಾಟವನ್ನು ತಿಮ್ಮಪ್ಪರವರು ಸರ್ಕಾರಕ್ಕೆ ಪ್ರೆಸ್ಟೀಜ್ ಆಗಿ ತೆಗೆದುಕೊಂಡಿದ್ದಾರೆ. ಯಾರು ಏನಾದರೂ ಮಾಡಿಕೊಳ್ಳಲಿ ಎಂಬ ಧೋರಣೆ ಹೊಂದಿದ್ದಾರೆ. ನಾವು ಹೀಗೆ ಮಾಡೋದು ಎನ್ನುವ ಧೋರಣೆಯಲ್ಲಿದ್ದಾರೆ, ಇದನ್ನು ಇನ್ನೊಂದು ವಾರದಲ್ಲಿ ಯಾವ ರೀತಿ ಹೋರಾಟ ಮಾಡಬೇಕೆಂಬ ತೀರ್ಮಾನಕ್ಕೆ ಬರುತ್ತೇವೆ ಎಂದು ಹೇಳಿದರು. ಆದರೆ ಕಾಂಗ್ರೆಸ್‌ನವರು ಗಾಂಧೀಜಿಯವರ ಹೆಸರಿಗೆ ತಿಲಾಂಜಲಿ ಇಟ್ಟು ನೆಹರೂ ಹೆಸರನ್ನು ತಂದು ಜೋಡಿಸಿದ್ದರು, ಇವರ ಉದ್ದೇಶ ಕೇವಲ ಲೂಟಿ ಮಾಡುವುದಾಗಿತ್ತು, ಸರಿಯಾದ ಕೂಲಿಯು ಕೊಡದೇ ಗ್ರಾಮಗಳ ಕೆಲಸವು ಆಗದೇ ಕೇವಲ ಲೂಟಿ ಮಾಡುವುದಾಗಿತ್ತು, ಆದ್ದರಿಂದ ಪ್ರಧಾನ ಮಂತ್ರಿಯವರು ಸದರಿ ಯೋಜನೆಯ ಹೆಸರನ್ನು ''ವಿಕಸಿತ ಭಾರತ ಗ್ರಾಮೀಣ ರೋಜಗಾರ್ ಆಜೀವಿಕ ಮಿಷನ್'' ಎಂಬ ಹೆಸರಿಟ್ಟಿತು. ಇದನ್ನು ಕೂಡಿಸಿ ವಿಬಿ-ಜಿ-ರಾಮ್-ಜಿ ಎಂದಾಯಿತು, ಇಲ್ಲಿ ರಾಮೋದ್ಭವವಾಯಿತು, ರಾಮನ ಹೆಸರು ಬಂದ ಮೇಲೆ ಕಾಂಗ್ರೆಸ್‌ನವರಿಗೆ ಬೆಂಕಿ ಬಿದ್ದಂತಾಗಿದೆ ಎಂದು ಕಿಡಿಕಾರಿದರು. ಕೂತಲ್ಲಿಯೇ ಅವರು ಜರಕು ಹೊಡೆಯುತ್ತಿದ್ದಾರೆ, ರಾಮ ಬಂದು ಬಿಟ್ಟಿದ್ದಾನೆ ಎಂಬ ಭಯ, ಅವರಿಗೆ ರಾಮ ಬೇಕಿಲ್ಲ ಕಾರಣ ಕಾಂಗ್ರೆಸ್‌ನವರು ಹಿಂದು ವಿರೋಧಿಗಳು, ಈ ಯೋಜನೆಗೆ ಬೇಕಾದಷ್ಟು ಹೆಸರುಗಳಿದ್ದವು.



2009 ರಲ್ಲಿ ಮಹಾತ್ಮ ಗಾಂಧಿಯನ್ನು ಜೋಡಿಸಿದರು ಇವರೇನೇ ಮಾಡಿದರೂ ಒಂದಿಂಚೂ ಬದಲಾವಣೆಯಾಗುವುದಿಲ್ಲ ಎಂದರು. ನಾವು ಯಾರ ಹೆಸರನ್ನೂ ತಂದು ಜೋಡಿಸಿಲ್ಲ, ಈ ಯೋಜನೆಯ ಹೆಸರನ್ನು ಸೇರಿಸಿದಾಗ ಇಲ್ಲಿ ರಾಮ ಬಂದಿದ್ದಾನೆ ಎಂಬುದಷ್ಟೇ ಇವರ ಭಯ. ಕಾಂಗ್ರೆಸ್‌ನವರ ರಾಷ್ಟ್ರೀಯ ವಿರೋಧ ಪಕ್ಷದ ನಾಯಕರನ್ನು ಖುಷಿಪಡಿಸುವ ಸಲುವಾಗಿ ಇವರು ವಿಶೇಷ ಅಧಿವೇಶನ ಕರೆದು ಬೇಕಾದ ನಾಟಕ ಮಾಡಿದರು. ಇದು ಯಾವುದೇ ವಿಶೇಷ ಅಧಿವೇಶನದಿಂದ ಜನರಿಗೆ ಯಾವುದೇ ಉಪಯೋಗವಾಗಲಿಲ್ಲ, ಬದಲಾಗಿ ಜನರ ತೆರಿಗೆ ಹಣ ಪೋಲಾಯಿತು ಅಷ್ಟೆ ಎಂದು ವಾಗ್ದಾಳಿ ನಡೆಸಿದರು.

**ಅಧಿವೇಶನ ಕರೆದಿದ್ದು ಏಕೆ?**

ರಾಜ್ಯ ಸರ್ಕಾರದಿಂದ ವಿಶೇಷ ಅಧಿವೇಶನ ಕರೆದಿದ್ದರು, ರಾಜ್ಯದ ಜನರಿಗೆ ಕಾರಣ ಗೊತ್ತಿರಲಿಲ್ಲ, ಕಾರಣವನ್ನು ನಾವು ಹೇಳಬೇಕಿದೆ, ಕೇಂದ್ರ ಸರ್ಕಾರ ನರೇಗ ಎಂಬ ಕಾರ್ಯಕ್ರಮವನ್ನುಕೊಟ್ಟಿತ್ತು, ಗ್ರಾಮೀಣ ಜನರಿಗೆ 100 ದಿನಗಳ ಕೂಲಿ ಕೆಲಸವನ್ನು ನೀಡುವ ಬಗ್ಗೆ, ನರೇಗ ಯೋಜನೆಯಡಿ ಇಲ್ಲಿಯವರೆಗೆ ಯಂತ್ರಗಳ ಮೂಲಕ ಕೆಲಸ ಮಾಡಿಸುವುದು ಜನರ ಪಟ್ಟಿ ಕೊಡುವುದು ಲಕ್ಷಾಂತರ ದುಡ್ಡನ್ನು ಹೊಡೆಯುವ ಸ್ಕೀಂ ಆಗಿತ್ತು, ಗಾಂಧೀಜಿಯವರ ಹೆಸರನ್ನು ಇಟ್ಟು ಈ ವಿಷಯ ಮೋದೀಜಿಯವರ ಗಮನಕ್ಕೆ ಬಂದಿತ್ತು, ವಿಶೇಷವಾಗಿ ಮಹಿಳೆಯರಿಗೆ, ಪರಿಶಿಷ್ಟ ಜಾತಿ ಮತ್ತು ವಿಕಲ ಚೇತನರಿಗೆ ಕೆಲಸ ಕೊಟ್ಟು ಅವರ ಜೀವನಕ್ಕೆ ಸಹಾಯ ಮಾಡುವುದಾಗಿತ್ತು ಎಂದರು.

# ರಾಗಿ ಕಳ್ಳ, ಕೊಬ್ಬರಿ ಕಳ್ಳ ಅಂತ ಬಿಜೆಪಿಗರು ಕುಣಿದ್ರು! ನನ್ನನ್ನು ಟಾರ್ಗೆಟ್ ಮಾಡಲಾಗ್ತಿದೆ

• ಶಿವಲಿಂಗೇಗೌಡ ಹೇಳಿಕೆ ಕುರಿತಾಗಿ ಬಿಸಿ ಬಿಸಿ ಚರ್ಚೆ • ತಮ್ಮ ಹೇಳಿಕೆಗೆ ಸ್ಪಷ್ಟನೆ ನೀಡಿದ ಕಾಂಗ್ರೆಸ್ ಶಾಸಕ


• ಉದಯವಾಹಿನಿ, ಬೆಂಗಳೂರು

ವಿಧಾನಸಭೆಯಲ್ಲಿ ಕಾಂಗ್ರೆಸ್ ಶಾಸಕ ಶಿವಲಿಂಗೇಗೌಡ ತಮ್ಮ ಭಾಷಣದ ಸಂದರ್ಭದಲ್ಲಿ ಮಾಡಿದ ಪದ ಪ್ರಯೋಗ ಭಾರೀ ಚರ್ಚೆಗೆ ಒಳಗಾಗುತ್ತಿವೆ. ಕಡತದಿಂದ ಈ ಪದಗಳನ್ನು ತೆಗೆದು ಹಾಕಲಾಗಿದ್ದರೂ ಇದೀಗ ಅಧಿವೇಶನ ಮುಗಿದ ಬಳಿಕವೂ ಅದು ಚರ್ಚೆಗೆ ಒಳಗಾಗುತ್ತಿದೆ.

**ಸತ್ಯ ಮಾಡಿ ಪ್ರಮಾಣ ಮಾಡಿ ಬಂದಿದ್ದೆ**

ಈ ನಡುವೆ ಶಿವಲಿಂಗೇಗೌಡ ಅವರು ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ಕರೆದು ಈ ಬಗ್ಗೆ ಸ್ಪಷ್ಟನೆಯನ್ನು ನೀಡಿದ್ದಾರೆ. ಸದನದಲ್ಲಿ ಅಹಿತಕರ ಘಟನೆ ನಡೆದಿದೆ. ಬಿಜೆಪಿ ವಿರೋಧ ಪಕ್ಷವಾಗಿ ಹೋರಾಟ ಮಾಡಲಿ. ಅದು ಅವರ ಹಕ್ಕು, ಅದಕ್ಕೆ ನಾನು ವಿರೋಧ ಮಾಡುವುದಿಲ್ಲ. ಸದನದೊಳಗೆ ನನಗೆ ಮಾತನಾಡಲು ಅವಕಾಶ ಕೊಟ್ಟಿದ್ದರು. ಅದೇ ಸಂದರ್ಭದಲ್ಲಿ ಅಬಕಾರಿ ಸಚಿವರಿಗೆ ರಾಜೀನಾಮೆ ನೀಡುವಂತೆ ಬಿಜೆಪಿ ಸದಸ್ಯರು ಪ್ರತಿಭಟನೆ ನಡೆಸುತ್ತಿದ್ದರು. ಈ ವೇಳೆ ನನ್ನ ವಿರೋಧವಾಗಿ ಹೇಳಿಕೆ ನೀಡುವ ಕೆಲಸ ಮಾಡಲಾಗಿದೆ.

ಆದರೆ ನನ್ನ ಹೇಳಿಕೆ ಈಗಾಗಲೇ ಎಲ್ಲೆಡೆ ಹರಿದಾಡುತ್ತಿದೆ. ಆದರೆ ನನ್ನ ಬಗ್ಗೆ ಬಿಜೆಪಿ ಸದಸ್ಯರು ನೀಡಿರುವ ಹೇಳಿಕೆಗಳು ಜನರಿಗೆ ತಲುಪಿಲ್ಲ. ನನ್ನ ಸಹಕಾರಕ್ಕೆ ನಮ್ಮ ಶಾಸಕರು ಬಂದ್ರು. ಅಲ್ಲದೇ ಸ್ಪೀಕರ್ ಅವರು ಕೂಡ ಆಕ್ರೋಶಗೊಂಡು ಮಾತಾಡಿದ್ದಾರೆ ಎಂದು ಹೇಳಿದ್ರು. ಹಲವು ಬಾರಿ ನಾನು ಆಯ್ಕೆಯಾಗಿದ್ದೇನೆ, ಸದನದಲ್ಲಿ ಮಾತಾಡಿದ್ದೇನೆ.



**ರಾಗಿ ಕಳ್ಳ, ಕೊಬ್ಬರಿ ಕಳ್ಳ ಅಂತ ತಕ ತಕ ಕುಣಿದ್ರು!**


ನಾನು ವಿಧಾನಸಭೆಯಲ್ಲಿ ಭಾಷಣ ಮಾಡುತ್ತಿದ್ದ ಸಂದರ್ಭದಲ್ಲಿ ರಾಗಿ ಕಳ್ಳ, ಕೊಬ್ಬರಿ ಕಳ್ಳ ಅಂತ ತಕ ತಕ ಕುಣಿದ್ರು. ಆದರೆ ಅವರು ಆಡಿದ ಮಾತುಗಳ ಬಗ್ಗೆ ಚರ್ಚೆ ಆಗಿಲ್ಲ. ಬದಲಾಗಿ, ನನ್ನ ಮಾತುಗಳು ಮಾತ್ರ ಪ್ರಚಾರ ಆಗಿದೆ. ಹೀಗಾಗಿ ನನಗೆ ನ್ಯಾಯ ಸಿಗಬೇಕು ಎಂದು ಆಗ್ರಹಿಸಿದರು. ಆರ್ ಬಿ ತಿಮ್ಮಾಪೂರ ಟಾರ್ಗೆಟ್ ಇದ್ದಿದ್ರೆ ಅವರ ಬಗ್ಗೆ ಹೇಳಬೇಕಿತ್ತು. ಅದು ಬಿಟ್ಟು ನನ್ನ ವೈಯಕ್ತಿಕ ಬದುಕಿಗೆ ಕೈ ಯಾಕೆ ಹಾಕಿದ್ದಾರೆ? ಸದನದ ಬಾವಿಯಲ್ಲಿ ಇದ್ದಾಗ ನನ್ನನ್ನು ಟಾರ್ಗೆಟ್ ಮಾಡಿ ಅಶ್ಲೀಲ ಪದ ಬಳಕೆ ಮಾಡಿದ್ದು ಯಾಕೆ? ಕೂಗಿದ್ದು ಸತ್ಯ ಅಂತ ಬಿಜೆಪಿ ಹೇಳಲ್ಲ, ಅಧಿಕಾರಿಗಳು ಹೇಳಲ್ಲ. ನನ್ನ ಬಗ್ಗೆ ಕೂಗದೇ ಇದ್ದಿದ್ದರೆ ನಾನೇಕೆ ಮಾತಾಡುತ್ತಿದ್ದೆ? ಎಂದು ಪ್ರಶ್ನಿಸಿದರು.

ಆದರೆ ಪ್ರತಿ ಬಾರಿ ನನ್ನ ಟಾರ್ಗೆಟ್ ಮಾಡುವ ಕೆಲಸ ಆಗ್ತಿದೆ ಎಂದು ಆರೋಪಿಸಿದ್ದಾರೆ. ಬಿಜೆಪಿ ಸದಸ್ಯರಾದ ವೇದವ್ಯಾಸ್ ಕಾಮತ್, ಶರಣು ಸಲಗಾರ, ಸುರೇಶ್ ಅವರು ನನ್ನ ವಿರುದ್ಧ ಹೇಳಿಕೆ ನೀಡಿದ್ರು. ಯಾಕೆ ನನ್ನನ್ನು ಟಾರ್ಗೆಟ್ ಮಾಡ್ತಿದ್ದಾರೆ ಎಂದು ಕೇಳಿದ್ದೆ. ಕೆಲವು ಸೂಚನೆ ಇದೆ ಎಂದು ಕೂಡ ಹೇಳಿದ್ರು. ಹೀಗಾಗಿ ಯಾರು ಅವರಿಗೆ ಸೂಚನೆ ನೀಡಿದ್ದಾರೆ ಗೊತ್ತಿಲ್ಲ. ನನ್ನ ಭಾಷಣ ಮಾಡಲು ಆರಂಭಿಸಿದಾಗಲೇ ವಿರೋಧ ಮಾಡಿದ್ರು ಒನ್ ಸೈಡ್ ನಾನು ಮಾತಾಡಿದ್ದು ಹೋಗಿದೆ. ಆದರೆ ನಾನು ಯಾಕೆ ಹಾಗೆ ಮಾತಾಡಿದೆ ಅನ್ನೋದು ಹೋಗಿಲ್ಲ. ಸದನದಲ್ಲಿ ನಾನು ಮಾತನಾಡಿದ್ದು, ಅವರು ಮಾತಾಡಿದ್ದರ ಬಗ್ಗೆ ಆಡಿಯೋ ದಾಖಲಾತಿ ಕೇಳಿದ್ದೇನೆ. ಅದು ಸಿಕ್ಕ ಮೇಲೆ ಮತ್ತೊಮ್ಮೆ ಸುದ್ದಿಗೋಷ್ಠಿ ಮಾಡುತ್ತೇನೆ ಎಂದು ವಿವರಣೆ ನೀಡಿದರು.

ಕೊಬ್ಬರಿ ಕಳ್ಳ, ರಾಗಿ ಕಳ್ಳ ಅಂತ ಹಿಂದೆ ರವಿ ಕುಮಾರ್ ನನಗೆ ಬೈದಿದ್ದರು. ನಾನು ಸವಾಲ್ ಹಾಕಿದ್ದೆ, ಧರ್ಮಸ್ಥಳಕ್ಕೆ ಬನ್ನಿ ಅಂತ ಸವಾಲ್ ಹಾಕಿದ್ದೆ. ಸತ್ಯ ಮಾಡಿ ಪ್ರಮಾಣ ಮಾಡಿ ಬಂದಿದ್ದೆ, ಆದ್ರೆ ಅವರು ಯಾರು ಬರಲಿಲ್ಲ. ಆದರೆ ಇದೀಗ ಮತ್ತೊಮ್ಮೆ ನನ್ನನ್ನು ಟಾರ್ಗೆಟ್ ಮಾಡಲಾಗುತ್ತಿದೆ ಎಂದು ಆರೋಪಿಸಿದರು.

**ಈ ದಿನದ ದರ** ಪೆಟ್ರೋಲ್: 102.92 ₹/L ಡೀಸೆಲ್ : 91.67 ₹/L ಬಂಗಾರ: ₹15,442/Gram24ct ₹14,155/Gram22ct ಬೆಳ್ಳಿ: ₹300.00/Gram

## ಮಾನಸಿಕ ಆರೋಗ್ಯವು ಒಟ್ಟಾರೆ ಆರೋಗ್ಯದ ಅವಿಭಾಜ್ಯ ಅಂಗ





• ಉದಯವಾಹಿನಿ, ಬೆಂಗಳೂರು

ಮಾನಸಿಕ ಆರೋಗ್ಯವು ಒಟ್ಟಾರೆ ಆರೋಗ್ಯದ ಅವಿಭಾಜ್ಯ ಅಂಗವಾಗಿದೆ ಮತ್ತು ಆರಂಭಿಕ ಗುರುತಿಸುವಿಕೆಯಿಂದ ಸಮಸ್ಯೆಗೆ ಪರಿಹಾರವಿದೆ ಎಂದು ಶಾಸಕಿ ಮಂಜುಳಾ ಲಿಂಬಾವಳಿ ತಿಳಿಸಿದರು. ಮಹದೇವಪುರ ಕ್ಷೇತ್ರದ ದೊಡ್ಡನೆಕುಂಡಿಯ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಮೆಂಟಲ್ ಹೆಲ್ತ್ ಆಕ್ಷನ್ ಟ್ರಸ್ಟ್, ರೋಟರಿ ಬೆಂಗಳೂರು ಐಟಿ ಕಾರಿಡಾರ್ ಸಹಯೋಗ ದೊಂದಿಗೆ ಮನೋಬಲ ಮಾನಸಿಕ ಸ್ವಾಸ್ಥ್ಯ ಚಿಕಿತ್ಸಾಲಯವನ್ನು ಉದ್ಘಾಟಿಸಿ ಮತನಾಡಿದ ಅವರು, ಸಮಯೋಚಿತ ಹಸ್ತಕ್ಷೇಪವು ವ್ಯಕ್ತಿಗಳು, ಕುಟುಂಬಗಳ ಮೇಲಿನ ಮಾನಸಿಕ ಅಸ್ವಸ್ಥತೆಯ ಹೊರೆಯನ್ನು ಗಮನಾರ್ಹವಾಗಿ ಕಡಿಮೆ ಮಾಡುತ್ತದೆ ಎಂದು ಒತ್ತಿ ಹೇಳಿದರು.

ಈ ಚಿಕಿತ್ಸಾಲಯವು ಪ್ರತಿ ಮಂಗಳವಾರ ಬೆಳಿಗ್ಗೆ 9:30 ರಿಂದ ಸಂಜೆ 4:00 ರವರೆಗೆ ದೊಡ್ಡನೆಕುಂದಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕಾರ್ಯ ನಿರ್ವಹಿಸಲಿದ್ದು, ಸಮಾಲೋಚನೆ, ಮೌಲ್ಯಮಾಪನ, ಸಮಾಲೋಚನೆ, ಉಲ್ಲೇಖ ಸೇವೆಗಳನ್ನು ನೀಡುತ್ತದೆ ಸಾರ್ವಜನಿಕರು ಇದರ ಸದ್ಬಳಕೆ ಮಾಡಿಕೊಳ್ಳುವಂತೆ ಮನವಿ ಮಾಡಿದರು. ರೋಟರಿ ಬೆಂಗಳೂರು ಐಟಿ ಕಾರಿಡಾರ್‌ನ ಅಧ್ಯಕ್ಷ ಶ್ರೀರಂಗ ಉದಯ್ ತಾಂಬೆ, ರೋಟರಿ ಸದಸ್ಯರು, ಮಾನಸಿಕ ಆರೋಗ್ಯ ಕ್ರಿಯಾ ಟ್ರಸ್ಟ್‌ನ ಡಾ. ಮಿನಿ ಚುಲ್ಲಿಯಿಲ್, ಪಿಎಚ್‌ಸಿ ದೊಡ್ಡನೆಕುಂದಿಯ ವೈದ್ಯಕೀಯಾಧಿಕಾರಿ ಡಾ. ಪ್ರಮೀಳಾ, ಕ್ಷೇತ್ರಾಧ್ಯಕ್ಷ ಶ್ರೀಧರ್ ರೆಡ್ಡಿ ಉಪಸ್ಥಿತರಿದ್ದರು.

## ಹೆಚ್‌ಎಎಲ್ ಅಧ್ಯಕ್ಷರಾಗಿ ಕೋಟಾ ರವಿ ನೇಮಕ

• ಉದಯವಾಹಿನಿ, ಬೆಂಗಳೂರು



ದೇಶದ ನವರತ್ನ ಸಂಸ್ಥೆಗಳಲ್ಲಿ ಒಂದಾದ ರಕ್ಷಣಾ ಇಲಾಖೆಯ ಪ್ರತಿಷ್ಠಿತ ಹೆಚ್‌ಎಎಲ್‌ನ ನೂತನ ಅಧ್ಯಕ್ಷ ಹಾಗೂ ವ್ಯವಸ್ಥಾಪಕ ನಿರ್ದೇಶಕರಾಗಿ ಕನ್ನಡಿಗ ಕೋಟಾ ರವಿ ಅವರು ಆಯ್ಕೆಯಾಗಿದ್ದಾರೆ. ಕಾರ್ಯಾಚರಣೆ ವಿಭಾಗದ ನಿರ್ದೇಶಕರಾಗಿರುವ ಇವರು ಮುಂದಿನ ಏಪ್ರಿಲ್‌ನಿಂದ ಹೊಸ ಜವಾಬ್ದಾರಿ ವಹಿಸಿಕೊಳ್ಳಲಿದ್ದಾರೆ.


ದೇಶದ ಪ್ರಮುಖ ವಿಮಾನಯಾನ ಸಂಸ್ಥೆಯಾದ ಹೆಚ್‌ಎಎಲ್‌ನ ನೂತನ ಅಧ್ಯಕ್ಷರನ್ನಾಗಿ ನೇಮಿಸಲು ಪಿಇಎಸ್‌ಬಿ ಶಿಫಾರಸು ಮಾಡಿದೆ. ವೈಮಾನಿಕ, ರಕ್ಷಣಾ ಉಪಕರಣಗಳು, ಅತ್ಯಾಧುನಿಕ ಸಾಧನಗಳ ಪರೀಕ್ಷೆ, ಸಂಶೋಧನಾ ವಲಯಗಳಲ್ಲಿ ಸೇವೆ ಸಲ್ಲಿಸಿರುವ ಇವರು ಅಪಾರ ಪರಿಣತಿ ಹೊಂದಿದ್ದಾರೆ. ಪ್ರಸ್ತುತ ಹೆಚ್‌ಎಎಲ್ ಆರಂಭಿಸುತ್ತಿರುವ ರೋಟೋ ಕ್ರಾಫ್ಟ್, ಯುದ್ಧ ವಿಮಾನಗಳು, ಡ್ರೋನ್ ಸೇರಿದಂತೆ ಹಲವು ಮಹತ್ವದ ಯೋಜನೆಗಳನ್ನು ಮುನ್ನಡೆಸುವ ಜವಾಬ್ದಾರಿಯನ್ನು ಕೋಟಾ ರವಿ ಅವರು ವಹಿಸಲಿದ್ದಾರೆ.ಪ್ರತಿಷ್ಠಿತ ಹೆಚ್‌ಎಎಲ್ ಸಂಸ್ಥೆಗೆ ಕರ್ನಾಟಕದ ಕೋಟಾ ರವಿ ಅವರು ನೇಮಕವಾಗಿರುವುದು ರಾಜ್ಯ ಹಾಗೂ ಕನ್ನಡಿಗರಿಗೆ ಹೆಮ್ಮೆಯ ವಿಷಯವಾಗಿದೆ.

## ಕೂಡಲೇ ಕಬ್ಬು ಬೆಳೆಗಾರರ ಬಾಕಿ ಹಣ ಬಿಡುಗಡೆ ಮಾಡಿ : ಅಶೋಕ್

• ಉದಯವಾಹಿನಿ, ಬೆಂಗಳೂರು

ಈ ಕೂಡಲೇ ಕಬ್ಬು ಬೆಳೆಗಾರರ ಬಾಕಿ ಹಣ ಬಿಡುಗಡೆ ಮಾಡುವಂತೆ ಸಕ್ಕರೆ ಕಾರ್ಖಾನೆಗಳಿಗೆ ಸೂಚನೆ ನೀಡಿ ರೈತರ ನೆರವಿಗೆ ಬನ್ನಿ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್ ಅಶೋಕ್ ಸರ್ಕಾರವನ್ನು ಒತ್ತಾಯಿಸಿದ್ದಾರೆ.ತಮ್ಮ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಬೆಳಗಾವಿ, ಬಾಗಲಕೋಟೆ, ವಿಜಯಪುರ, ಕಲಬುರಗಿ, ಬೀದರ್ ಜಿಲ್ಲೆಗಳ ಸಕ್ಕರೆ ಕಾರ್ಖಾನೆಗಳು ಕಬ್ಬು ಪೂರೈಸಿದ ರೈತರಿಗೆ 4,674 ಕೋಟಿ ರೂಪಾಯಿ ಬಾಕಿ ಉಳಿಸಿಕೊಂಡಿದ್ದು, ರೈತರ ಸಂಕಷ್ಟ ಕೇಳಲು ರಾಜ್ಯದಲ್ಲಿ ಸರ್ಕಾರವೇ ಇಲ್ಲದ ಪರಿಸ್ಥಿತಿ ಎದುರಾಗಿರುವುದರಿಂದ ರೈತರು ಅನಾಥರಾಗಿದ್ದಾರೆ ಎಂದು ಆಕ್ರೋಶ ಹೊರಹಾಕಿದ್ದಾರೆ. ಕಬ್ಬು ಪೂರೈಸಿದ 15 ದಿನಗಳಲ್ಲಿ ಬಿಲ್ ಮೊತ್ತ ಪಾವತಿಸಬೇಕು ಎಂಬ ಕಾಯ್ದೆ ಇದ್ದರೂ ಸಹ, ನಿಯಮವನ್ನು ಜಾರಿ ಮಾಡಲು ಕಾಂಗ್ರೆಸ್ ಸರ್ಕಾರ ಇಚ್ಛಾಶಕ್ತಿ ತೋರುತ್ತಿಲ್ಲ. ಸಿಎಂ ಸಿದ್ದರಾಮಯ್ಯ ನವರೇ, ನಾಡಿನ ರೈತರ ಬದುಕು ಸುಭದ್ರಪಡಿಸಬೇಕಾದ ತಾವು ನಿಮ್ಮ ಕುರ್ಚಿ ಭದ್ರಪಡಿಸಿಕೊಳ್ಳುವುದರಲ್ಲೇ ಕಾಲ ಕಳೆದರೆ, ನಾಡಿನ ರೈತರ ಕಷ್ಟಕ್ಕೆ ಸ್ಪಂದಿಸುವವರು ಯಾರು? ನಿಮ್ಮ ಸರ್ಕಾರ ಸತ್ತಿದೆಯೋ ಅಥವಾ ಬದುಕಿದೆಯೋ? ಎಂದು ಪ್ರಶ್ನೆ ಮಾಡಿದ್ದಾರೆ.

ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಆಸ್ಪತ್ರೆಯ ಅಧಿಕೃತ ಸ್ಕ್ಯಾನರ್ ತೆಗೆದು ಹಾಕಿ, ತಮ್ಮ ವೈಯಕ್ತಿಕ ಬ್ಯಾಂಕ್ ಖಾತೆಯ ಯುಪಿಐ ಸ್ಕ್ಯಾನರ್ ಅಳವಡಿಸಿ ಬಡರೋಗಿಗಳಿಂದ 23 ಲಕ್ಷ ರೂಪಾಯಿ ಲೂಟಿ ಮಾಡಿರುವ ಆಸ್ಪತ್ರೆಯ ಸಿಬ್ಬಂದಿಗಳು, ಕಾಂಗ್ರೆಸ್ ಸರ್ಕಾರ ನಿಜವಾದ, ಅಸಲಿ ಬಿಜೆಪಿ ಸರ್ಕಾರ ಎಂದು ಸಾಬೀತು ಮಾಡಿದ್ದಾರೆ ಎಂದು ಆರೋಪಿಸಿದ್ದಾರೆ.



ಮೂರೂ ಬಿಟ್ಟವರು ಊರಿಗೇ ದೊಡ್ಡವರು ಎನ್ನುವಂತೆ, ಮುಂದಿನ ಚುನಾವಣೆಯಲ್ಲಿ ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷ ನಿರ್ನಾಮ ಆಗಲಿದೆ ಎಂದು ಖಾತ್ರಿ ಆಗಿರುವ ಸಚಿವರು, ಶಾಸಕರು ನಿರ್ಲಜ್ಜವಾಗಿ ಎಗ್ಗಿಲ್ಲದೆ ಸಿಕ್ಕಸಿಕ್ಕ ಕಡೆ ಲೂಟಿ ಹೊಡೆಯುತ್ತಿದ್ದಾರೆ ಎಂದು ಅಶೋಕ್ ಸರ್ಕಾರದ ವಿರುದ್ಧ ಟೀಕಾ ಪ್ರಹಾರ ನಡೆಸಿದ್ದಾರೆ.

### ಪ್ರಧಾನಿ, ಗೃಹ, ರಕ್ಷಣಾ ಸಚಿವರು ನೈತಿಕ ಹೊಣೆಹೊತ್ತು ರಾಜೀನಾಮೆ ನೀಡಿ ಎಂದು ಆಗ್ರಹಿಸಿ ಪ್ರತಿಭಟನೆ


## ಸತ್ಯಾಂಶ ಬಹಿರಂಗಪಡಿಸಲು ಯತ್ನಿಸಿದ್ದರ ಬಗ್ಗೆ ಬಿಜೆಪಿ ವಿರೋಧ

• ಉದಯವಾಹಿನಿ, ಬೆಂಗಳೂರು

ಭಾರತೀಯ ರಕ್ಷಣಾ ಇಲಾಖೆಯ ಮಾಜಿ ಸೇನಾ ಮುಖ್ಯಸ್ಥ ಜನರಲ್ ಮನೋಜ್ ಮುಕುಂದ ನರವಾಣೆರವರ ಆತ್ಮ ಚರಿತ್ರೆಯ ಪುಸ್ತಕದಲ್ಲಿ ಚೀನಾ ದೇಶದಿಂದ ಭಾರತ ದೇಶಕ್ಕೆ ಆಗಿರುವ ಅಕ್ರಮ ಮಾಹಿತಿ ಕುರಿತು ಪುಸ್ತಕದ ಮೂಲಕ ಸತ್ಯಾಂಶ ಬಹಿರಂಗಪಡಿಸಲು ಯತ್ನಿಸಿದ್ದರ ಬಗ್ಗೆ ಬಿಜೆಪಿ ವಿರೋಧ ವ್ಯಕ್ತಪಡಿಸುತ್ತಿದೆ, ಮುಗ್ಧ ಹೆಣ್ಣು ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ ನಡೆಸಿ ಕೊಲೆ ಮಾಡಿರುವ ಜೆಫ್ರಿ ಎಪಿಸ್ಟೀನ್ ಫೈಲ್ಸ್‌ನಲ್ಲಿ ಪ್ರಧಾನ ಪ್ರಧಾನ ಮಂತ್ರಿ ನರೇಂದ್ರ ಮೋದಿ ಹೆಸರು ಉಲ್ಲೇಖ ಆಗಿರುವ ಹಿನ್ನೆಲೆಯಲ್ಲಿ ಕೂಡಲೇ ನೈತಿಕ ಹೊಣೆಹೊತ್ತು ಪ್ರಧಾನಿ ನರೇಂದ್ರ ಮೋದಿ ರಾಜಿನಾಮೆ ನೀಡಬೇಕು ಹಾಗೂ ಚೀನಾ ಅತಿಕ್ರಮಣದ ಬಗ್ಗೆ ರಕ್ಷಣಾ ಸಚಿವರಾದ ರಾಜನಾಥ್ ಸಿಂಗ್, ಗೃಹ ಸಚಿವರಾದ ಅಮಿತ್ ಷಾ ರಾಜೀನಾಮೆ ನೀಡಬೇಕೆಂದು ಆಗ್ರಹಿಸಿ ಪ್ರತಿಭಟನೆ ನಡೆಸಲಾಯಿತು.

**ಪ್ರತಿಯೊಬ್ಬ ಭಾರತೀಯರ ಪ್ರಶ್ನೆ**

ದೇಶದ ರಕ್ಷಣಾ ಸಚಿವರು ವಿದೇಶಾಂಗ ಸಚಿವರು ಪ್ರಧಾನ ಮಂತ್ರಿಗಳ ವೈಫಲ್ಯವನ್ನು ಅವರು ಸ್ಪಷ್ಟವಾಗಿ ಪುಸ್ತಕದಲ್ಲಿ ನಮೂದಿಸಿದ್ದಾರೆ ಇದು ದೇಶದ ಸೈನಿಕರಿಗೆ ಹಾಗೂ ದೇಶದ ನಾಗರಿಕರಿಗೆ ಕೇಂದ್ರ ಬಿಜೆಪಿ ಸರ್ಕಾರ ಮಾಡಿದ ದ್ರೋಹವಾಗಿದೆ. ಮತ್ತೊಂದೆಡೆ ವಿಶ್ವದಲ್ಲೇ ಅತಿ ಕ್ರೂರತನವನ್ನು ಪ್ರದೇಶಿಸಿರುವ ಜೆಫ್ರೀ ಎಪಿಸ್ಟೀನ್ ಎಂಬುವ ಕ್ರೂರಿಯೊಂದಿಗೆ ದೇಶದ ಪ್ರಧಾನಮಂತ್ರಿಯ ಸಂಬಂಧ ಇರುವ ಬಗ್ಗೆ ಅಮೆರಿಕ ನ್ಯಾಯಾಲಯದಲ್ಲಿ ವಿಚಾರಣೆ ನಡೆಯುತ್ತಿರುವ ವೇಳೆಯಲ್ಲಿ ಈ ಮಾಹಿತಿ ಬಹಿರಂಗವಾಗಿದೆ ಆದ್ದರಿಂದ ಇದರ ಬಗ್ಗೆ ದೇಶದ ಪ್ರಧಾನ ಮಂತ್ರಿ ಶ್ರೀ ನರೇಂದ್ರ ಮೋದಿ ಖುದ್ದಾಗಿ ಮಾಹಿತಿಯನ್ನು ನೀಡಬೇಕು ಇದರ ಹೊಣೆಯನ್ನ ನರೇಂದ್ರ ಮೋದಿ ಹೊರಬೇಕು ಸತ್ಯ ಸತ್ಯತೆಯ ಬಗ್ಗೆ ಮಾಹಿತಿಯನ್ನು ಬಹಿರಂಗಪಡಿಸಲು ನರೇಂದ್ರ ಮೋದಿ ರವರು ಮುಂದಾಗಬೇಕು. ಭಾರತ ದೇಶದ ವೀರ ಯೋಧರಿಗೆ ಮಾಡಿರುವ ಅಪಮಾನದಿಂದ ಚೀನಾ ದೇಶದ ಕುತಂತ್ರದ ಬಗ್ಗೆ, ಅತಿಕ್ರಮಣದ ಬಗ್ಗೆ ಬಿಜೆಪಿ ಸರ್ಕಾರದ ಅವಧಿಯಲ್ಲಿ ಸೇನಾ ಮುಖ್ಯಸ್ಥರಾಗಿದ್ದ ನರವಾಣೆ ರವರ ಪುಸ್ತಕವನ್ನು ಬಿಡುಗಡೆ ಮಾಡಲು ಕೇಂದ್ರ ಬಿಜೆಪಿ ಸರ್ಕಾರ ತಡೆಯುಟ್ಟುತ್ತಿರುವುದು ಏಕೆ? ಎಂಬುದು ಇಂದು ಪ್ರತಿಯೊಬ್ಬ ಭಾರತೀಯರ ಪ್ರಶ್ನೆ ಆಗಿದೆ.




ಇನ್ನು ಕ್ರೂರ ವ್ಯಕ್ತಿ ಅಮೆರಿಕದ ಜಫ್ರೀ ಎಪಿಟ್ರಿಮ್ ವಿಷಯದಲ್ಲಿ ಕೂಡಲೇ ಪ್ರಧಾನಿ ತನ್ನ ಹೇಳಿಕೆಯನ್ನು ತಿಳಿಸಬೇಕು ಇದರಿಂದ ಇಡೀ ವಿಶ್ವದಲ್ಲೇ ಭಾರತದ ಗೌರವ ಹಾಳಾಗುತ್ತಿದೆ ಇದರ ಬಗ್ಗೆ ಮೌನಕ್ಕೆ ಶರಣಾಗಿರುವ ಪ್ರಧಾನ ಮಂತ್ರಿ ನರೇಂದ್ರ ಮೋದಿ ರವರೆ ತಮ್ಮ ವಿದೇಶಿ ಪ್ರವಾಸದ ಮಾಹಿತಿಯನ್ನ ಗೋಪ್ಯವಾಗಿಟ್ಟಿದ್ದು ಯಾಕೆ ? ಹೊರ ದೇಶದಲ್ಲಿ ಇಂತಹ ಕೃತ್ಯದಲ್ಲಿ ಭಾಗಿಯಾಗಿದ್ದೀರಾ ಇಲ್ಲವಾ ಎಂಬುದನ್ನು ತಾವು ದೃಢಪಡಿಸದೆ ಹೋದರೆ ತಾವು ಭಾರತೀಯರಿಗೆ ಮಾಡಿರುವ ದ್ರೋಹವೆಂದೆ ಪರಿಗಣಿಸಬೇಕಾಗುತ್ತದೆ. ಈ ಕೂಡಲೇ ಇದರ ಬಗ್ಗೆ ಸ್ಪಷ್ಟನೆ ನೀಡಬೇಕು ಹಾಗೂ ಎರಡು ಪ್ರಕರಣಗಳಲ್ಲಿ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಿ ತೊಲಗಬೇಕೆಂದು ಆಗ್ರಹಿಸಿ ಪ್ರತಿಭಟನೆ ನಡೆಸಲಾಯಿತು.

**ಗಡಿಭಾಗದಲ್ಲಿ ಅತಿಕ್ರಮ ಪ್ರವೇಶ**

**ಇಡೀ ಭಾರತವೇ ಅತಿ ಕುತೂಹಲದಿಂದ ಮನೋಜ್ ಮುಖ್ನಂದು ನರವಾಣೆರವರ ಮಾಹಿತಿಯನ್ನು ಗಮನಿಸುತ್ತಿದೆ ಸಂಸತ್‌ನಲ್ಲಿ ವಿರೋಧ ಪಕ್ಷದ ನಾಯಕರಾದ ಶ್ರೀ ರಾಹುಲ್ ಗಾಂಧಿ ರವರು ಸೇನಾ ಮಾಜಿ ಮುಖ್ಯಸ್ಥರಾದ ಮನೋಜ್ ಮುಕುಂದ ನರವಾಣೆ ರವರ ಪುಸ್ತಕದಲ್ಲಿ ನಮೂದಾಗಿರುವ ಚೀನಾ ದೇಶವು ಭಾರತದ ಗಡಿಭಾಗದಲ್ಲಿ ಅತಿಕ್ರಮ ಪ್ರವೇಶಿಸಿ ಭಾರತದ ಸೈನಿಕರನ್ನ ಕೊಂದಿರುವ ಬಗ್ಗೆ ಉಲ್ಲೇಖಿಸಿದ್ದಾರೆ.**

ಈ ಪ್ರತಿಭಟನೆಯಲ್ಲಿ ಎಂಇಐ ಅಧ್ಯಕ್ಷರು, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿಯಾದ ಎಸ್. ಮನೋಹರ್ ಕಾಂಗ್ರೆಸ್ ಮುಖಂಡರುಗಳಾದ ಎಂ.ಎ ಸಲೀಮ್, ಜಿ. ಪ್ರಕಾಶ್, ಕುಶಲ್ ಹರುವೇಗೌಡ್ರು,ಎಂ.ಎ ಆನಂದ್ ಕುಮಾರ್,ಎಸ್.ಮುರಳಿ, ಕೆ.ಟಿ. ನವೀನ್, ರಂಜಿತ್, ಪ್ರವೀಣ್ ರಾವ್,ಉಮೇಶ್, ಓಬಳೇಶ್,ಪುಟ್ಟರಾಜು, ನವೀನ್ ಸಾಯಿ, ಕಾಂಗ್ರೆಸ್ ಕಾರ್ಯಕರ್ತರು ಭಾಗವಹಿಸಿದರು.

## ಬಜೆಟ್ ಪೂರ್ವಭಾವಿ ಸಭೆ ಆರಂಭಿಸಿದ ಸಿಎಂ ಸಿದ್ದರಾಮಯ್ಯ

• ಉದಯವಾಹಿನಿ, ಬೆಂಗಳೂರು

ಸಿಎಂ ಸಿದ್ದರಾಮಯ್ಯ ಅಧಿಕೃತವಾಗಿ ಗುರುವಾರದಿಂದ ಬಜೆಟ್ ತಯಾರಿಕೆಯ ಪೂರ್ವಭಾವಿ ಸಭೆಗಳನ್ನು ಆರಂಭಿಸಿದ್ದಾರೆ. ಮಾರ್ಚ್ 6ರಂದು ವಿಧಾನಸಭೆಯಲ್ಲಿ ಸಿದ್ದರಾಮಯ್ಯ ಅವರು ತಮ್ಮ 17ನೇ ಬಜೆಟ್ ಅನ್ನು ಮಂಡಿಸಲಿದ್ದಾರೆ. ಅದಕ್ಕೆ ಪೂರ್ವ ಭಾವಿಯಾಗಿ ಇಂದಿನಿಂದ ಬಜೆಟ್ ತಯಾರಿಕೆಗೆ ಚಾಲನೆ ನೀಡಿದ್ದಾರೆ. ಅರಣ್ಯ-ಪರಿಸರ-ಜೀವಿ ಶಾಸ್ತ್ರ ಕಾನೂನು-ನ್ಯಾಯ-ಮಾನವ ಹಕ್ಕುಗಳು-ಸಂಸದೀಯ ವ್ಯವಹಾರಗಳು-ಶಾಸನ ರಚನೆ-ಪ್ರವಾಸೋದ್ಯಮ, ತೋಟಗಾರಿಕೆ-ಗಣಿ-ಭೂ ವಿಜ್ಞಾನ, ಕಾರ್ಮಿಕ, ಒಳಾಡಳಿತ, ಕನ್ನಡ-ಸಂಸ್ಕೃತಿ-ಹಿಂದುಳಿದ ವರ್ಗಗಳು, ಉನ್ನತ ಶಿಕ್ಷಣ ಸೇರಿದಂತೆ ಹಲವು ಇಲಾಖೆಗಳ ಸಚಿವರು ಹಾಗೂ ಅಧಿಕಾರಿಗಳ ಜೊತೆ ಸಿದ್ದರಾಮಯ್ಯ ಚರ್ಚೆ ನಡೆಸಿದ್ದಾರೆ. ಆಯಾ ಇಲಾಖೆಗಳಿಂದ 2026- 27ನೇ ಸಾಲಿಗೆ ಘೋಷಿಸಬೇಕಾದ ಹೊಸ ಯೋಜನೆಗಳ ಪ್ರಸ್ತಾವನೆಗಳನ್ನು ಸ್ವೀಕರಿಸಲಾಗಿದೆ. ಹಿಂದಿನ ಬಜೆಟ್ಟಿನಲ್ಲಿ ಘೋಷಿಸಲಾದ, ಅನುದಾನ, ಬಿಡುಗಡೆಯಾಗಿರುವುದು, ಮತ್ತು ವೆಚ್ಚವಾಗಿರುವ ಹಣದ ಬಗ್ಗೆ ಮುಖ್ಯಮಂತ್ರಿ ಮಾಹಿತಿ ಪಡೆದುಕೊಂಡಿದ್ದಾರೆ.

ಕಾಂಗ್ರೆಸ್ ಪಕ್ಷದ ಚುನಾವಣಾ ಪ್ರಣಾಳಿಕೆಯಲ್ಲಿನ ಭರವಸೆಗಳು, ಬಜೆಟ್‌ನಲ್ಲಿ ಅವುಗಳ ಘೋಷಣೆ, ಅನುಷ್ಠಾನಕ್ಕೆ ಸಂಬಂಧಪಟ್ಟಂತೆ ಚರ್ಚಿಸಲಾಗಿದೆ.ಬಜೆಟಿನಲ್ಲಿ ಈ ಮೊದಲು ಘೋಷಿಸಲಾದ ಯೋಜನೆಗಳ ಕಾರ್ಯಾನುಷ್ಠಾನದ ಬಗ್ಗೆಯೂ ಚರ್ಚೆಯಾಗಿದೆ. ಬಜೆಟ್ ಕಾರ್ಯಕ್ರಮಗಳನ್ನು ಗಂಭೀರವಾಗಿ ತೆಗೆದುಕೊಳ್ಳಬೇಕು. ಅಧಿಕಾರಿಗಳು ಅದನ್ನು ಬಜೆಟ್ ಅಂಗೀಕಾರಗೊಂಡ ಎರಡು ತಿಂಗಳ ಒಳಗಾಗಿ ಕಾರ್ಯಾದೇಶಗಳನ್ನು ಹೊರಡಿಸಬೇಕು ಎಂದು ಸೂಚಿಸಲಾಗಿದೆ.



## ಸಿಜೆ ರಾಯ್ ಮೊಬೈಲ್ ಕರೆಗಳ ಬೆನ್ನತ್ತಿದ ಎಸ್‌ಐಟಿ

• ಉದಯವಾಹಿನಿ, ಬೆಂಗಳೂರು

ಕಾನ್ಫಿಡೆಂಟ್ ಗ್ರೂಪ್ ಮುಖ್ಯಸ್ಥ ಸಿಜೆ ರಾಯ್ ಆತಹತ್ಯೆ ಮಾಡಿಕೊಂಡು ಒಂದುವಾರ ಸಮೀಪಿಸುತ್ತಿದ್ದರೂ ಅವರ ಆತಹತ್ಯೆಗೆ ನಿಖರ ಕಾರಣ ಮಾತ್ರ ಇನ್ನೂ ನಿಗೂಢವಾಗಿದೆ. ಈ ಬಗ್ಗೆ ತನಿಖೆಗಾಗಿ ರಚಿಸಲಾಗಿರುವ ಎಸ್‌ಐಟಿ ಪೊಲೀಸರು ಅವರ ಮೊಬೈಲ್ ಕರೆಗಳ ವಿವರ (ಸಿಡಿಆರ್) ಗಳನ್ನು ವಿಶ್ಲೇಷಿಸುತ್ತಿದ್ದಾರೆ. ರಾಯ್ ಅವರು ಆತಹತ್ಯೆ ಮಾಡಿಕೊಂಡ ದಿನ ಯಾರ್ಯಾರಿಗೆ ಕರೆ ಮಾಡಿದ್ದಾರೆ. ಮತ್ತು ಕೊನೆಯ ಎರಡು ಕರೆಗಳು ಯಾವುವು. ಆ ಎರಡು ಕರೆಗಳನ್ನೇ ಎಸ್‌ಐಟಿ ಗಂಭೀರವಾಗಿ ಪರಿಗಣಿಸಿ ಸಿಡಿಆರ್‌ಗಳಿಂದ ಹೆಚ್ಚಿನ ಮಾಹಿತಿ ಕಲೆ ಹಾಕುತ್ತಿದ್ದಾರೆ.

ಕಳೆದ ಶುಕ್ರವಾರ ರಾಯ್ ಅವರು ಯಾರ್ಯಾರಿಗೆ ಕರೆ ಮಾಡಿದ್ದರು ಎಂಬುವುದನ್ನು ಎಸ್‌ಐಟಿ ಪಟ್ಟಿ ಮಾಡಿಕೊಂಡಿದ್ದು, ರಾಯ್ ಅವರ ಕಾರ್ಯಚಟುವಟಿಕೆ, ಮಾಹಿತಿಗಳನ್ನು ಸಂಗ್ರಹಿಸುತ್ತಿದೆಯಾದರೂ ಇದುವರೆಗೂ ರಾಯ್ ಆತಹತ್ಯೆಗೆ ನಿಖರ ಕಾರಣ ಇನ್ನೂ ತಿಳಿದು ಬಂದಿಲ್ಲ. ರಾಯ್ ಅವರು ನೇರ ಕರೆಗಳನ್ನು ಹೆಚ್ಚಾಗಿ ಮಾಡುತ್ತಿರಲಿಲ್ಲ. ಅನಿವಾರ್ಯವಿದ್ದಲ್ಲಿ ಮಾತ್ರ ವಿರಳವಾಗಿ ನೇರ ಕರೆ ಮಾಡುತ್ತಿದ್ದರು. ವೆಬ್ ಆಧಾರಿತ ಕರೆ ಪ್ಲಾಟ್‌ಫಾರ್ಮ್ ಬಳಕೆ ಮಾಡುತ್ತಿದ್ದರೆಂಬುವುದು ಇದುವರೆಗಿನ ಪೊಲೀಸರ ತನಿಖೆಯಿಂದ ಕಂಡು ಬಂದಿದೆ. ರಾಯ್ ಅವರು ಹೆಚ್ಚಾಗಿ ಯಾರಿಗೆ ಕರೆ ಮಾಡುತ್ತಿದ್ದರು. ತಮ್ಮ ವೈಯಕ್ತಿಕ ವಿಚಾರಗಳನ್ನೇನಾದರೂ ಹಂಚಿಕೊಂಡಿದ್ದಾರೆಯೇ, ವಾಟ್ಸಪ್ ಹೆಚ್ಚಾಗಿ ಯಾರಿಂದ ಬರುತ್ತಿತ್ತು ಎಂಬುವುದನ್ನು ಸಹ ಪೊಲೀಸರು ಸಿಡಿಆರ್ ವಿಶ್ಲೇಷಿಸುತ್ತಿದ್ದಾರೆ. ರಾಯ್ ಆತಹತ್ಯೆ ನಂತರ ಎಸ್‌ಐಟಿ ಅವರ ಕಚೇರಿಗೆ ಭೇಟಿ ನೀಡಿ ಅವರ ಚೇಂಬರ್‌ನ್ನು ಕೂಲಂಕಶವಾಗಿ ಪರಿಶೀಲಿಸಿದಾಗ ಅವರು ಬಳಸುತ್ತಿದ್ದ ಟೇಬಲ್ ಮೇಲೆ ಕೈ ಬರಹದ ಪೇಪರ್‌ಗಳು ರಾಶಿ ರಾಶಿ ಕಂಡುಬಂದಿವೆ. ಅವರ ಕೊಠಡಿಗೆ ಯಾರೂ ಸಹ ಹೋಗುತ್ತಿರಲಿಲ್ಲ. ಹಾಗಾಗಿ ಟೇಬಲ್ ಮೇಲೆಯೇ ಹಲವು ಕಾಗದ ಪತ್ರಗಳು ಹಾಗೆಯೇ ಇವೆ. ರಾಯ್ ಅವರ ಕೈಬರಹ ಎನ್ನಲಾದ ಪೇಪರ್‌ಗಳನ್ನು ಎಸ್‌ಐಟಿ ಸಂಗ್ರಹಿಸಿಕೊಂಡು ತಮ್ಮ ಕಚೇರಿಗೆ ಹೋಗಿದ್ದು, ಆ ಪೇಪರ್‌ಗಳಲ್ಲಿರುವ ಅಂಶಗಳನ್ನು ಕೂಲಂಕಶವಾಗಿ ಪರಿಶೀಲಿಸುತ್ತಿದ್ದಾರೆ.ಒಟ್ಟಾರೆ ರಾಯ್ ಅವರ ಆತಹತ್ಯೆಗೆ ನಿಖರ ಕಾರಣವೇನೆಂಬುವುದು ಎಸ್‌ಐಟಿ ಪೊಲೀಸರ ತನಿಖೆ ಮುಗಿದ ನಂತರವಷ್ಟೇ ಗೊತ್ತಾಗಲಿದೆ.




## ದಿಢೀರ್ ದೆಹಲಿಗೆ ಹಾರಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ

• ಉದಯವಾಹಿನಿ, ಬೆಂಗಳೂರು

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ರಾಜ್ಯದಲ್ಲಿನ ಪಕ್ಷದ ಆಂತರಿಕ ಬಂಡಾಯ, ನಾಯಕತ್ವ ಗದ್ದಲ, ಸಂಘಟನಾತ್ಮಕ ಬೆಳವಣಿಗೆಗಳ ಕುರಿತು ಚರ್ಚಿಸಲು ದಿಢೀರ್ ದೆಹಲಿಗೆ ತೆರಳಿದ್ದಾರೆ.

ಹೈಕಮಾಂಡ್‌ನಿಂದ ಬುಲಾವ್ ಬಂದ ಬೆನ್ನಲ್ಲೇ ಈ ಭೇಟಿ ನಡೆದಿದ್ದು, ನೂತನ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್ ಕೇಂದ್ರ ಗೃಹ ಸಚಿವ ಅಮಿತ್ ಶಾ ಸೇರಿದಂತೆ ಪ್ರಮುಖ ನಾಯಕರ ಭೇಟಿ ಮಾಡಿ, ರಾಜ್ಯದಲ್ಲಿ ನಡೆಯುತ್ತಿರುವ ಬೆಳವಣಿಗೆಗಳ ಕುರಿತಾಗಿ ಮಾಹಿತಿ ನೀಡುವ ಸಾಧ್ಯತೆ ಇದೆ.

ರಾಜ್ಯ ಬಿಜೆಪಿಯ ಆಂತರಿಕ ರಾಜಕಾರಣದಲ್ಲಿ ಹಠಾತ್ ಬೆಳವಣಿಗೆಗಳು ಕಂಡು ಬಂದಿರುವ ಸಂದರ್ಭದಲ್ಲೇ, ವಿಜಯೇಂದ್ರ ಅವರು ದಿಢೀರ್ ದೆಹಲಿಗೆ ತೆರಳಿದ್ದು, ಈ ಬೆಳವಣಿಗೆ ನಾಯಕತ್ವ ಬದಲಾವಣೆ ಕುರಿತು ಗುಲ್ಲೆದ್ದಿವೆ. ಹೈಕಮಾಂಡ್ ನಿರ್ಧಾರವನ್ನು ಯಾರೂ ಊಹಿಸಲು ಸಾಧ್ಯವಿಲ್ಲ, ಆದರೆ, ಎಲ್ಲಾ ಬಣಗಳನ್ನು ಒಟ್ಟಿಗೆ ಕರೆದೊಯ್ಯುವ ವ್ಯಕ್ತಿಯನ್ನು ಆಯ್ಕೆ ಮಾಡುವ ವಿಶ್ವಾಸವಿದೆ ಎಂದು ಪಕ್ಷದ ಮೂಲಗಳು ತಿಳಿಸಿವೆ. ಬಿಜೆಪಿಯ ಪ್ರಭಾವಿ ನಾಯಕರಾಗಿರುವ ಶಿವರಾಜ್ ಸಿಂಗ್ ಚೌಹಾಣ್ ಅವರು ವಿಜಯೇಂದ್ರ ಅವರನ್ನು ಪಕ್ಷದ ರಾಜ್ಯಾಧ್ಯಕ್ಷರನ್ನಾಗಿ ಮರು ನೇಮಕ ಮಾಡಲು ಸಿದ್ಧರಾಗಿದ್ದು, ಇತರರು ಬೇರೆಯದೇ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆನ್ನಲಾಗಿದೆ. ಪ್ರಸ್ತುತ ಕೇಂದ್ರ ಕೃಷಿ ಸಚಿವರಾಗಿರುವ ಚೌಹಾಣ್ ಅವರು, ಸದ್ಯದಲ್ಲೇ ರಾಜ್ಯಕ್ಕೆ ಬಂದು ಪಕ್ಷದ ರಾಜ್ಯಾಧ್ಯಕ್ಷರ ಹೆಸರನ್ನು ಘೋಷಿಸುವ ನಿರೀಕ್ಷೆಯಿದೆ.



ವಿಜಯೇಂದ್ರ ಅವರ ದೆಹಲಿ ಭೇಟಿಯನ್ನು ಖಾಸಗಿ ಭೇಟಿ ಎಂದು ಹೇಳಲಾಗುತ್ತಿತ್ತು. ಇದು ನಾಯಕತ್ವ ವಿಚಾರಕ್ಕೆ ಸಂಬಂಧಿಸಿದ್ದು ಎನ್ನಲಾಗುತ್ತಿದ್ದು, ಭೇಟಿ ವೇಳೆ ರಾಷ್ಟ್ರೀಯ ನಾಯಕರೊಂದಿಗೆ ನಾಯಕತ್ವ ವಿಚಾರ ಕುರಿತು ಮಾತುಕತೆ ನಡೆಸಲಿದ್ದಾರೆ ಎನ್ನಲಾಗಿದೆ.

ಒಂದು ಕಡೆಗೆ ಬಿಜೆಪಿಯಲ್ಲಿ ಒಗ್ಗಟ್ಟಿಲ್ಲ ಎಂಬ ವಿಪಕ್ಷಗಳ ಟೀಕೆಗಳು ಇದ್ದಾಗಲೇ ಗಾಲಿ ಜನಾರ್ದನ ರೆಡ್ಡಿ, ಶ್ರೀರಾಮುಲು ನಡುವಿನ ಭಿನ್ನಾಭಿಪ್ರಾಯ ಬಹಿರಂಗವಾಗಿ ಸ್ಫೋಟವಾಗಿದೆ.

ಈ ಎಲ್ಲಾ ಬೆಳವಣಿಗೆಗಳಿಂದ ಕರ್ನಾಟಕ ಬಿಜೆಪಿಯು ತೀವ್ರ ಮುಜುಗರಕ್ಕೀಡಾಗಿದೆ. ಅತ್ತ, ಬಿಜೆಪಿ ಭಿನ್ನಮತೀಯ ತಂಡದವರು ನಾವು ಇಟ್ಟ ಹೆಜ್ಜೆ ಹಿಂದಿಡುವುದಿಲ್ಲ. ವಿಜಯೇಂದ್ರ ಅವರನ್ನು ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನದಿಂದ ಕೆಳಗಿಳಿಸಿಯೇ ತೀರುತ್ತೇವೆ ಎಂದು ಪಟ್ಟು ಹಿಡಿದಿದ್ದಾರೆ.

ಇಂಥ ಸಂದರ್ಭದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷರ ಬದಲಾವಣೆ ಮಾಡುವುದು ಸೂಕ್ತವಾದ ನಿರ್ಧಾರವೇ ಎಂಬಿತ್ಯಾದಿ ವಿಚಾರಗಳನ್ನು ಹೈಕಮಾಂಡ್‌ಮುಂದಿಡಲು ವಿಜಯೇಂದ್ರ ಬಣ ನಿರ್ಧರಿಸಿದೆ ಎನ್ನಲಾಗಿದೆ.

ಬಿ.ವೈ.ವಿಜಯೇಂದ್ರ ರಾಜ್ಯಾಧ್ಯಕ್ಷರಾಗಿ ಮುಂದುವರಿಯ ಬಾರದು ಎಂದು ರೆಬೆಲ್ ಬಣ ಪಟ್ಟು ಹಿಡಿದಿದೆ ವಿಜಯೇಂದ್ರ ಅವರನ್ನು ರಾಜ್ಯಾಧ್ಯಕ್ಷರನ್ನಾಗಿ ಮುಂದುವರಿಸುವುದಾದರೆ ಚುನಾವಣೆಯಲ್ಲಿ ತಮ್ಮ ಅಭ್ಯರ್ಥಿಯನ್ನು ಕಣಕ್ಕಿಳಿಸುತ್ತೇವೆ ಎಂಬ ಎಚ್ಚರಿಕೆ ನೀಡಿದೆ. ಇದು ಹೈಕಮಾಂಡ್ ತಲೆ ನೋವಿಗೆ ಕಾರಣವಾಗಿದೆ.

## ರಾಜ್ಯದಲ್ಲಿ ಅಕ್ರಮವಾಗಿ ನೆಲೆಸಿರುವಾರ ಕುರಿತು ಹೈಕೋರ್ಟ್ ತರಾಟೆ, ಎಚ್ಚೆತ್ತ ಸರ್ಕಾರ

• ಉದಯವಾಹಿನಿ, ಬೆಂಗಳೂರು




ಬಾಂಗ್ಲಾದೇಶೀಯರು ಸೇರಿದಂತೆ ರಾಜ್ಯದಲ್ಲಿ ಅಕ್ರಮವಾಗಿ ನೆಲೆಸಿರು ವವರನ್ನು ಪತ್ತೆ ಹಚ್ಚಿ, ಗಡೀಪಾರು ಮಾಡುವ ಕಾರ್ಯಾಚರಣೆಯನ್ನು ಅಭಿಯಾನದ ಮಾದರಿಯಲ್ಲಿ ನಡೆಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಗೃಹ ಸಚಿವ ಡಾ.ಜಿ ಪರಮೇಶ್ವರ್ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡುವ ವೇಳೆಯಲ್ಲಿ ಅವರು, ರಾಜ್ಯದಲ್ಲಿ 20 ಲಕ್ಷ ಬಾಂಗ್ಲಾದೇಶದ ಪ್ರಜೆಗಳು ಅಕ್ರಮವಾಗಿ ನೆಲೆಸಿದ್ದಾರೆ ಎಂದು ಹೈಕೋರ್ಟ್ ತರಾಟೆಗೆ ತೆಗೆದುಕೊಂಡಿದೆ ಎಂಬುದಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿದರು.

ಕೇಂದ್ರ ವಿದೇಶಾಂಗ ಸಚಿವಾಲಯದ ಎಫ್ ಆರ್ ಆರ್ ಓ ಸಂಸ್ಥೆ ಬೆಂಗಳೂರಿನಲ್ಲಿದೆ. ಅವರ ದಾಖಲಾತಿಯಲ್ಲಿ 20 ಲಕ್ಷ ಜನ ಅಕ್ರಮವಾಗಿ ನೆಲೆಸಿರುವ ಮಾಹಿತಿ ಇಲ್ಲ. ಒಂದು ವೇಳೆ ರಿಜಿಸ್ಟರ್ ಪುಸ್ತಕದಲ್ಲಿ ನೋಂದಣಿಯಾಗದೆ ಹೊರಗುಳಿದಿರುವವರನ್ನು ಪತ್ತೆ ಹಚ್ಚಿ, ಗಡೀಪಾರು ಮಾಡಲು ಎಲ್ಲಾ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗುವುದು.

ಈಗಾಗಲೇ ಅಕ್ರಮವಾಗಿ ನೆಲೆಸಿದ್ದ 390 ವಿದೇಶಿ ಪ್ರಜೆಗಳನ್ನು ಗಡಿಪಾರು ಮಾಡಲಾಗಿದೆ ಎಂದರು. ವಿಧಾನ ಮಂಡಲದ ಅಧಿವೇಶನ ನಡೆಯುವ ಸಂದರ್ಭದಲ್ಲಿ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದ ಸಚಿವರು, ಶಾಸಕರು ಸಭೆ ನಡೆಸಿದ್ದೇವೆ.

ಎಸ್‌ಇಪಿ, ಟಿಎಸ್‌ಪಿ ಯೋಜನೆಯಡಿ ಕಳೆದ ಬಜೆಟ್‌ನಲ್ಲಿ 42 ಸಾವಿರ ಕೋಟಿ ರೂಪಾಯಿಗಳನ್ನು ಒದಗಿಸಲಾಗಿದೆ. ಆದರೆ ಅದು ಎಲ್ಲಾ ಇಲಾಖೆಗಳ ನಡುವೆ ಹಂಚಿಕೆಯಾಗಿದೆ. ಯಾವ ಇಲಾಖೆಯಲ್ಲಿ ಎಷ್ಟು ಖರ್ಚಾಗಿದೆ ಎಂಬ ನಿಖರ ಮಾಹಿತಿ ಸಿಗುತ್ತಿಲ್ಲ. ಫಲಾನುಭವಿಗಳಿಗೂ ಸೌಲಭ್ಯ ದೊರೆಯುತ್ತಿಲ್ಲ ಎಂಬ ಕುರಿತು ಸಭೆಯಲ್ಲಿ ಚರ್ಚಿಸಲಾಗಿದೆ.

ಮುಖ್ಯಮಂತ್ರಿಯವರೊಂದಿಗೆ ಚರ್ಚಿಸಲು ಸಭೆಯಲ್ಲಿ ನಿರ್ಧರಿಸಲಾಗಿದೆ. ಗ್ಯಾರಂಟಿ ಯೋಜನೆಗಳಿಗೆ ಎಸ್‌ಇಪಿ, ಟಿಎಸ್‌ಪಿ ಹಣ ಬಳಕೆಯಾಗುವುದನ್ನು ತಪ್ಪಿಸಲು ಇದು ಉತ್ತಮ ಮಾರ್ಗವಾಗಿದೆ ಎಂದರು.

## ಏಪ್ರಿಲ್‌ಗೆ ಜಿಬಿಎ, ಸ್ಥಳೀಯ ಸಂಸ್ಥೆ ಚುನಾವಣೆ ಸಿದ್ಧತೆಗೆ ಜಿಲ್ಲಾಧಿಕಾರಿಗಳಿಗೆ ಆಯೋಗ ಸೂಚನೆ

• ಉದಯವಾಹಿನಿ, ಬೆಂಗಳೂರು

ಕಳೆದ ನಾಲ್ಕೈದು ವರ್ಷಗಳಿಂದ ಒಂದಿಲ್ಲೊಂದು ಕಾರಣಗಳಿಂದ ಪದೇ ಪದೇ ಮುಂದೂಡಲಾಗಿದ್ದ ಕರ್ನಾಟಕ ಸ್ಥಳೀಯ ಸಂಸ್ಥೆಗಳ ಚುನಾವಣೆಯು ಮುಂಬರುವ ಏಪ್ರಿಲ್-ಮೇ ತಿಂಗಳ ಮಧ್ಯಭಾಗದಲ್ಲಿ ನಡೆಯಲಿದೆ. ಚುನಾವಣೆಗೆ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಬೇಕೆಂದು ಆಯೋಗವು ಆಯಾ ಜಿಲ್ಲಾಧಿಕಾರಿಗಳಿಗೆ ಈಗಾಗಲೇ ನಿರ್ದೇಶನ ನೀಡಿದೆ. ಎಸ್‌ಎಸ್‌ಎಲ್‌ಸಿ, ಪಿಯುಸಿ, ಪದವಿ, ಸ್ನಾತಕೋತ್ತರ ಸೇರಿದಂತೆ ಎಲ್ಲಾ ಹಂತದ ಪರೀಕ್ಷೆಗಳು ಮಾರ್ಚ್- ಏಪ್ರಿಲ್ ತಿಂಗಳ ಅಂತ್ಯದೊಳಗೆ ಕೊನೆಗೊಳ್ಳುತ್ತವೆ. ಈ ಹಿನ್ನೆಲೆಯಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆಯನ್ನು ಏಪ್ರಿಲ್-



ಮೇ ತಿಂಗಳ ಮಧ್ಯ ಭಾಗದಲ್ಲಿ ನಡೆಸಲು ಆಯೋಗ ಮುಂದಾಗಿದೆ. ಬಹುನಿರೀಕ್ಷಿತ ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯ ಚುನಾವಣೆಯನ್ನು ಜೂನ್ 30ರ ಒಳಗೆ ನಡೆಸ ಬೇಕೆಂದು ಸುಪ್ರೀಂ ಕೋರ್ಟ್ ರಾಜ್ಯ ಸರ್ಕಾರಕ್ಕೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದೆ.

ಜಿಬಿಎ ಚುನಾವಣೆ ಜೊತೆಗೆ ಸ್ಥಳೀಯ ಸಂಸ್ಥೆಗಳಾದ ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯಿತಿ, ಜಿಲ್ಲಾ ಪಂಚಾಯತಿ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ, ಮಹಾನಗರ ಪಾಲಿಕೆ ಸೇರಿದಂತೆ ಎಲ್ಲಾ ಸ್ಥಳೀಯ ಸಂಸ್ಥೆಗಳ ಚುನಾವಣೆಗಳು ಏಕಕಾಲಕ್ಕೆ ಒಂದೇ ಹಂತದಲ್ಲಿ ನಡೆಯಲಿವೆ. ಮತ್ತೊಂದು ವಿಶೇಷವೆಂದರೆ ಈ ಬಾರಿಯ ಸ್ಥಳೀಯ ಸಂಸ್ಥೆಗಳ ಚುನಾವಣೆಯು ಇವಿಎಂ ಬದಲಿಗೆ ಬ್ಯಾಲಟ್ ಪೇಪರ್‌ನಲ್ಲಿ ನಡೆಯಲಿದೆ. ಸಾಮಾನ್ಯವಾಗಿ ಈವರೆಗೂ ಗ್ರಾಮ ಪಂಚಾಯತ್ ಚುನಾವಣೆಯಲ್ಲಿ ಮಾತ್ರ ಇವಿಎಂ ಬದಲಿಗೆ ಮತಪತ್ರದಲ್ಲಿ ಮತದಾನ ಮಾಡಲಾಗುತ್ತಿತ್ತು. ಉಳಿದಂತೆ ಸ್ಥಳೀಯ ಸಂಸ್ಥೆಗಳ ಚುನಾವಣೆ ಮತದಾನವು ವಿಧಾನಸಭೆ, ಲೋಕಸಭೆ ಚುನಾವಣೆ ಮಾದರಿಯಲ್ಲಿ ಇವಿಎಂನಲ್ಲಿ ನಡೆಯುತ್ತಿತ್ತು. ಆದರೆ ಕಳೆದ ವಿಧಾನಸಭೆ, ಲೋಕಸಭೆ ಚುನಾವಣೆಯಲ್ಲಿ ಮತಚೋರಿ ನಡೆದಿದೆ ಎಂದು ಕಾಂಗ್ರೆಸ್‌ಸಂಶಯ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ರಾಜ್ಯ ಚುನಾವಣಾ ಆಯೋಗ ಮತಪತ್ರದ ಮೂಲಕವೇ ಮತದಾನ ನಡೆಸಲು ಉದ್ದೇಶಿಸಿದೆ. ರಾಜ್ಯದ 5,948 ಗ್ರಾ.ಪಂ.ಗಳ ಪೈಕಿ 5,698 ಗ್ರಾ.ಪಂ.ಗಳಿಗೆ 2020 ಡಿಸೆಂಬರ್‌ನಲ್ಲಿ ಚುನಾವಣೆ ಆಗಿತ್ತು. ಅಧ್ಯಕ್ಷ-ಉಪಾಧ್ಯಕ್ಷರ ಚುನಾವಣೆ 2021-22ರಲ್ಲಿ ನಡೆದಿದ್ದರಿಂದ 2026ರ ಫೆಬ್ರವರಿ ಎರಡನೇ ವಾರಕ್ಕೆ ಈ ಪಂಚಾಯಿತಿ ಚುನಾಯಿತ ಸದಸ್ಯರ ಅಧಿಕಾರಾವಧಿ ಮುಗಿಯಲಿದೆ. ಇದರೊಟ್ಟಿಗೆ 2026ರ ಮಾರ್ಚ್‌ಗೆ ಮುಗಿಯುವ 92 ಗ್ರಾ.ಪಂ.ಗಳನ್ನೂ ಸೇರಿಸಿ ಚುನಾವಣೆ ನಡೆಸಲು ಸರಕಾರ ತಯಾರಿ ನಡೆಸಿದೆ.

# ರಾಜ್ಯದಲ್ಲಿರುವ ಅಕ್ರಮ ಬಾಂಗ್ಲಾ ವಲಸಿಗರ ಪತ್ತೆಗೆ ಆಪರೇಷನ್ ಆರಂಭ

### ಯಾವ ಇಲಾಖೆಯಲ್ಲಿ ಎಷ್ಟು ಖರ್ಚಾಗಿದೆ ಎಂಬ ನಿಖರ ಮಾಹಿತಿ ಸಿಗುತ್ತಿಲ್ಲ. ಫಲಾನುಭವಿಗಳಿಗೂ ಸೌಲಭ್ಯ ದೊರೆಯುತ್ತಿಲ್ಲ ಎಂಬ ಕುರಿತು ಸಭೆಯಲ್ಲಿ ಚರ್ಚೆ

• ಉದಯವಾಹಿನಿ, ಬೆಂಗಳೂರು

ಬಾಂಗ್ಲಾದೇಶೀಯರು ಸೇರಿದಂತೆ ರಾಜ್ಯದಲ್ಲಿ ಅಕ್ರಮವಾಗಿ ನೆಲೆಸಿರುವವರನ್ನು ಪತ್ತೆ ಹಚ್ಚಿ, ಗಡೀಪಾರು ಮಾಡುವ ಕಾರ್ಯಾಚರಣೆಯನ್ನು ಅಭಿಯಾನದ ಮಾದರಿಯಲ್ಲಿ ನಡೆಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಗೃಹ ಸಚಿವ ಡಾ.ಜಿ ಪರಮೇಶ್ವರ್ ತಿಳಿಸಿದ್ದಾರೆ ಸುದ್ದಿಗಾರರೊಂದಿಗೆ ಮಾತನಾಡುವ ವೇಳೆಯಲ್ಲಿ ಅವರು, ರಾಜ್ಯದಲ್ಲಿ 20 ಲಕ್ಷ ಬಾಂಗ್ಲಾದೇಶದ ಪ್ರಜೆಗಳು ಅಕ್ರಮವಾಗಿ ನೆಲೆಸಿದ್ದಾರೆ ಎಂದು ಹೈಕೋರ್ಟ್ ತರಾಟೆಗೆ ತೆಗೆದುಕೊಂಡಿದೆ ಎಂಬುದಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿದರು.

ಕೇಂದ್ರ ವಿದೇಶಾಂಗ ಸಚಿವಾಲಯದ ಎಫ್‌ಆರ್‌ಆರ್‌ಓ ಸಂಸ್ಥೆ ಬೆಂಗಳೂರಿನಲ್ಲಿದೆ. ಅವರ ದಾಖಲಾತಿಯಲ್ಲಿ 20 ಲಕ್ಷ ಜನ ಅಕ್ರಮವಾಗಿ ನೆಲೆಸಿರುವ ಮಾಹಿತಿ ಇಲ್ಲ. ಒಂದು ವೇಳೆ ರಿಜಿಸ್ಟರ್ ಪುಸ್ತಕದಲ್ಲಿ ನೋಂದಣಿಯಾಗದೆ ಹೊರಗುಳಿದಿರುವವರನ್ನು ಪತ್ತೆ ಹಚ್ಚಿ, ಗಡೀಪಾರು ಮಾಡಲು ಎಲ್ಲಾ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗುವುದು. ಈಗಾಗಲೇ ಅಕ್ರಮವಾಗಿ ನೆಲೆಸಿದ್ದ 390 ವಿದೇಶಿ ಪ್ರಜೆಗಳನ್ನು ಗಡಿಪಾರು ಮಾಡಲಾಗಿದೆ ಎಂದರು.

ವಿಧಾನ ಮಂಡಲದ ಅಧಿವೇಶನ ನಡೆಯುವ ಸಂದರ್ಭದಲ್ಲಿ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದ ಸಚಿವರು, ಶಾಸಕರು ಸಭೆ ನಡೆಸಿದ್ದೇವೆ. ಎಸ್‌ಇಪಿ, ಟಿಎಸ್‌ಪಿ ಯೋಜನೆಯಡಿ ಕಳೆದ ಬಜೆಟ್‌ನಲ್ಲಿ 42 ಸಾವಿರ ಕೋಟಿ ರೂಪಾಯಿಗಳನ್ನು ಒದಗಿಸಲಾಗಿದೆ. ಆದರೆ ಅದು ಎಲ್ಲಾ ಇಲಾಖೆಗಳ ನಡುವೆ ಹಂಚಿಕೆಯಾಗಿದೆ. ಯಾವ ಇಲಾಖೆಯಲ್ಲಿ ಎಷ್ಟು ಖರ್ಚಾಗಿದೆ ಎಂಬ ನಿಖರ ಮಾಹಿತಿ ಸಿಗುತ್ತಿಲ್ಲ. ಫಲಾನುಭವಿಗಳಿಗೂ ಸೌಲಭ್ಯ ದೊರೆಯುತ್ತಿಲ್ಲ ಎಂಬ ಕುರಿತು ಸಭೆಯಲ್ಲಿ ಚರ್ಚಿಸಲಾಗಿದೆ. ಈ ಮೊದಲು ಎಸ್‌ಇಪಿ, ಟಿಎಸ್‌ಪಿ ಅನುದಾನವನ್ನು ಸಮಾಜ ಕಲ್ಯಾಣ ಇಲಾಖೆಗೆ ನೀಡಲಾಗುತ್ತಿತ್ತು. ಅಲ್ಲಿಂದ ಕಾರ್ಯಕ್ರಮ ರೂಪಿಸಲಾಗುತ್ತಿತು. ಗಂಗಾ ಕಲ್ಯಾಣ, ಸ್ವಯಂ ಉದ್ಯೋಗ, ವಾಹನ ಖರೀದಿ ಸೇರಿದಂತೆ ವಿವಿಧ ಯೋಜನೆಗಳನ್ನು ಜಾರಿಗೊಳಿಸಲಾಗುತ್ತಿತ್ತು.ಅಂತಹ ಸಂದರ್ಭದಲ್ಲಿ ಫಲಾನುಭವಿಗಳಿಗೂ ನೇರವಾಗಿ ಸೌಲಭ್ಯ ಸಿಗುತ್ತಿತ್ತು. ಈಗ ಮತ್ತೆ ಮೊದಲಿನ ವ್ಯವಸ್ಥೆಯಂತೆ ಸಮಾಜ ಕಲ್ಯಾಣ ಇಲಾಖೆಗೆ ಅನುದಾನವನ್ನು ಒದಗಿಸಬೇಕು.

ಅಲ್ಲಿಂದ ಹಂಚಿಕೆ ಮಾಡಬೇಕು ಎಂಬುದು ಎಲ್ಲಾ ಜನಪ್ರತಿನಿಧಿಗಳ ಅಭಿಪ್ರಾಯವಾಗಿದೆ. ಅದನ್ನು ಮುಖ್ಯಮಂತ್ರಿಯವರೊಂದಿಗೆ ಚರ್ಚಿಸಲು ಸಭೆಯಲ್ಲಿ ನಿರ್ಧರಿಸಲಾಗಿದೆ. ಗ್ಯಾರಂಟಿ ಯೋಜನೆಗಳಿಗೆ ಎಸ್‌ಇಪಿ, ಟಿಎಸ್‌ಪಿ ಹಣ ಬಳಕೆಯಾಗುವುದನ್ನು ತಪ್ಪಿಸಲು ಇದು ಉತ್ತಮ ಮಾರ್ಗವಾಗಿದೆ ಎಂದರು. ನಮ್ಮ ಮೆಟ್ರೋ ಸಂಸ್ಥೆ ಸ್ವಾಯತ್ತವಾಗಿದೆ. ಅದರಲ್ಲೂ ಮೆಟ್ರೋ ಸಂಸ್ಥೆಯಲ್ಲಿ ಕೇಂದ್ರ ಸರ್ಕಾರದ ಪಾಲು ಇದೆ. ಮೆಟ್ರೋ ರೈಲು ನಿರ್ವಹಣೆಗಾಗಿ ರಚಿಸಲಾಗಿರುವ ಸಿಎಂಡಿ ಕೇಂದ್ರ ಸರ್ಕಾರದ ನಿರ್ದೇಶನದಂತೆ ಪ್ರಯಾಣ ದರ ಪರಿಷ್ಕರಣೆ ಮಾಡಿರಬಹುದು ಎಂದರು. ಯಾರೋ ಮಾತನಾಡಿರುವ ಆಡಿಯೋವನ್ನು ಸಿಡಿಯಲ್ಲಿ ತಂದು ಪ್ರಸ್ತಾಪ ಮಾಡಿದರೆ ಒಪ್ಪಲು ಸಾಧ್ಯವಿಲ್ಲ. ಸಚಿವ ಆರ್.ಬಿ.ತಿಮಾಪುರ್ ನಾನು ನೇರವಾಗಿ ಹಣ ಪಡೆದಿರುವುದು ಅಥವಾ ನನ್ನ ಕಚೇರಿಯಲ್ಲಿ ಲಂಚ ಪಡೆಯುವ ಮಾತುಕತೆ ಆಗಿದ್ದರೆ ಅದನ್ನು ಸಾಬೀತುಪಡಿಸಿ.



ನಾನು ರಾಜೀನಾಮೆ ನೀಡಲು ಸಿದ್ಧನಿದ್ದೇನೆ. ಯಾರೋ ಮಾತನಾಡಿಕೊಂಡಿದ್ದರೆ ಅದರಲ್ಲಿ ನನ್ನ ಪಾತ್ರ ಏನಿರುತ್ತದೆ? ನಾನ್ಹೇಗೆ ಹೊಣೆಯಾಗುತ್ತೇನೆ ಎಂದು ತಿಮ್ಮಾಪುರ ಪ್ರಶ್ನಿಸಿದ್ದಾರೆ.

ವಿರೋಧ ಪಕ್ಷದವರು ಇದೇ ರೀತಿ ಪ್ರತಿದಿನ ಒಬ್ಬೊಬ್ಬ ಸಚಿವರ ವಿರುದ್ಧ ಸಿಡಿ ತರುತ್ತಾರೆ. ಅದನ್ನು ಒಪ್ಪಬೇಕಾ? ಎಂದು ಪ್ರಶ್ನಿಸಿದರು. ವಿಬಿ ಜಿ ರಾಮ್ ಜಿ ಯೋಜನೆ ವಿರೋಧಿಸಿ ವಿಧಾನಮಂಡಲದಲ್ಲಿ ಕೈಗೊಂಡಿರುವ ನಿರ್ಣಯದ ಸಂವಿಧಾನ ಬಾಹಿರ ಅಲ್ಲ. ಚುನಾಯಿತ ಸರ್ಕಾರ ಬಹುಮತದಿಂದ ಅಂಗೀಕರಿಸುವ ನಿರ್ಣಯ ಹೇಗೆ ಅಕ್ರಮವಾಗುತ್ತದೆ? ಎಂದು ಪ್ರಶ್ನಿಸಿದರು.

**ಕಾಂಗ್ರೆಸ್ ಕಚೇರಿಗಳ ನಿರ್ಮಾಣಕ್ಕೆ ನಿವೇಶನ ಹಂಚಿಕೆ ಮಾಡುತ್ತಿರುವುದು ಸರ್ಕಾರದ ತೀರ್ಮಾನ. ಬಿಜೆಪಿ ಅಧಿಕಾರದಲ್ಲಿದ್ದಾಗಲೂ ಕಚೇರಿಗಳಿಗೆ ನಿವೇಶನಗಳನ್ನು ಮಾಡಿಸಿಕೊಳ್ಳಲಾಗಿದೆ. ಇದು ವೈಯಕ್ತಿಕ ನಿರ್ಧಾರವಲ್ಲ. ಸರ್ಕಾರದ ತೀರ್ಮಾನ ಎಂದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದಿನಿಂದ ಬಜೆಟ್ ಪೂರ್ವಭಾವಿ ಸಭೆ ಆರಂಭಿಸಿದ್ದಾರೆ. ಮೊದಲಿಗೆ ಗೃಹ ಇಲಾಖೆಯ ಬೇಡಿಕೆಗಳ ಬಗ್ಗೆ ಚರ್ಚೆ ನಡೆಯುತ್ತಿದೆ. ಅದರ ಬಗ್ಗೆ ಪ್ರಸ್ತಾವನೆಗಳನ್ನು ಸಿದ್ಧಪಡಿಸಿದ್ದೇವೆ. ಹೊಸ ನೇಮಕಾತಿ, ಪೊಲೀಸ್ ಠಾಣೆಗಳನ್ನು ನೀಡಬೇಕು ಎಂಬುದು ನಮ್ಮ ಬೇಡಿಕೆಯಾಗಿದೆ.**

**-ಡಾ.ಜಿ ಪರಮೇಶ್ವರ್, ಗೃಹ ಸಚಿವ**

### ಸಾಕ್ಷ್ಯಾಧಾರ ಒದಗಿಸಲು ವಿಫಲ

**ರಾಜ್ಯ ಸರ್ಕಾರ ದಿವಾಳಿಯಾಗಿದೆ, ಹೊಸ ಯೋಜನೆಗಳು ಘೋಷಣೆಯಾಗುವುದಿಲ್ಲ ಎಂದು ಬಜೆಟ್ ಮಂಡನೆಗೂ ಮುನ್ನವೇ ಲೇವಡಿ ಮಾಡುತ್ತಿರುವವರು ಬೇಜಾವಾಬ್ದಾರಿ ಜನ ಎಂದು ತರಾಟೆಗೆ ತೆಗೆದುಕೊಂಡರು. 2024-25ನೇ ಸಾಲಿಗೆ 3.97 ಲಕ್ಷ ಕೋಟಿ, 2025-26ನೇ ಸಾಲಿಗೆ 4.9 ಲಕ್ಷ ಕೋಟಿ ರೂಪಾಯಿ ಬಜೆಟ್ ಮಂಡಿಸಲಾಗಿತ್ತು. ಪ್ರತಿ ವರ್ಷದ ಬಜೆಟ್ ನಲ್ಲೂ ಶೇಕಡಾ 15 ರಷ್ಟು ಹೆಚ್ಚಳವಾಗುತ್ತದೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಬಜೆಟ್‌ನಲ್ಲಿ ಈ ರೀತಿಯ ಏರಿಕೆ ಸಾಮಾನ್ಯ ಎಂದರು. ಸಚಿವ ಆರ್.ಬಿ.ತಿಮಾಪುರ್ ವಿರುದ್ಧ ಕೇಳಿ ಬಂದಿರುವ ಆರೋಪಕ್ಕೆ ಸೂಕ್ತ ಸಾಕ್ಷ್ಯಾಧಾರ ಒದಗಿಸಲು ವಿರೋಧ ಪಕ್ಷಗಳು ವಿಫಲವಾಗಿವೆ.**

ಉದ್ಯೋಗ ಸೃಷ್ಟಿಸಬಲ್ಲ ಅನೇಕ ಯೋಜನೆಗಳನ್ನು ತಂದಲ್ಲಿ ಪ್ರಯೋಜನವಾಗುತ್ತಿತ್ತು ಎನ್ನುವುದು ಗ್ರಾಮಸ್ಥರ ಅಭಿಪ್ರಾಯ

# ಬೀದಿನಾಯಿ ಆಶ್ರಯತಾಣಕ್ಕೆ ವಿರೋಧ: ಬೃಹತ್ ಪ್ರತಿಭಟನೆಗೆ ತಯಾರಿ

• ಉದಯವಾಹಿನಿ ಬ್ರಹ್ಮಾವರ

ಉಳ್ಳೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಉಡುಪಿ ಜಿಲ್ಲೆಯ ಬೀದಿ ನಾಯಿಗಳ ಆಶ್ರಯತಾಣ ನಿರ್ಮಿಸುವುದರ ವಿರುದ್ಧದ ಹೋರಾಟಕ್ಕೆ ಉಪ್ಪೂರು, ಹಾವಂಜೆ ಮತ್ತು ಆರೂರು ಗ್ರಾಮದ ಗ್ರಾಮಸ್ಥರು ಸಜ್ಜಾಗಿದ್ದಾರೆ. ಉಪ್ಪರು ಗ್ರಾಮದ ಜನವಸತಿ ಪ್ರದೇಶದ ಸುಮಾರು 9 ಎಕರೆ 90 ಸೆಂಟ್ಸ್ ಪ್ರದೇಶದಲ್ಲಿ ಜಿಲ್ಲಾಡಳಿತ ನಿರ್ಮಿಸಲು ಹೊರಟಿರುವ ಈ ಆಶ್ರಯತಾಣದಿಂದ ಉಳ್ಳೂರು ಮತ್ತು ಆರೂರು ಗ್ರಾಮದ ಜನತೆ ಹೆಚ್ಚಿನ ಸಮಸ್ಯೆ ಎದುರಿಸುವ ಸಾಧ್ಯತೆ ಇದೆ. ಸರ್ಕಾರಿ ಜಾಗದಲ್ಲಿ ಉದ್ಯೋಗ ಸೃಷ್ಟಿಸಬಲ್ಲ ಅನೇಕ ಯೋಜನೆಗಳನ್ನು ತಂದಲ್ಲಿ ಪ್ರಯೋಜನವಾಗುತ್ತಿತ್ತು ಎನ್ನುವುದು ಇಲ್ಲಿಯ ಗ್ರಾಮಸ್ಥರ ಅಭಿಪ್ರಾಯವಾಗಿದೆ.

ಬೀದಿ ನಾಯಿಗಳ ಆಶ್ರಯತಾಣ ವಿರೋಧಿಸಿ ಇದೇ 6ರಂದು ಜಿಲ್ಲಾಧಿಕಾರಿ ಕಚೇರಿ ಎದುರು ಬೃಹತ್ ಪ್ರತಿಭಟನೆಗೂ ಗ್ರಾಮಸ್ಥರು ಎಲ್ಲಾ ತಯಾರಿ ನಡೆಸಿದ್ದಾರೆ. ಆಶ್ರಯತಾಣವು ಉಳ್ಳೂರು ಗ್ರಾಮಕ್ಕೆ ಬಂದರೆ ಗ್ರಾಮದ ಅಭಿವೃದ್ಧಿ ಸಂಪೂರ್ಣವಾಗಿ ಕುಂಠಿತವಾಗಲಿದೆ. ಪ್ರಸ್ತುತ ಉಪ್ಪರು, ಹಾವಂಜೆ ಮತ್ತು ಆರೂರು ಗ್ರಾಮ ಶೀಂಬ್ರ ಸೇತುವೆಯಿಂದಾಗಿ ಮಣಿಪಾಲಕ್ಕೆ ಹತ್ತಿರವಾಗಿ ಈ ಮೂರೂ ಗ್ರಾಮಗಳು ಅಭಿವೃದ್ಧಿಗೊಳ್ಳುತ್ತಿದೆ. ಇಲ್ಲಿ ಸರ್ಕಾರಿ ಮೆಡಿಕಲ್ ಕಾಲೇಜು, ತಾಲ್ಲೂಕು ಕ್ರೀಡಾಂಗಣ, ಸ್ನಾತಕೋತ್ತರ ಅಧ್ಯಯನ ಕೇಂದ್ರ, ವಸತಿ ರಹಿತರಿಗೆ ನಿವೇಶನ ವ್ಯವಸ್ಥೆ ಸೇರಿದಂತೆ ಯಾವುದೇ ಜನೋಪಯೋಗಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೊಳ್ಳಲು ಸಾಧ್ಯ ಇರುವುದರಿಂದ ಈ ಬಗ್ಗೆ ಅಧಿಕಾರಿಗಳು ಗಮನ ನೀಡಲಿ ಎಂದು ಸಾಮಾಜಿಕ ಕಾರ್ಯಕರ್ತ ಸತೀಶ ಪೂಜಾರಿ ಕೀಳಂಜೆ ಮತ್ತು ತುಳುನಾಡ ರಕ್ಷಣಾ ವೇದಿಕೆಯ ಉಡುಪಿ ಜಿಲ್ಲಾ ಉಪಾಧ್ಯಕ್ಷ ಉಮೇಶ ಶೆಟ್ಟಿ ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

ಜನತೆ ಹೆಚ್ಚಿನ ಸಮಸ್ಯೆ ಎದುರಿಸುವ ಸಾಧ್ಯತೆ

ಉಪ್ಪರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಈ ಪ್ರದೇಶದಲ್ಲಿ 200ಕ್ಕೂ ಹೆಚ್ಚು ಕುಟುಂಬಗಳಿಗೆ ಹಕ್ಕುಪತ್ರ ಸಿಕ್ಕಿಲ್ಲ. ನಾಯಿಗಳ ಆಶ್ರಯತಾಣಕ್ಕೆ ನಿಗದಿ ಪಡಿಸಿದ ಜಾಗದಲ್ಲಿಯೇ ಪಂಚಾಯಿತಿ ನಿವೇಶನಕ್ಕೆ ಜಾಗವನ್ನು ಕಾಯ್ದಿರಿಸಲಾಗಿತ್ತು. ಆದರೆ ಈಗ ಜಿಲ್ಲಾಡಳಿತ ನಾಯಿಗಳ ಆಶ್ರಯತಾಣವನ್ನಾಗಿ ಮಾಡಲು ಹೊರಟಿದೆ. ಮುಂದಾಗುವ ಸಮಸ್ಯೆಗಳಿಗೆ ಹೊಣೆ ಯಾರು ? ಇದಲ್ಲದೇ ಪಂಚಾಯಿತಿಗೆ ಕೂಡ ಈ ಪ್ರದೇಶದ ಸರ್ವೆ ಕಾರ್ಯ ನಡೆಸಿದ ಬಗ್ಗೆ ಮಾಹಿತಿ ಇಲ್ಲ. ಅವರ ಗಮನಕ್ಕೂ ತಾರದೇ ಇಲ್ಲಿ ಹೇಗೆ ಆಶ್ರಯತಾಣ ನಿರ್ಮಿಸಲು ಜಿಲ್ಲಾಡಳಿತ ಹೊರಟಿದೆ ಎಂದು ಸ್ಥಳೀಯ ನಿವಾಸಿ ಅಶ್ವಿನ್ ಪಿ. ರೋಚ್ ಪ್ರಶ್ನಿಸಿದ್ದಾರೆ.

ಉಪ್ಪರಿನಲ್ಲಿ ಬೀದಿನಾಯಿ ಆಶ್ರಯತಾಣ ನಿರ್ಮಾಣದಿಂದ ಗ್ರಾಮಕ್ಕೆ, ಗ್ರಾಮಸ್ಥರಿಗೆ ಏನೂ ಪ್ರಯೋಜನವಿಲ್ಲ. ಬದಲಾಗಿ ಜನವಸತಿ ಇರುವ ಪ್ರದೇಶವಾದ ಕಾರಣ ಪರಿಸರದ ಮೇಲಾಗುವ ವಾಯುಮಾಲಿನ್ಯ, ಶಬ್ದಮಾಲಿನ್ಯ ಜನರ ನೆಮ್ಮದಿ ಕೆಡಿಸುವ ಜತೆಗೆ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರಲಿದೆ ಎಂದು ಸ್ಥಳೀಯರು ಹೇಳಿದ್ದಾರೆ. ನೀರಿನ ಸೆಲೆ ಇರುವ ಈ ಸ್ಥಳದಿಂದ ಮಡಿಸಾಲು ಹೊಳೆಗೆ ನೀರು ಸೇರುವುದರಿಂದ ಮುಂದೆ, ಬಾವಿಗಳ ಅಂತರ್ಜಲದ ಮೇಲೂ ಪರಿಣಾಮ ಉಂಟಾಗಿ ಅದೂ ಅನೇಕ ಆರೋಗ್ಯ ಸಮಸ್ಯೆ ಸೃಷ್ಟಿಸುವುದು ಖಚಿತ. ಈ ಜಾಗ ಜನೋಪಯೋಗಿ ಜನಪರ, ಪರಿಸರಸ್ನೇಹಿ ಯೋಜನೆಗಳಿಗೆ ಬಳಕೆಯಾಗಲಿ ಎಂದೂ ಆಗ್ರಹಿಸಿದ್ದಾರೆ. ಜನರ ವಿರೋಧವನ್ನು ಲೆಕ್ಕಿಸದೆ ಜಿಲ್ಲಾಡಳಿತ ಆಶ್ರಯತಾಣ ನಿರ್ಮಾಣಕ್ಕೆ ಮುಂದಾದರೆ ಉಗ್ರ ಪ್ರತಿಭಟನೆ ಎದುರಿಸಬೇಕಾದೀತು ಎಂದು ಉಪ್ಪರು ಸಿ.ಎ. ಬ್ಯಾಂಕ್‌ನ ನಿರ್ದೇಶಕ ಹಾಗೂ ಸ್ಥಳೀಯ ನಿವಾಸಿ ರಮೇಶ ಕರ್ಕೆರಾ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಬೀದಿನಾಯಿಗಳ ಆಶ್ರಯತಾಣ ನಿರ್ಮಿಸುವ ನಿರ್ಧಾರದ ವಿರುದ್ಧ ಪಕ್ಷಾತೀತವಾಗಿ ಹೋರಾಟಕ್ಕೆ ಗ್ರಾಮಸ್ಥರು ಸಿದ್ಧರಾಗಿದ್ದಾರೆ. ಪ್ರತಿಭಟನೆಗಾಗಿ ಹಲವು ಜವಾಬ್ದಾರಿಗಳನ್ನು ಹಂಚಿಕೊಂಡಿದ್ದಾರೆ.

> ವಾಯು ಮಾಲಿನ್ಯ, ಶಬ್ದ ಮಾಲಿನ್ಯ, ಜಲ ಮಾಲಿನ್ಯ ತರುವಂತಹ ಯೋಜನೆ ನಮಗೆ ಬೇಡ. ಯುವಜನರಿಗೆ ಉದ್ಯೋಗ ನೀಡುವ ಯೋಜನೆಗಳು ಬರಲಿ ರಮೇಶ ಕರ್ಕೆರ, ಸ್ಥಳೀಯ ನಿವಾಸಿ

> ನಂದಿನಿ ಡೇರಿ, ಶಾಲೆ, ಜನವಸತಿ ಪ್ರದೇಶದಲ್ಲಿ ನಾಯಿಗಳನ್ನು ತಂದು ಬಿಡುವುದರಿಂದ ಅನೇಕ ಸಾಂಕ್ರಾಮಿಕ ರೋಗಗಳು ಕಾಣಿಸಕೊಳ್ಳಬಹುದು
> ಅಶ್ವಿನ್ ಕೆ. ರೋಚ್, ಸ್ಥಳೀಯ ನಿವಾಸಿ

> ಮೂರು ಗ್ರಾಮದ ಅಭಿವೃದ್ಧಿಗೆ ಬೇಕಾದ ಯೋಜನೆಗಳನ್ನು ತಂದಲ್ಲಿ ಎಲ್ಲರಿಗೂ ಪ್ರಯೋಜನವಾಗಲಿದೆ. ಆದರೆ ಸಮಸ್ಯೆಗಳನ್ನು ತರುವ ಬೀದಿನಾಯಿಗಳ ಆಶ್ರಯತಾಣ ಇಲ್ಲಿ ಬೇಡವೇ ಬೇಡ
> ಉಮೇಶ ಶೆಟ್ಟಿ, ಸ್ಥಳೀಯ ನಿವಾಸಿ

## ಮಿನಿ ನ್ಯೂಸ್

# ನಿಯಮ ಮೀರುವ ಆಟೋ, ವಾಹನಕ್ಕೆ ಕಡಿವಾಣ ಹಾಕಿ

• ಉದಯವಾಹಿನಿ ಕಾರವಾರ

ಭಟ್ಕಳ ಪಟ್ಟಣದಲ್ಲಿ ನಿಯಮ ಮೀರಿ ಪ್ರಯಾಣಿಕರನ್ನು ಕರೆದೊಯ್ಯುತ್ತಿರುವ ಖಾಸಗಿ ವಾಹನಗಳು, ಆಟೋಗಳಿಗೆ ಕಡಿವಾಣ ಹಾಕಬೇಕು ಎಂದು ಒತ್ತಾಯಿಸಿ ಟ್ಯಾಕ್ಸಿ ಚಾಲಕ ಮಾಲಕರ ಸಂಘದ ಭಟ್ಕಳ ಘಟಕದವರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೀಪನ್ ಎಂ.ಎನ್ ಅವರಿಗೆ ಮನವಿ ಸಲ್ಲಿಸಿದರು. ಆಟೋಗಳು ನಿಯಮವನ್ನು ಉಲ್ಲಂಘಿಸಿ ನೂರಾರು ಕಿ.ಮೀ ದೂರದವರೆಗೆ ಸಾಗುತ್ತಿವೆ. ಜಿಲ್ಲೆಯ ಗಡಿ ದಾಟಿ ನೆರೆಯ ಜಿಲ್ಲೆಗಳಿಗೂ ಪ್ರಯಾಣಿಕರನ್ನು ಕರೆದೊಯ್ಯುತ್ತಿವೆ. 200ಕ್ಕೂ ಹೆಚ್ಚು ಖಾಸಗಿ ವಾಹನಗಳು ಬಾಡಿಗೆ ಆಧಾರದಲ್ಲಿ ಪ್ರಯಾಣಿಕರನ್ನು ಕರೆದೊಯ್ಯಲು ಬಳಕೆ ಆಗುತ್ತಿವೆ ಎಂದು ದೂರು ನೀಡಿದರು.

ಬಳಿಕ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಟ್ಯಾಕ್ಸಿ ಚಾಲಕ ಮಾಲಕರ ಸಂಘದ ಭಟ್ಕಳ ಘಟಕದ ಅಧ್ಯಕ್ಷ ಗಣೇಶ ದೇವಾಡಿಗ, ಟ್ಯಾಕ್ಸಿ ಚಾಲಕರಿಗೆ ಪಟ್ಟಣದಲ್ಲಿ ಸರಿಯಾದ ನಿಲ್ದಾಣವೂ ಇಲ್ಲದಂತೆ ಮಾಡಲಾಗುತ್ತಿದೆ. ರಾಷ್ಟ್ರೀಯ ಹೆದ್ದಾರಿ ವಿಸ್ತರಣೆ ಸಲುವಾಗಿ ಭಟ್ಕಳ ಪಟ್ಟಣದಲ್ಲಿ ಐಆರ್‌ಬಿ ಕಂಪನಿ ಅಧಿಕಾರಿಗಳು ಟ್ಯಾಕ್ಸಿಗಳ ಸ್ಥಳಾಂತರಕ್ಕೆ ಏಕಾಏಕಿ ಸೂಚಿಸುತ್ತಿದ್ದಾರೆ' ಎಂದು ಆರೋಪಿಸಿದರು. ಪ್ರಧಾನ ಕಾರ್ಯದರ್ಶಿ ಜಗದೀಶ ನಾಯ್ಕ, ಆಟೋಗಳ ಸಂಚಾರ ಮಿತಿ 7 ಕಿ.ಮೀ ಮಾತ್ರವೇ ಇದ್ದರೂ ಕಲವೊಂದು ಆಟೋಗಳು ಕುಂದಾಪುರ, ಉಡುಪಿ ಸೇರಿದಂತೆ ದೂರದ ಊರುಗಳಿಗೂ ಸಂಚರಿಸುತ್ತಿವೆ. ಖಾಸಗಿ ಜನರಿಗೆ ಖಾಸಗಿ ವಾಹನಗಳನ್ನು ಬಾಡಿಗೆಗೆ ನೀಡಲಾಗುತ್ತಿದೆ. ಅಧಿಕಾರಿಗಳಿಗೆ ಮನವಿ ನೀಡಿದರೂ ಸ್ಪಂದಿಸುತ್ತಿಲ್ಲ. ಹೊರರಾಜ್ಯದ ನೋಂದಣಿ ವಾಹನಗಳ ಓಡಾಟ ಪಟ್ಟಣ ವ್ಯಾಪ್ತಿಯಲ್ಲಿ ಹೆಚ್ಚುತ್ತಿದೆ. ಜೊತೆಗೆ ಅನ್ಯರಾಜ್ಯಗಳ ನೋಂದಣಿ ಸಂಖ್ಯೆ ಹೊಂದಿರುವ ಖಾಸಗಿ ಬಸ್‌ಗಳ ಸಂಚಾರವೂ ಅಧಿಕವಾಗಿದೆ ಎಂದು ದೂರಿದರು.

# ಅಫಜಲಪುರದಿಂದ ಬೆಂಗಳೂರಿಗೆ ಅಮೋಘವರ್ಷ ಬಸ್ ಪ್ರಾರಂಭ

• ಉದಯವಾಹಿನಿ ಅಫಜಲಪುರ

ಸುಮಾರು ವರ್ಷಗಳಿಂದ ಅಫಜಲಪುರ ಪಟ್ಟಣದಿಂದ ಬೆಂಗಳೂರಿಗೆ ಸ್ಲೀಪರ್ ಬಸ್ ಸೇವೆ ಪ್ರಾರಂಭ ಮಾಡಬೇಕೆಂದು ಸ್ಥಳೀಯರ ಬೇಡಿಕೆ ಸಾಕಾರಗೊಂಡಿದೆ. ಪಕ್ಕದ ಸಿಂದಗಿ ಶಾಸಕರ ಜತೆ ಚರ್ಚಿಸಿ ಅಲ್ಲಿಂದ ಅಫಜಲಪುರ ಪಟ್ಟಣದವರೆಗೆ ವಿಸ್ತರಣೆ ಮಾಡಲಾಗಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಕೆಕೆಆರ್‌ಟಿಸಿ ಅಧ್ಯಕ್ಷ ಅರುಣಕುಮಾರ ಎಂ.ವೈ.ಪಾಟೀಲ್ ತಿಳಿಸಿದರು. ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಕಲಬುರಗಿ ವಿಭಾಗಕ್ಕೆ-2 ವ್ಯಾಪ್ತಿಯಲ್ಲಿ ಬರುವ ಅಫಜಲಪುರ ಘಟಕದಿಂದ ಬೆಂಗಳೂರಿಗೆ ತೆರಳುವ ಅಮೋಘವರ್ಷ ನಾನ್ ಎ.ಸಿ.ಸ್ಲೀಪರ್ ಬಸ್‌ಗೆ ಚಾಲನೆ ನೀಡಿ ಮಾತನಾಡಿದರು.

ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಸರಕಾರಿ ಬಸ್‌ಗಳಲ್ಲಿ ಪ್ರಯಾಣ ಮಾಡಬೇಕು. ಅಂದಾಗ ಮಾತ್ರ ಇಂತಹ ಹತ್ತಾರು ಹೊಸ ಮಾರ್ಗಗಳು ಪ್ರಾರಂಭ ಮಾಡಲು ಅನುಕೂಲವಾಗಲಿದೆ. ಅಲ್ಲದೇ ಖಾಸಗಿ ವಾಹನಗಳಲ್ಲಿ ಜನಸಂಖ್ಯೆ ಆಧಾರದಲ್ಲಿ ಬೆಲೆ ಏರಿಳಿತ ಮಾಡುತ್ತಾರೆ. ಆದರೆ ಸರಕಾರಿ ಬಸ್‌ಗಳಲ್ಲಿ ಯಾವತ್ತು ಕೂಡ ಒಂದೇ ದರ ನಿಗದಿಪಡಿಸಿರುತ್ತಾರೆ. ಇನ್ನೂ 4 ತಿಂಗಳಲ್ಲಿ ಹೊಸದಾಗಿ 56 ಬಸ್‌ಗಳು ಬರಲಿವೆ. ಆ ಸಂದರ್ಭದಲ್ಲೂ ಅಫಜಲಪುರಕ್ಕೆ ಹೊಸ ಬಸ್ ನೀಡಲಾಗುವುದು. ಅದಲ್ಲದೇ ಪಟ್ಟಣದಿಂದ ಉಜ್ಜಯನಿಗೆ ಹೊಸದಾಗಿ ಶೀಘ್ರವೇ ಬಸ್ ಪ್ರಾರಂಭ ಮಾಡಲಾಗುವುದು ಎಂದು ತಿಳಿಸಿದರು. ತಹಶೀಲ್ದಾರ್ ಸಂಜೀವಕುಮಾರ ದಾಸರ ಮಾತನಾಡಿ, ಕೆಕೆಆರ್‌ಟಿಸಿ ಅಧ್ಯಕ್ಷರಾಗಿ ಅರುಣಕುಮಾರ ಪಾಟೀಲ್ ಅಧಿಕಾರವಹಿಸಿಕೊಂಡ ನಂತರ ಅಫಜಲಪುರದಿಂದ ಶ್ರೀಶೈಲಕ್ಕೆ, ಈಗ ಅಮೋಘವರ್ಷ ಬಸ್ ಅಫಜಲಪುರದಿಂದ ಬೆಂಗಳೂರಿಗೆ ಪ್ರಾರಂಭ ಮಾಡಿರುವುದು ಶ್ಲಾಘನೀಯವಾಗಿದೆ. ಮುಂದಿನ ದಿನಗಳಲ್ಲಿಅಫಜಲಪುರ ಮಾರ್ಗವಾಗಿ ತೀರ್ಥಕ್ಷೇತ್ರಗಳಿಗೆ ಸೇರಿ ಅನ್ಯ ರಾಜ್ಯಗಳಿಗೆ ತೆರಳುವ ಪ್ರಯಾಣಿಕರಿಗೆ ಅನುಕೂಲವಾಗಲಿದೆ ಎಂದರು.

ಪುರಸಭೆ ಮುಖ್ಯಾಧಿಕಾರಿ ಫಕ್ರೂದ್ದಿನ್, ಸಾರಿಗೆ ಘಟಕ ವ್ಯವಸ್ಥಾಪಕ ಎ.ವಿ.ಭೋವಿ, ಮುಖಂಡರಾದ ಸಂಗ್ರಾಮಗೌಡ ಪಾಟೀಲ, ಶರಣು ಕುಂಬಾರ, ಚಂದ್ರಶೇಖರ ಕರಜಗಿ, ಎಸ್. ಎಸ್.ಪಾಟೀಲ, ಕಲ್ಯಾಣಿ ಸಿಂದಗೇರಿ, ಬಸಣ್ಣ ಗುಣಾರಿ, ಮಹಾನಿಂಗ ಅಂಗಡಿ, ಪ್ರೀತಮ್ ಚೌವ್ಹಾಣ, ಗೌತಮ್ಮ ಸಕ್ಕರಗಿ, ಬಸವರಾಜ ಜಮಾದಾರ, ಇರ್ಫಾನ್ ಜಮಾದಾರ, ಶಕೀಲ್ ವಡಾಳೆ, ಬಿಸ್ಮಿಲ್ಲಾಶೇಖ, ಅಂಬರೀಶ ಬುರಲಿ, ವಿಶ್ವನಾಥ ಮಲಘಾಣ, ಶಾಂತು ಪಾಟೀಲ್ ಸೊನ್ನ, ಸಂತೋಷ ಮನ್ಮಿ, ನಾಗೇಶ ಬಿಲ್ಲಾಡ, ಅಜರ ಮಣೂರ, ಬಸಯ್ಯ ನಂದಿಕೋಲ ಹಾಗೂ ಸಾರಿಗೆ ನಿಗಮ ಸಿಬ್ಬಂದಿ, ಶಾರದಾ, ಬೈಲಪ್ಪ ಇದ್ದರು.




ಉದಯವಾಹಿನಿ ಚಿತ್ರ

- ಶೀಘ್ರವೇ ಉಜ್ಜಯಿನಿಗೆ ಬಸ್ , ಕಲ್ಯಾಣಕ್ಕೆ 4 ತಿಂಗಳಲ್ಲಿ 56 ಹೊಸ ಬಸ್‌ಗಳ ನಿರೀಕ್ಷೆ
- ಅಫಜಲಪುರದಿಂದ ಶ್ರೀಶೈಲಕ್ಕೆ, ಈಗ ಅಮೋಘವರ್ಷ ಬಸ್ ಅಫಜಲಪುರದಿಂದ ಬೆಂಗಳೂರಿಗೆ ಪ್ರಾರಂಭ ಮಾಡಿರುವುದು ಶ್ಲಾಘನೀಯ
- ಮುಂದಿನ ದಿನಗಳಲ್ಲಿಅಫಜಲಪುರ ಮಾರ್ಗವಾಗಿ ತೀರ್ಥಕ್ಷೇತ್ರಗಳಿಗೆ ಸೇರಿ ಅನ್ಯ ರಾಜ್ಯಗಳಿಗೆ ತೆರಳುವ ಪ್ರಯಾಣಿಕರಿಗೆ ಅನುಕೂಲ
- ಇನ್ನೂ 4 ತಿಂಗಳಲ್ಲಿ ಹೊಸದಾಗಿ 56 ಬಸ್‌ಗಳು ಬರಲಿವೆ

# ಕೆರೆ ಹೂಳೆತ್ತುವ ಸಮಾಲೋಚನಾ ಸಭೆ

• ಉದಯವಾಹಿನಿ ನವಲಗುಂದ

ಕುಡಿಯುವ ನೀರಿನ ಕೆರೆಗಳು ಗ್ರಾಮೀಣ ಜನತೆಯ ಜೀವನಾಡಿಯಾಗಿವೆ. ಅವರ ಆಶಯದಂತೆ ಅವುಗಳನ್ನು ಪುನಶ್ಚೇತನಗೊಳಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಬೇಸಿಗೆ ಸಮಯದಲ್ಲಿ ನೀರಿಗಾಗಿ ಪರದಾಡುವ ಪರಿಸ್ಥಿತಿಯು ಪ್ರತಿ ದಿನ ಹಳ್ಳಿ ಮತ್ತು ಪಟ್ಟಣ ಪ್ರದೇಶ ಗಳಲ್ಲಿ ಕಂಡುಬರುತ್ತಿದೆ. ಇದಕ್ಕೆ ಶಾಶ್ವತ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ ಕೆರೆಗಳ ಅಭಿವೃದ್ಧಿಯನ್ನು ಮಾಡಲಾಗುತ್ತಿದೆ ಎಂದು ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಗದಗ ಜಿಲ್ಲಾ ನಿರ್ದೇಶಕರಾದ ಕೇಶವ ದೇವಾಂಗ ಹೇಳಿದರು. ಅವರು ತಾಲ್ಲೂಕಿನ ಗುಮ್ಮಗೋಳ ಗ್ರಾಮದ ಸರ್ಕಾರಿ ಕುಡಿಯುವ ನೀರಿನ ಕೆರೆ ಹೂಳೆತ್ತುವ ಕಾಮಗಾರಿ ಪ್ರಯುಕ್ತ ಗ್ರಾಮ ಪಂಚಾಯತ ಸಭಾಭವನದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಸಮಾಲೋಚನೆ ಸಭೆ ಉದ್ಘಾಟಿಸಿ ಮಾತನಾಡಿದರು. ನೂತನವಾಗಿ ಕೆರೆ ಅಭಿವೃದ್ಧಿ ಸಮಿತಿ ಅಧ್ಯಕ್ಷರಾಗಿ ಕೆಂಪೇಗೌಡ ಪಾಟೀಲ ಹಾಗೂ ಪದಾಧಿಕಾರಿಗಳಾಗಿ ಮಹಾದೇವಗೌಡ ಮುಲ್ಕಿಪಾಟೀಲ, ಷಣ್ಮುಖಪ್ಪ ಜಾವೂರ, ರಾವಸಾಹೇಬ ದೇಸಾಯಿ ಆಯ್ಕೆಯಾದರು.


ಉದಯವಾಹಿನಿ ಚಿತ್ರ

# ಮನುಷ್ಯರ ದುರಾಸೆ; ಪಕ್ಷಿ ಸಂಕುಲಕ್ಕೆ ಅಪಾಯ

• ಉದಯವಾಹಿನಿ ಹಗರಿಬೊಮ್ಮನಹಳ್ಳಿ

ಮನುಷ್ಯರ ದುರಾಸೆಗಾಗಿ ಪಕ್ಷಿ ಸಂಕುಲ ಅಪಾಯದಲ್ಲಿದೆ' ಎಂದು ಧಾರವಾಡದ ಪಕ್ಷಿತಜ್ಞ ಪ್ರಕಾಶ ಗೌಡರ ಆತಂಕ ವ್ಯಕ್ತಪಡಿಸಿದರು. ತಾಲ್ಲೂಕಿನ ಅಂಕಸಮುದ್ರ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಪ್ರಾದೇಶಿಕ ಅರಣ್ಯ ಇಲಾಖೆ, ಗ್ರೀನ್ ಎಚ್‌ಬಿಎಚ್ ಮತ್ತು ಬಿಎನ್ ಎಚ್‌ಎಸ್ ಸಹಯೋಗದಲ್ಲಿ ಹಮ್ಮಿಕೊಂಡಿದ್ದ 'ವಿಶ್ವ ವಲಸೆ ಹಕ್ಕಿ ದಿನ' ಮತ್ತು 'ವಿಶ್ವ ಜೌಗು ಪ್ರದೇಶ ದಿನಾಚರಣೆ'ಯಲ್ಲಿ ಮಾತನಾಡಿದರು. ಪಕ್ಷಿ ಸಂಕುಲ ಇಲ್ಲದೆ ಮಾನವ ಬದುಕಲಾರ, ಬೆಳಗಿನ ಜಾವ ಪಕ್ಷಿಧ್ವನಿ ಆಲಿಸಿದರೆ ಅದು ಧ್ಯಾನಕ್ಕೆ ಸಮ. ಪಕ್ಷಿಗಳಿಂದ ಪ್ರಕೃತಿಗೆ ನೀಡಿದ ಕೊಡುಗೆ ಅಪಾರ, ಆದರೆ ಹಣದ ಆಸೆಗಾಗಿ ಪಕ್ಷಿಗಳನ್ನು ಕೊಲ್ಲುವ ಅವುಗಳ ಕೊಕ್ಕರೆಯನ್ನು ಮಾರಾಟ ಮಾಡುವ ಘಟನೆಗಳು ಅವ್ಯಾಹತವಾಗಿ ನಡೆಯುತ್ತಿವೆ. ಈ ಕುರಿತು ಅರಿವು ಮೂಡಿಸುವ ಹೊಣೆ ವಿದ್ಯಾರ್ಥಿಗಳ ಮೇಲಿದೆ ಎಂದರು.

ವಿದೇಶದಿಂದ ವಲಸೆ ಬರುವ ಬಾರ್ ಹೆಡೆಡ್ ಗೂಸ್ ಮ್ಯಾಂಕ್ಸ್ ಶಿಯರ್ ವಾಟರ್ ಹಾಗೂ ಚಿಟಗುಬ್ಬಿ, ಹಾರ್ನ್‌ಬಿಲ್(ದಾಸಮಂಗಟ್ಟೆ) ಸೇರಿದಂತೆ ವಿವಿಧ ರೆಕ್ಕೆ ಮಿತ್ರರ ಜೀವನ ಚಕ್ರ ಕುರಿತು ಎಳೆಎಳೆಯಾಗಿ ಬಿಡಿಸಿದ ಕಥಾ ಹಂದರದ ಶೈಲಿ ಗಮನ ಸೆಳೆಯಿತು. ಜಿಲ್ಲಾ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ(ಎಸಿಎಫ್) ಡಿ.ಭಾಸ್ಕರ್ ಕಾರ್ಯಕ್ರಮ ಉದ್ಘಾಟಿಸಿ, ಬಾನಾಡಿಗಳು ಮತ್ತು ವನ್ಯಜೀವಿಗಳ ಆವಾಸ ಪ್ರದೇಶವನ್ನು ರಕ್ಷಿಸುವ ಹೊಣೆ ಯುವಕರ ಮೇಲಿದೆ, ಈ ಕುರಿತು ಪ್ರೌಢಶಾಲೆ ಹಂತದಿಂದಲೇ ವಿದ್ಯಾರ್ಥಿಗಳಿಗೆ ಅಂಕಸಮುದ್ರ ಪಕ್ಷಿಧಾಮದಲ್ಲಿನ ಜೀವವೈವಿಧ್ಯ ಕುರಿತು ಸಮಗ್ರ ಪರಿಚಯಿಸಬೇಕು ಎಂದರು.

# ಕನಸಿನಲ್ಲೂ ಗ್ರಹಿಸದ 'ಅನುದಾನ' ಶಾಸಕರಿಗೆ ಸನ್ಮಾನ

• ಉದಯವಾಹಿನಿ ಪುತ್ತೂರು

ಅಭಿವೃದ್ಧಿಯಲ್ಲಿ ರಾಜಕೀಯ ಮಾಡದ ಏಕೈಕ ಶಾಸಕ. ಮನವಿ ಕೊಟ್ಟು ನಾಲ್ಕೇ ತಿಂಗಳಿಗೆ ಅನುದಾನ ಮಂಜೂರು ಮಾಡುವ ಏಕೈಕ ಶಾಸಕರಿದ್ದರೆ ಅದು ಪುತ್ತೂರಿನ ಅಶೋಕ್ ರೈ. ಸತ್ತಿಕಲ್ ಒಡ್ಯದ ಕಯ ಎಂಬಲ್ಲಿ ಸೇತುವೆಗೆ ಹಣ ಮಂಜೂರಾಗುತ್ತದೆ. ನೂತನ ಸೇತುವೆಯಲ್ಲಿ ನಾವು ಓಡಾಡುತ್ತೇವೆ ಎಂಬ ನಂಬಿಕೆ ನಮಗೇ ಇರಲಿಲ್ಲ. ಆದರೆ ಅದನ್ನು ಸಾಬೀತು ಮಾಡಿದವರು ಅಶೋಕ್ ರೈ. ಇಚ್ಛಾಶಕ್ತಿ ಇದ್ದರೆ ಜನಪ್ರತಿನಿಧಿ ಹೇಗೆ ಕೆಲಸ ಮಾಡಬಹುದು ಎನ್ನವುದಕ್ಕೆ ಸಾಕ್ಷಿ ಈ ಶಾಸಕರು- ಇದು ಸತ್ತಿಕಲ್ ನಿವಾಸಿ ಪ್ರಗತಿಪರ ಕೃಷಿಕ ಗಂಗಾಧರ ರೈ ಅವರ ಮಾತು.

ಸತ್ತಿಕಲ್ ಒಡ್ಯದಗಯ ಸೇತುವೆಗೆ ರೂ.2.40 ಕೋಟಿ ಮಂಜೂರು ಮಾಡಿದ ಶಾಸಕರನ್ನು ಸನ್ಮಾನಿಸಿ ಅವರು ಮಾತನಾಡಿದರು. ಈ ಹಿಂದೆ ಎಲ್ಲಾ ಶಾಸಕರಿಗೂ ನೀಡಿದಂತೆ ಇವರಿಗೂ ಮನವಿ ನೀಡಿದ್ದೆವು. ಡಿವಿಯಿಂದ ಹಿಡಿದು ಸಂಜೀವ ಮಠಂದೂರು ತನಕ ಯಾವ ಶಾಸಕರನ್ನೂ ಬಿಡಲಿಲ್ಲ. ಆದರೆ ಅವರಿಂದ ಭರವಸೆ ಮಾತ್ರ ಬಂದಿತ್ತು. ಆದರೆ ಭರವಸೆಯೇ ಕೊಡದೆ ನೇರವಾಗಿ ಸೇತುವೆಯನ್ನೇ ನೀಡಿದ ಅಶೋಕ್ ರೈ ಅವರನ್ನು ಮತ್ತಷ್ಟು ಕಾಲದ ಪುತ್ತೂರಲ್ಲಿ ಶಾಸಕರಾಗಿ ನಾವು ಉಳಿಸಿಕೊಳ್ಳಬೇಕು. ಇಲ್ಲವಾದರೆ ನಮಗೆ ದೊಡ್ಡ ನಷ್ಟವಾಗಲಿದೆ. 40 ವರ್ಷಗಳ ಸೇತುವೆ ಹೋರಾಟಕ್ಕೆ ಈ ಶಾಸಕರಿಂದ ನ್ಯಾಯ ದೊರಕಿದೆ. ಎಲ್ಲಾ ವಿಧಾನಸಭಾ ಕ್ಷೇತ್ರಗಳಿಗೂ ಇಂತಹ ಶಾಸಕರು ಸಿಕ್ಕಿದರೆ ನಿಜವಾದ ಅರ್ಥದಲ್ಲಿ ರಾಮರಾಜ್ಯ ನಿರ್ಮಾಣವಾಗುತ್ತದೆ ಎಂದವರು ಹೇಳಿದರು.

ಸ್ಥಳೀಯರಾದ ವೆಂಕಟ್ರಮಣ ಭಟ್ ಅವರು ಮಾತನಾಡಿ, ಕನಸಿನಲ್ಲಿಯೂ ಗ್ರಹಿಸದ ಅನುದಾನ ನಮ್ಮ ಸೇತುವೆಗೆ ಬಂದಿದೆ. ನಮ್ಮ ಬೇಡಿಕೆ ಈಡೇರಿದೆ. ಇದು ಪುತ್ತೂರಿನ ಶಾಸಕರಿಂದ ಮಾತ್ರ ಸಾಧ್ಯ. ಏನೇ ಬರಲಿ. ಶಾಸಕರ ಜತೆಗೆ ನಾವಿದ್ದೇವೆ. ನಮ್ಮ ಎಲ್ಲರ ಬೆಂಬಲ ಅವರಿಗಿದೆ. ಭರವಸೆ ಕೊಟ್ಟು ಮಂಗ ಮಾಡುವಜನಪ್ರತಿನಿಧಿಗಳಿಂದ ನಮಗೆ ಅಭಿವೃದ್ಧಿಪರ ಚಿಂತನೆಯ ಅಭಿವೃದ್ಧಿ ಹರಿಕಾರರಾದ ಇಂತಹ ಶಾಸಕರು ಬೇಕು ಎಂದರು.


ಉದಯವಾಹಿನಿ ಚಿತ್ರ

# ನರಿಬೋಳ ಚಾಮನೂರು ಸೇತುವೆ: ಗೊಂದಲ ತಂದ ಶಾಸಕರ ಪ್ರಶ್ನೆ

• ಉದಯವಾಹಿನಿ ಕಲಬುರಗಿ

ನರಿಬೋಳ ಚಾಮನೂರಿನ ಅಪೂರ್ಣ ಸೇತುವೆ ಕುರಿತ ಶಾಸಕ ಅಲ್ಲಮಪ್ರಭು ಪಾಟೀಲರು ಸದನದಲ್ಲಿ ಪ್ರಶ್ನೆ ಮಾಡಿದ್ದು ಸ್ವಾಗತ. ಆದರೆ ಕೇಳಬೇಕಾಗಿದ್ದಸಂದರ್ಭದಲ್ಲಿ ಕೇಳದೆ ಈಗ ಕೇಳಿದ್ದು ಯಕ್ಷ ಪ್ರಶ್ನೆಯಾಗಿದೆ ಗೊಂದಲಕ್ಕೆ ಈಡು ಮಾಡಿದೆ. ಎಂದು ಕಲ್ಯಾಣ ಕರ್ನಾಟಕ ಪ್ರತ್ಯೇಕ ರಾಜ್ಯ ಹೋರಾಟ ಸಮಿತಿ ಅಧ್ಯಕ್ಷ ಎಂ ಎಸ್ ಪಾಟೀಲ ನರಿಬೋಳ ಹೇಳಿದ್ದಾರೆ.

ಸೇತುವೆ ನಿರ್ಮಾಣ ಕುರಿತು ನಿರಂತರವಾಗಿ ಹೋರಾಟ ನಡೆಯುತ್ತಿದ್ದರೂ, ಅದರ ಕುರಿತು ಮಾತಾಡದವರು ಸೇತುವೆ ಕೊಚ್ಚಿಕೊಂಡು ಹೋಗಿರುವಾಗ ಮಾತಾಡದವರು ಈಗ ದುಡ್ಡು ಬಿಡುಗಡೆ ಆಗಿರುವಂತಹ ಸಂದರ್ಭದಲ್ಲಿ ಇನ್ನೇನು ಸೇತುವೆಗೆ ಹೊಸ ಟೆಂಡರ್ ಕರೆಯುವ ಪ್ರಯತ್ನದಲ್ಲಿ ಇರುವಾಗ ಶಾಸಕ ಅಲ್ಲಮಪ್ರಭು ಪಾಟೀಲರು ಪ್ರಶ್ನೆ ಮಾಡಿರುವುದು ಅನುಮಾನಕ್ಕೆ ಆಸ್ಪದವಾಗಿದೆ. ಅದರಲ್ಲಿ ತಮ್ಮ ಸರ್ಕಾರವೆ ಇರುವಂತಹ ಸಂದರ್ಭದಲ್ಲಿ ಅಧಿಕಾರಿಗಳ ಮೂಲಕ ವಿಷಯ ತಿಳಿದುಕೊಂಡು ಗುತ್ತಿಗೆದಾರರ ಮೇಲೆ ಕ್ರಮಕ್ಕೆ ಆಗ್ರಹಿಸುವುದು ಬಿಟ್ಟು, ಸಾಮಾನ್ಯ ಜನ ಕೇಳುವಂತೆ ಪ್ರಶ್ನೆಯನ್ನು ಕೇಳಿರುವುದು ಅರ್ಥವಾಗುತ್ತಿಲ್ಲ. ಪ್ರಶ್ನೆ ಕೇಳಿದ್ದು ಸ್ವಾಗತವೆ. ಆದರೆ ಇದೆ ಪ್ರಶ್ನೆ ಹೋರಾಟ ನಡೆಯುವಂತಹ ಸಂದರ್ಭದಲ್ಲಿ ಅಥವಾ ಸೇತುವೆ ಕೊಚ್ಚಿ ಕೊಂಡುಣ ಹೋದ ಸಂದರ್ಭದಲ್ಲಿ ಕೇಳದೆ ಈಗ ಕೇಳಿರುವುದು ಎರಡು ಗ್ರಾಮದ ಜನರು ಗೊಂದಲಕ್ಕೆ ಕಾರಣವಾಗಿದೆ. ಹಾಗಾಗಿ ಶಾಸಕರು ಈ ವಿಷಯ ಸ್ಪಷ್ಟಪಡಿಸಬೇಕು. ಪ್ರಶ್ನೆ ಕೇಳಿದ್ದು ಕೆ ಎಂ ವಿ ಕಂಪನಿಯನ್ನು ಕಪ್ಪು ಪಟ್ಟಿಗೆ ಸೇರಿಸಲು ಪ್ರಯತ್ನಿಸಲೋ ? ಅಥವಾ ಅದೇ ಕಂಪನಿಗೆ ಮತ್ತೆ ಟೆಂಡರ್ ಕೊಡಿಸಲೋ ಎನ್ನುವುದು ಸ್ಪಷ್ಟವಾಗಬೇಕು.



ಇಲ್ಲದಿದ್ದರೆ ಸೇತುವೆ ಕೆಲಸ ಪ್ರಾರಂಭವಾಗುವ ಸಂದರ್ಭ ಪ್ರಶ್ನೆ ಕೇಳಿ ನಾವು ಪ್ರಯತ್ನ ಮಾಡಿದ್ದೇವೆ ಎಂದು ತೋರಿಸುವ ತಂತ್ರವೆಂದೇ ಹೇಳಬೇಕಾಗುತ್ತದೆ. ಎಂತಹದೇ ಸಂದರ್ಭ ಬಂದರೂ ಕೆಎಂವಿ ಕಂಪನಿಯವರಿಂದ ಕೆಲಸ ಮಾಡಲು ಬಿಡುವುದಿಲ್ಲ. ಅವರೇನಾದರೂ ಟೆಂಡರನಲ್ಲಿ ಭಾಗವಹಿಸಿದರೆ ಅಂದಿನಿಂದಲೆ ಜಿಲ್ಲಾಧಿಕಾರಿಗಳ ಕಛೇರಿ ಎದುರು ಹೋರಾಟ ಪ್ರಾರಂಭಿಸುತ್ತೇವೆ ಎಂದು ಎಂ ಎಸ್ ಪಾಟೀಲ ನರಿಬೋಳ ತಿಳಿಸಿದ್ದಾರೆ.

# ಅಂಗನವಾಡಿಗಳಿಗೆ ಸ್ವಂತ ಕಟ್ಟಡ ಗುರುತಿಸಿ

• ಉದಯವಾಹಿನಿ ಶಿವಮೊಗ್ಗ

ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಿಸಲು ನಿವೇಶನ ಗುರುತಿಸುವಂತೆ ಹಾಗೂ ಅಮೃತ ನಗರೋತ್ಥಾನ ಯೋಜನೆಯಡಿ ಮಂಜೂರಾದ ಅಂಗನವಾಡಿಗಳ ಕಟ್ಟಡ ಕಾಮಗಾರಿ ಮಾರ್ಚ್ ಒಳಗೆ ಪೂರ್ಣಗೊಳಿಸುವಂತೆ ಜಿಲ್ಲಾಧಿಕಾರಿ ಪ್ರಭುಲಿಂಗ ಕವಳಿಕಟ್ಟಿ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಿದ್ದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವಿವಿಧ ಕಾರ್ಯಕ್ರಮಗಳ ಸಮನ್ವಯ ಸಮಿತಿ ಹಾಗೂ ಮಕ್ಕಳ ರಕ್ಷಣಾ ಘಟಕದ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಒಟ್ಟು 2,563 ಅಂಗನವಾಡಿ ಕೇಂದ್ರಗಳಿದ್ದು, 2,065 ಸ್ವಂತ ಕಟ್ಟಡದಲ್ಲಿ, 106 ಶಾಲಾ ಕಟ್ಟಡದಲ್ಲಿ, 96 ಇತರೆ ಕಟ್ಟಡದಲ್ಲಿ ಮತ್ತು 296 ಬಾಡಿಗೆ ಕಟ್ಟಡದಲ್ಲಿವೆ. ನಗರದಲ್ಲಿ 180 ಮತ್ತು ಗ್ರಾಮೀಣ ಭಾಗದಲ್ಲಿ 70 ನಿವೇಶನಗಳ ಅವಶ್ಯಕತೆ ಇದ್ದು, ಆಯಾ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಖಾಲಿ ನಿವೇಶನಗಳನ್ನು ಗುರುತಿಸಿ, ಸ್ವಂತ ಕಟ್ಟಡ ನಿರ್ಮಿಸಲು ಕ್ರಮ ವಹಿಸಬೇಕು. ಶಿವಮೊಗ್ಗ ನಗರದಲ್ಲಿ ಆದ್ಯತೆ ಮೇರೆಗೆ ನಿವೇಶನ ಗುರುತಿಸುವ ಕೆಲಸವಾಗಬೇಕು ಎಂದು ಸಿಡಿಪಿಒಗಳಿಗೆ ಸೂಚಿಸಿದರು.

ಅಮೃತ ನಗರೋತ್ಥಾನ ಯೋಜನೆಯಡಿ ಏಳು ತಾಲ್ಲೂಕುಗಳಿಗೆ ಮಂಜೂರಾಗಿರುವ ಅಂಗನವಾಡಿ ಕಟ್ಟಡಗಳ ನಿರ್ಮಾಣ ಕಾರ್ಯ ವಿವಿಧ ಹಂತದಲ್ಲಿದ್ದು, ಮಾರ್ಚ್ ಅಂತ್ಯದೊಳಗೆ ಪೂರ್ಣಗೊಳಿಸುವಂತೆ ಸೂಚಿಸಿದರು. ದೌರ್ಜನ್ಯಕ್ಕೆ ಒಳಗಾದ ಮಹಿಳೆಯರಿಗೆ ಒಂದೇ ಸೂರಿನಡಿ ವೈದ್ಯಕೀಯ ಚಿಕಿತ್ಸೆ ಮತ್ತು ನೆರವು, ಪೊಲೀಸ್ ನೆರವು, ಕಾನೂನು ನೆರವು, ಸಮಾಲೋಚನೆ ಮತ್ತು ತಾತ್ಕಾಲಿಕ ಆಶ್ರಯ ವ್ಯವಸ್ಥೆ ನೀಡಲಾಗುತ್ತದೆ. ಪ್ರಸ್ತುತ 177 ಪ್ರಕರಣಗಳಿದ್ದು, ಕೇಂದ್ರದಲ್ಲಿ ನೀಡಬೇಕಾದ ಸೇವೆಗಳನ್ನು ಸಕಾಲದಲ್ಲಿ ಒದಗಿಸಿ ಪ್ರಕರಣಗಳನ್ನು ಇತ್ಯರ್ಥಪಡಿಸಬೇಕು' ಎಂದು ತಿಳಿಸಿದರು.

# ಶಿವಾನಂದ ಗ್ರಾಮೀಣ ವಿದ್ಯಾಪೀಠ ಜ್ಞಾನಕೇಂದ್ರವಾಗಿ ಬೆಳೆಯಲಿ

• ಉದಯವಾಹಿನಿ ಹುಕ್ಕೇರಿ

ಗ್ರಾಮೀಣ ಪ್ರದೇಶದ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ದೊರೆಯಲೆಂಬ ಉದ್ದೇಶದಿಂದ ಶಿವಾನಂದ ಗ್ರಾಮೀಣ ವಿದ್ಯಾಪೀಠಕ್ಕೆ 9 ಎಕರೆ ಜಮೀನು ಮಂಜೂರುಗೊಳಿಸಿದ್ದು ಮಹತ್ವದ ಹೆಜ್ಜೆಯಾಗಿದ್ದು, ಮುಂದಿನ ದಿನಗಳಲ್ಲಿ ಈ ವಿದ್ಯಾಪೀಠವು ಜ್ಞಾನಕೇಂದ್ರವಾಗಿ ಬೆಳೆಯಲಿ ಎಂದು ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ತಾಲ್ಲೂಕಿನ ಘೋಡಗೇರಿ ಗ್ರಾಮದ ಶಿವಾನಂದ ಗ್ರಾಮೀಣ ವಿದ್ಯಾಪೀಠಕ್ಕೆ ಸರ್ಕಾರದ ವತಿಯಿಂದ ಶೈಕ್ಷಣಿಕ ಉದ್ದೇಶಕ್ಕಾಗಿ 9 ಎಕರೆ ಜಮೀನು ಮಂಜೂರುಗೊಳಿಸಿದ ಹಿನ್ನೆಲೆ ಮಠದ ಆಡಳಿತ ಮಂಡಳಿ ಹಾಗೂ ಸದ್ಭಕ್ತರು ಆಯೋಜಿಸಿದ್ದ ಅಭಿನಂದನಾ ಸಮಾರಂಭದಲ್ಲಿ ಸತ್ಕಾರ ಸ್ವೀಕರಿಸಿ ಮಾತನಾಡಿದರು. ಕಳೆದ 30 ವರ್ಷಗಳ ರಾಜಕೀಯದಲ್ಲಿ ನಾವು ಮೊದಲ ಪ್ರಾಶಸ್ತ್ರವನ್ನು ಶಿಕ್ಷಣಕ್ಕೆ ನೀಡುತ್ತಿದ್ದೇವೆ. ಕ್ಷೇತ್ರದಲ್ಲಿ ಶೇ 99ರಷ್ಟು ಶಾಲಾ-ಕಾಲೇಜುಗಳನ್ನು ಅಭಿವೃದ್ಧಿಗೊಳಿಸಿದ್ದು, ಮುಂದೆಯೂ ಈ ಕೆಲಸ ನಿರಂತರವಾಗಿ ನಡೆಯಲಿದೆ ಎಂದರು.


ಉದಯವಾಹಿನಿ ಚಿತ್ರ


ಅಥಣಿ ತಾಲ್ಲೂಕಿನ ಕಕಮರಿ ಮಠದ ಅಭಿನವ ಗುರುಲಿಂಗ ಜಂಗಮ ಮಹಾಸ್ವಾಮೀಜಿ ಮಾತನಾಡಿ, ಮಾತು ಬೆಳ್ಳಿ, ಮೌನ ಬಂಗಾರವೆಂಬ ಗಾದೆಯಂತೆ ಕಾರ್ಯ ನಿರ್ಮಹಿಸುತ್ತಿರುವ ಸಚಿವ ಸತೀಶ್ ಜಾರಕಿಹೊಳಿ ಅವರು ರಾಜ್ಯದ ಮುಖ್ಯಮಂತ್ರಿಯಾಗಬೇಕು. ಮುಖ್ಯಮಂತ್ರಿಯಾದರೆ ಮಾತ್ರ ಉತ್ತರ ಕರ್ನಾಟಕ ಅಭಿವೃದ್ಧಿ ಹೊಂದಲು ಸಾಧ್ಯವಿದೆ ಎಂದರು. ಶಿವಾನಂದ ಮಠದ ಮಲ್ಲಯ್ಯ ಸ್ವಾಮೀಜಿ ಮಾತನಾಡಿ, 9 ಎಕರೆ ಸರ್ಕಾರದಿಂದ ಜಮೀನು ಮಂಜೂರುಗೊಳಿಸಿದ್ದಕ್ಕೆ ಧನ್ಯವಾದ ತಿಳಿಸಿದರು. ಹುಕ್ಕೇರಿ ಕ್ಯಾರಗುಡ್ಡ ಅವುಜಿಕರ ಆಶ್ರಮದ ಅಭಿನವ ಮಂಜುನಾಥ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು.

# ಆದಾಯೋತ್ಪನ್ನ ಚಟುವಟಿಕೆ ಕೈಗೊಳ್ಳಲು ಸಹಕಾರ

• ಉದಯವಾಹಿನಿ ಶೆಟ್ಟಿಕೊಪ್ಪ

ಮಾಸಿಕ ಸಂತೆಗಳು ಎನ್‌ಆರ್‌ಎಲ್‌ಎಂ ಸಂಜೀವಿನಿಯಡಿ ಬರುವ ಮುಖ್ಯ ಕಾರ್ಯಕ್ರಮ ಎಂದು ತಾಲ್ಲೂಕು ಸಂಜೀವಿನಿ ಸಂಘಗಳ ಕಾರ್ಯಕ್ರಮ ವ್ಯವಸ್ಥಾಪಕ ಸುಬ್ರಹ್ಮಣ್ಯ ಹೇಳಿದರು. ಶೆಟ್ಟಿಕೊಪ್ಪ ಗ್ರಾಮದ ಗಣಪತಿ ಪೆಂಡಾಲ್‌ನಲ್ಲಿ ನಡೆದ ಶೆಟ್ಟಿಕೊಪ್ಪ ಸಂಜೀವಿನಿ ಒಕ್ಕೂಟದ ಮಾಸಿಕ ಸಂತೆಯಲ್ಲಿ ಅವರು ಮಾತನಾಡಿದರು.

ಸ್ವಸಹಾಯ ಸಂಘದ ಎಲ್ಲಾ ಸದಸ್ಯರಿಗೆ ಕೃಷಿ ಮತ್ತು ಕೃಷಿಯೇತರ ಉತ್ಪನ್ನಗಳನ್ನು ಮಾರಾಟ ಮಾಡಲು ವೇದಿಕೆ ಕಲ್ಪಿಸಲಾಗುವುದು. ಯಾವುದೇ ಮಧ್ಯವರ್ತಿಗಳ ಹಾವಳಿಯಿರುವುದಿಲ್ಲ. ಇದೇ ಮಾಸಿಕ ಸಂತೆಗಳು ಮುಂದೆಹಳ್ಳಿ ಸಂತೆಗಳಾಗಿ, ಗ್ರಾಮ ಸಂತೆಗಳಾಗಿ ಬದಲಾವಣೆಯಾಗಲಿವೆ. ನಂತರ ಗ್ರಾಮಗಳಲ್ಲಿ ನಿರಂತರ ಸಂತೆ ನಡೆಯುವಂತೆ ಪ್ರೋತ್ಸಾಹಿಸಲಾಗುವುದು. ಸ್ವಸಹಾಯ ಸಂಘದ ಸದಸ್ಯರಿಗೆ ಆದಾಯೋತ್ಪನ್ನ ಚಟುವಟಿಕೆ ಕೈಗೊಳ್ಳಲು ಸಹಕಾರ ನೀಡಲಾಗುವುದು. ಆಮೂಲಕ ವಿವಿಧೆಡೆಗಳಲ್ಲಿ ನಡೆಯುವ ಜಾತ್ರೆ, ಕೃಷಿ ಮೇಳ, ಹಬ್ಬ ಹರಿದಿನಗಳಲ್ಲಿ ನಡೆಯುವ ಕಾರ್ಯಕ್ರಮಕ್ಕೆ ಸಂಘದ ಸದಸ್ಯರು ಎಸ್.ಎಚ್.ಜಿಸ್ಟಾಲ್‌ಗಳನ್ನು ಹಾಕಿ ತಾವೇ ಬೆಳೆದ ಉತ್ಪನ್ನ ಮಾರಾಟ ಮಾಡಬಹುದು ಎಂದರು. ಕಡಹಿನಬೈಲು ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ಸುನಿಲ್ ಕುಮಾರ್ ಮಾತನಾಡಿ, ಮಹಿಳಾ ಸಬಲೀಕರಣಕ್ಕೆ ಹಾಗೂ ಸ್ವಾವಲಂಬಿಗಳಾಗಿ ಬದುಕಲು ಸಂಜೀವಿನಿ ಸಂಘಗಳು ಮಹಿಳೆಯರಿಗೆ ಉಪಯುಕ್ತವಾಗಿವೆ ಎಂದರು. ಅಧ್ಯಕ್ಷತೆ ವಹಿಸಿದ್ದ ಕಡಹಿನಬೈಲು ಗ್ರಾಮ ಪಂಚಾಯಿತಿ ಸಂಜೀವಿನಿ ಒಕ್ಕೂಟದ ಅಧ್ಯಕ್ಷೆ ವಿಂದ್ಯಾ ಹೆಗ್ಡೆ ಮಾತನಾಡಿ, ಒಕ್ಕೂಟದಲ್ಲಿ 39 ಸ್ವಸಹಾಯ ಸಂಘಗಳಿದ್ದು, 20ಕ್ಕೂ ಹೆಚ್ಚು ಸ್ವಸಹಾಯ ಸಂಘಗಳು ತಾವೇ ಸ್ವಂತವಾಗಿ ಬೆಳೆದ ತರಕಾರಿ, ಗೆಡ್ಡೆಗೆಣಸು, ಇತರೇ ಉತ್ಪನ್ನಗಳು ಹಾಗೂ ಕರಕುಶಲ ವಸ್ತುಗಳನ್ನು ಮಾಸಿಕ ಸಂತೆಗೆ ತಂದು ಮಾರಾಟ ಮಾಡುತ್ತಿವೆ. ಇದರಿಂದ ಆರ್ಥಿಕವಾಗಿ ಪ್ರಗತಿ ಸಾಧಿಸಲು ಸಾಧ್ಯ ಎಂದರು.


ಉದಯವಾಹಿನಿ ಚಿತ್ರ

# ಮನವಿಗಳ ಮಹಾಪೂರ: ಸಿಗದ ಶಾಶ್ವತ ಪರಿಹಾರ

## • ಕಾಡಾನೆಗಳ ಹಾವಳಿಯಿಂದ ತತ್ತರಿಸಿರುವ ಮಲೆನಾಡಿನ ಜನರು: ನಿತ್ಯ ಪ್ರಾಣಭಯದಲ್ಲೇ ಓಡಾಟ

• ಉದಯವಾಹಿನಿ ಹಾಸನ

ಜಿಲ್ಲೆಯಲ್ಲಿ ಹೆಚ್ಚುತ್ತಿರುವ ಕಾಡಾನೆ ಹಾವಳಿಯಿಂದ ಮಲೆನಾಡು ಭಾಗದ ಜನರು ತತ್ತರಿಸುತ್ತಲೇ ಇದ್ದಾರೆ. ಕೇಂದ್ರ-ರಾಜ್ಯ ಸರ್ಕಾರಗಳಿಗೆ ಮನವಿಗಳ ಮಹಾಪೂರವೇ ಹರಿದು ಬರುತ್ತಿದ್ದರೂ, ಶಾಶ್ವತ ಪರಿಹಾರ ಮತ್ರ ಇನ್ನೂ ಮರೀಚಿಕೆಯಾಗಿದೆ. ಸಾವು-ನೋವುಗಳ ಸಂದರ್ಭದಲ್ಲಿ ಪರಿಹಾರ ನೀಡಿ ಕೈತೊಳೆದುಕೊಳ್ಳುವ ಸರ್ಕಾರ, ಜನಪ್ರತಿನಿಧಿಗಳಿಂದ ಯಾವುದೇ ಶಾಶ್ವತ ಪರಿಹಾರ ಸಿಗುತ್ತಿಲ್ಲ ಎನ್ನುವ ಅಳಲು ತೋಡಿಕೊಳ್ಳುತ್ತಿದ್ದಾರೆ.

ಕಾಂಗ್ರೆಸ್ಸಿಗರು ಕೇಂದ್ರ ಸರ್ಕಾರದತ್ತ ಬೊಟ್ಟು ಮಾಡಿದರೆ, ಪ್ರತಿಪಕ್ಷಗಳ ನಾಯಕರು ರಾಜ್ಯ ಸರ್ಕಾರವನ್ನೇ ಹೊಣೆ ಮಾಡುತ್ತಿದ್ದಾರೆ. ಸಮನ್ವಯದಿಂದ ಒಟ್ಟಾಗಿ ಕೇಂದ್ರ-ರಾಜ್ಯ ಸರ್ಕಾರಗಳ ಮನವೊಲಿಸಿ, ಸಮಸ್ಯೆ ಪರಿಹರಿಸುವ ಪ್ರಾಮಾಣಿಕ ಪ್ರಯತ್ನ ಆಗುತ್ತಿಲ್ಲ ಎನ್ನುತ್ತಾರೆ ಸ್ಥಳೀಯ ಜನರು. ನಾಲ್ಕು ದಶಕಗಳಿಂದ ಆರಂಭವಾಗಿರುವ ಕಾಡಾನೆ ಸಮಸ್ಯೆ, ಬೆಳೆಯುತ್ತಲೇ ಇದೆಯೇ ಹೊರತು, ಕಡಿಮೆಯಾಗುವ ಲಕ್ಷಣಗಳು ಕಾಣುತ್ತಿಲ್ಲ. ಒಂದೆಡೆ ಪಶ್ಚಿಮ ಘಟ್ಟದ ತಮಿಳುನಾಡಿನಿಂದ ಮೈಸೂರಿನ ಮೂಲಕ ಆನೆಗಳು ಜಿಲ್ಲೆಯನ್ನು ಪ್ರವೇಶಿಸುತ್ತಿವೆ. ಇನ್ನೊಂದೆಡೆ ಕೇರಳ ಭಾಗದ ಆನೆಗಳು, ಕೊಡಗಿನ ಮೂಲಕ ಜಿಲ್ಲೆಗೆ ಬರುತ್ತಿವೆ. ಇತ್ತ ಭದ್ರಾ ಅಭಯಾರಣ್ಯದಲ್ಲಿರುವ ಆನೆಗಳೂ ಜಿಲ್ಲೆಯತ್ತ ಮುಖ ಮಾಡುತ್ತಿವೆ. ಇದರಿಂದಾಗಿ ಕಾಡನಿಂದ ಹೊರ ಬಂದಿರುವ ಸುಮಾರು 200 ಕ್ಕೂ ಹೆಚ್ಚು ಆನೆಗಳು ಜಿಲ್ಲೆಯಲ್ಲಿ ಸುತ್ತಾಡುತ್ತಿವೆ ಎನ್ನುವ ಮಾಹಿತಿ ಸ್ಥಳೀಯರು ನೀಡುತ್ತಿದ್ದಾರೆ. ಜಿಲ್ಲೆಯ ಬೇಲೂರು ಭಾಗದಲ್ಲಿ 60-70 ಕಾಡಾನೆಗಳಿವೆ. ಆಲೂರು ಭಾಗದಲ್ಲಿ 10, ಪಶ್ಚಿಮ ಘಟ್ಟದ ಯಸಳೂರು, ಬಿಸ್ಲೆ ಘಾಟ್ ಪ್ರದೇಶಗಳಲ್ಲಿ 100ಕ್ಕೂ ಅಧಿಕ ಆನೆಗಳಿವೆ. ಬೇಲೂರು ಭಾಗದ ಆನೆಗಳು ಕೆಲವೊಮ್ಮೆ ಚಿಕ್ಕಮಗಳೂರು ಜಿಲ್ಲೆಗೆ ಹೋಗುತ್ತಿದ್ದು, ಮತ್ತೆ ಬೇಲೂರು ತಾಲ್ಲೂಕಿನ ಬಿಕ್ಕೋಡು ಹೋಬಳಿಗೆ ಮರಳುತ್ತವೆ. ಇನ್ನು ಯಸಳೂರು, ಬಿಸ್ಲೆ ಘಾಟ್ ಪ್ರದೇಶದ ಆನೆಗಳು, ದಕ್ಷಿಣ ಕನ್ನಡ ಜಿಲ್ಲೆಯ ಸುಳ್ಯ, ಸುಬ್ರಹ್ಮಣ್ಯ, ಬೆಳ್ತಂಗಡಿ, ಚಾರ್ಮಾಡಿ, ಕೊಡಗು ಜಿಲ್ಲೆಗಳಲ್ಲಿ ಓಡಾಡುತ್ತಿವೆ.


ಆದರೆ, ಈ ಆನೆಗಳಿಗೆ ಎಲ್ಲಿಯೂ ಸಮರ್ಪಕವಾದ ಆಹಾರ ಸಿಗುತ್ತಿಲ್ಲ. ಹಾಗಾಗಿ ಗದ್ದೆ, ತೋಟಗಳಲ್ಲಿಯೇ ಬೀಡು ಬಿಟ್ಟಿವೆ. ಬೇಲೂರು ಭಾಗದ ಬಿಕ್ಕೋಡು, ಜಗಬೋರನಹಳ್ಳಿಯ ಸುತ್ತ ಮೆಕ್ಕೆಜೋಳ, ಭತ್ತ ಬೆಳೆದಿದ್ದು, ಬಹುತೇಕ ಆನೆಗಳು ಇದೇ ಭಾಗದಲ್ಲಿ ನೆಲೆ ನಿಂತಿವೆ. ರಾತ್ರಿ ಆಗುತ್ತಿದ್ದಂತೆಯೇ ತೋಟದಿಂದ ಹೊರಬರುವ ಆನೆಗಳು, ಬೆಳೆಗಳನ್ನು ತಿಂದು ಮತ್ತೆ ಕಾಫಿ ತೋಟಗಳಿಗೆ ಮರಳುತ್ತಿವೆ. ಜಿಲ್ಲೆಯ ಬೇಲೂರ ಸಕಲೇಶಪುರ ಭಾಗದಲ್ಲಿ 15-16 ವಯಸ್ಸಿನ 8 ಆನೆಗಳ ಹಿಂಡೊಂದು ಕಾಣಿಸಿಕೊಂಡಿದ್ದು, ಆಟೋಗಳು, ಮಾನವರ ಮೇಲೆ ದಾಳಿ ಮಾಡುತ್ತಿವೆ. ಈ ಆನೆಗಳು ಪಟಾಕಿ ಸೇರಿದಂತೆ ಯಾವುದೇ ಸದ್ದಿಗೆ ಹೆದರುತ್ತಿಲ್ಲ ಎನ್ನುವುದು ಅರಣ್ಯ ಇಲಾಖೆ ಸಿಬ್ಬಂದಿ ನೀಡುವ ಮಾಹಿತಿ. ಆನೆಗಳು ಯಾವ ಪ್ರದೇಶದಲ್ಲಿವೆ ಎನ್ನುವ ಮಾಹಿತಿಯನ್ನು ಮಾತ್ರ ಆನೆ ಕಾರ್ಯಪಡೆ ಸಿಬ್ಬಂದಿ ಒದಗಿಸುತ್ತಿದ್ದಾರೆ. ಆದರೆ, ತೋಟಗಳಿಗೆ ಹೋಗುವಾಗ ಆನೆ ಎದುರಾದರೆ, ಕಾರ್ಯಪಡೆ ಸಿಬ್ಬಂದಿ ಕೂಡ ಏನೂ ಮಾಡಲಾಗದ ಪರಿಸ್ಥಿತಿ ಇದೆ. ಒಮ್ಮೆಲೆ ಎದುರಾಗುವ ಆನೆಗಳು, ಮನುಷ್ಯರ ಮೇಲೆ ಏಕಾಏಕಿ ದಾಳಿ ಮಾಡುತ್ತಿವೆ. ಕೆಲವೊಮ್ಮೆ ಕೂದಲೆಳೆ ಅಂತರದಿಂದ ಪಾರಾದರೆ, ಆನೆಗಳ ದಾಳಿಗೆ ಸಿಲುಕಿ ಮೃತಪಡುವವರ ಸಂಖ್ಯೆಯೂ ಹೆಚ್ಚಾಗುತ್ತಿದೆ. ಜಿಲ್ಲೆಯಲ್ಲಿ ಇದುವರೆಗೆ ಕಾಡಾನೆಗಳ ದಾಳಿಯಿಂದ 85 ಕ್ಕೂ ಹೆಚ್ಚು ಜನರು ಪ್ರಾಣ ಕಳೆದುಕೊಂಡಿದ್ದಾರೆ. ಜೊತೆಗೆ ಬೆಳೆ ಹಾನಿಯೂ ವಿಪರೀತವಾಗುತ್ತಿದೆ ಎನ್ನುವುದು ಮಲೆನಾಡಿನ ಜನರ ಅಳಲು.


ಉದಯವಾಹಿನಿ ಚಿತ್ರ

### ಪರಿಹಾರ ಏನು?

ಜಿಲ್ಲೆಯ ಬಿಸಿಲೆ ಘಾಟ್ ಪ್ರದೇಶದಲ್ಲಿ 15 ಸಾವಿರ ಎಕರೆ ಸರ್ಕಾರಿ ಜಮೀನು 3500 ಎಕರೆ ಖಾಸಗಿ ಜಮೀನು ಸೇರಿದಂತೆ 20 ಸಾವಿರ ಎಕರೆ ಪ್ರದೇಶದಲ್ಲಿ ಆನೆ ಕಾರಿಡಾರ್ ನಿರ್ಮಾಣ ಮಾಡಬೇಕು ಎನ್ನುವ ಬೇಡಿಕೆ ಬಹುದಿನಗಳಿಂದ ಕೇಳಿ ಬರುತ್ತಲೇ ಇದೆ. ಈ ಹಿಂದೆಯೂ ಇದಕ್ಕೆ ಪ್ರಸ್ತಾವ ಸಲ್ಲಿಸಲಾಗಿತ್ತು. ಪಶ್ಚಿಮ ಘಟ್ಟದ ಅರಣ್ಯದ ಅಂಚಿನಲ್ಲಿರುವ ಸುಮಾರು 7 ಗ್ರಾಮಗಳ ಜನರು 2200 ಎಕರೆ ಜಮೀನು ನೀಡಲು ಮುಂದೆ ಬಂದಿದ್ದಾರೆ. ಆದರೆ ಎತ್ತಿನಹೊಳೆ ಯೋಜನೆಯ ಮಾದರಿಯಲ್ಲಿಯೇ ಎಕರೆಗೆ 15 ಲಕ್ಷ ಪರಿಹಾರ ಒದಗಿಸುವಂತೆ ಮನವಿ ಮಾಡಿದ್ದಾರೆ. ಕೇವಲ ಪರಿಹಾರ ವಿತರಣೆಗಾಗಿಯೇ ಜಮೀನಿನ ಭೂಸ್ವಾಧೀನಕ್ಕೆ 252 ಕೋಟಿ ಬೇಕು. ಜೊತೆಗೆ ಕಾಡಾನೆಗಳಿಗೆ ಅಗತ್ಯ ಸೌಕರ್ಯ ಕಲ್ಪಿಸಲು 20 ಕೋಟಿ ಸೇರಿದಂತೆ 275 ಕೋಟಿ ಅನುದಾನದ ಅಗತ್ಯವಿದೆ ಎನ್ನುತ್ತಾರೆ ಸಂಸದ ಶ್ರೇಯಸ್ ಪಟೇಲ್.

# ಈ ಕ್ಷೇತ್ರದಲ್ಲಿ ಮಿಂಚಬೇಕು ಎಂಬ ಕನಸು



**ಆರ್ಥಿಕ ಸಂಕಷ್ಟ ನೋಡಿ ತಮ್ಮ ನಿರ್ಧಾರ**

ಅಭಿಷೇಕ್ ಬಚ್ಚನ್ ಅವರಿಗೆ ಜನ್ಮದಿನ. ಬಾಲ್ಯದಲ್ಲಿ ನಟನಾಗುವ ಕನಸನ್ನು ಕಾಣದೆ, ಯಶಸ್ವಿ ಉದ್ಯಮಿಯಾಗಲು ಬಯಸಿದ್ದರು. ವಿದೇಶದಲ್ಲಿ ವ್ಯವಹಾರ ನಿರ್ವಹಣೆ ಕಲಿಯುತ್ತಿದ್ದಾಗ, ತಂದೆ ಅಮಿತಾಭ್ ಅವರ ಆರ್ಥಿಕ ಸಂಕಷ್ಟ ನೋಡಿ ತಮ್ಮ ನಿರ್ಧಾರ ಬದಲಾಯಿಸಿ ಭಾರತಕ್ಕೆ ಮರಳಿದರು. ಕುಟುಂಬದ ಜವಾಬ್ದಾರಿಗಾಗಿ ಸಿನಿಮಾ ಕ್ಷೇತ್ರ ಪ್ರವೇಶಿಸಿದ ಅವರು, ಆರಂಭಿಕ ದಿನಗಳಲ್ಲಿ ಸಾಕಷ್ಟು ಹೋರಾಟ ಎದುರಿಸಿದರು.

ಅಭಿಷೇಕ್ ಬಚ್ಚನ್ ಅವರಿಗೆ ಫೆಬ್ರವರಿ 5 ಜನ್ಮದಿನ. ಅವರ ಜೀವನ ಹೊರಗಿನಿಂದ ಸುಂದರವಾಗಿ ಕಂಡರೂ, ಅದು ಹೋರಾಟಗಳು ಮತ್ತು ಕಠಿಣ ನಿರ್ಧಾರಗಳಿಂದ ಕೂಡಿದೆ. ಬಚ್ಚನ್ ಕುಟುಂಬ ಸಾಗಿದ ಹಾದಿಯಲ್ಲೇ ಹೋದರು. ಅವರು ಚಿತ್ರರಂಗವನ್ನು ಪ್ರವೇಶಿಸಿದರು.

ಆದರೆ ಅಭಿಷೇಕ್ ಬಾಲ್ಯದಿಂದಲೂ ನಟನಾಗುವ ಕನಸು ಕಂಡಿರಲಿಲ್ಲ ಎಂದು ಕೆಲವೇ ಜನರಿಗೆ ತಿಳಿದಿದೆ. ಚಲನಚಿತ್ರಗಳಿಗೆ ಪ್ರವೇಶಿಸುವ ಮೊದಲು, ಅವರು ಯಶಸ್ವಿ ಉದ್ಯಮಿಯಾಗಲು ಮತ್ತು ಕಾರ್ಪೊರೇಟ್ ಜಗತ್ತಿನಲ್ಲಿ ಹೆಸರು ಮಾಡಲು ಬಯಸಿದ್ದರು. ಅದು ಅವರ ಕನಸಾಗಿತ್ತು. ಅಭಿಷೇಕ್ ಫೆಬ್ರವರಿ 5, 1976 ರಂದು ಮುಂಬೈನಲ್ಲಿ ಜನಿಸಿದರು. ಅವರು ಅಮಿತಾಭ್ ಬಚ್ಚನ್ ಮತ್ತು ಪ್ರಸಿದ್ಧ ನಟಿ ಜಯಾ ಬಚ್ಚನ್ ಅವರ ಮಗ. ಚಲನಚಿತ್ರ ಕುಟುಂಬದಲ್ಲಿ ಜನಿಸಿದರೂ, ಅಭಿಷೇಕ್ ಸಾಮಾನ್ಯ ಮತ್ತು ಶಿಸ್ತಿನ ವಾತಾವರಣದಲ್ಲಿ ಬೆಳೆದರು. ಪ್ರಾಥಮಿಕ ಶಿಕ್ಷಣವನ್ನು ಪೂರ್ಣಗೊಳಿಸಿದ ನಂತರ, ಅವರನ್ನು ಉನ್ನತ ಶಿಕ್ಷಣಕ್ಕಾಗಿ ವಿದೇಶಕ್ಕೆ ಕಳುಹಿಸಲಾಯಿತು.

ಅಲ್ಲಿ ಅವರು ವ್ಯವಹಾರ ನಿರ್ವಹಣೆಯನ್ನು ಅಧ್ಯಯನ ಮಾಡಲು ಪ್ರಾರಂಭಿಸಿದರು. ಬಹುರಾಷ್ಟ್ರೀಯ ಕಂಪನಿಯಲ್ಲಿ ಕೆಲಸ ಮಾಡುವುದು ಮತ್ತು ಯಶಸ್ವಿ ಉದ್ಯಮಿಯಾಗುವುದು ಅಭಿಷೇಕ್ ಅವರ ಕನಸಾಗಿತ್ತು.

# ವಿಚಿತ್ರ ಮುಖದ ವ್ಯಕ್ತಿಯೊಟ್ಟಿಗೆ ಪ್ರೀತಿಗೆ ಬಿದ್ದ ಬಾಲಿವುಡ್ ಹಾಟ್ ನಟಿ

ದಿಶಾ ಪಟಾನಿ ಈ ಹಿಂದೆ ಬಾಲಿವುಡ್ ಸ್ಟಾರ್ ನಟ ಟೈಗರ್ ಶ್ರಾಫ್ ಜೊತೆಗೆ ಪ್ರೀತಿಯಲ್ಲಿದ್ದರು. ಇವರಿಬ್ಬರ ಪ್ರೇಮ ಸಂಬಂಧ ಕೆಲ ವರ್ಷ ನಡೆಯಿತು, ಬಳಿಕ ಇಬ್ಬರೂ ದೂರಾದರು. ಬಳಿಕ ದಿಶಾ ಹೆಸರು ವಿದೇಶಿ ವ್ಯಕ್ತಿಯೊಬ್ಬನ ಜೊತೆ ಕೇಳಿ ಬಂತು. ಆದರೆ ಇದೀಗ ದಿಶಾ ಪಟಾನಿ, ಸದಾ ಕಾಲ ಮುಖಕ್ಕೆ ಮಾಸ್ಕ್ ಧರಿಸಿಕೊಂಡು ಓಡಾಡುವ ಸಂಗೀತಗಾರನೊಟ್ಟಿಗೆ ಕಾಣಿಸಿಕೊಳ್ಳುತ್ತಿದ್ದಾರೆ. ಇಬ್ಬರೂ ಪರಸ್ಪರ ಕೈ-ಕೈ ಹಿಡಿದುಕೊಂಡು ಓಡಾಡುವ ಹಲವು ವಿಡಿಯೋ, ಚಿತ್ರಗಳು ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿವೆ. ಅಷ್ಟಕ್ಕೂ ಈ ವಿಚಿತ್ರ ವ್ಯಕ್ತಿ ಯಾರು ಬಾಲಿವುಡ್‌ನಲ್ಲಿ ಸಾಕಷ್ಟು ಹಾಟ್ ನಟಿಯರಿದ್ದಾರೆ ಆದರೆ ದಿಶಾ ಪಟಾನಿ ನಂಬರ್ 1 ಎನ್ನಬಹುದು. ಫಿಟ್‌ನೆಸ್‌ಗೆ ಅಪಾರ ಒತ್ತು ಕೊಡುವ ದಿಶಾ ಪಟಾನಿ, ಗ್ಲಾಮರಸ್ ಆಗಿಯೂ ಕಾಣಿಸಿಕೊಳ್ಳುತ್ತಾರೆ.

ಸಿನಿಮಾ, ಸಾಮಾಜಿಕ ಜಾಲತಾಣಗಳಲ್ಲಿ ಸಖತ್ ಬೋಲ್ಡ್ ಆಗಿ ಕಾಣಿಸಿಕೊಳ್ಳುವ ನಟಿ ದಿಶಾ ಪಟಾನಿ, ನಿಜ ಜೀವನದಲ್ಲಿ ಸಹ ಸಖತ್ ಬೋಲ್ಡ್ ಆದ ನಿರ್ಣಯಗಳನ್ನೇ ತೆಗೆದುಕೊಳ್ಳುತ್ತಾರೆ. ಪದೇ ಪದೇ ಬಾಯ್‌ಫ್ರೆಂಡ್ ಬದಲಾಯಿಸುವ ದಿಶಾ ಪಟಾನಿ ಇದೀಗ ವಿಚಿತ್ರ ವ್ಯಕ್ತಿಯೊಡನೆ ಪ್ರೀತಿಗೆ ಬಿದ್ದಿದ್ದಾರೆ. ಮುಖಕ್ಕೆ ಪ್ರೇತತ ಪೇಯಿಂಟ್ ಬಳಿದುಕೊಂಡು ಓಡಾಡುವ ಯುವಕನೊಟ್ಟಿಗೆ ದಿಶಾ ರಿಲೇಷನ್‌ನಲ್ಲಿದ್ದಾರೆ. ದಿಶಾ ಪಟಾನಿ ಈ ಹಿಂದೆ ಬಾಲಿವುಡ್ ಸ್ಟಾರ್ ನಟ ಟೈಗರ್ ಶ್ರಾಫ್ ಜೊತೆಗೆ ಪ್ರೀತಿಯಲ್ಲಿದ್ದರು. ಇವರಿಬ್ಬರ ಪ್ರೇಮ ಸಂಬಂಧ ಕೆಲ ವರ್ಷ ನಡೆಯಿತು, ಬಳಿಕ ಇಬ್ಬರೂ ದೂರಾದರು. ಬಳಿಕ ದಿಶಾ ಹೆಸರು ವಿದೇಶಿ ವ್ಯಕ್ತಿಯೊಬ್ಬನ ಜೊತೆ ಕೇಳಿ ಬಂತು. ಆದರೆ ಇದೀಗ ದಿಶಾ ಪಟಾನಿ, ಸದಾ ಕಾಲ ಮುಖಕ್ಕೆ ಮಾಸ್ಕ್ ಧರಿಸಿಕೊಂಡು ಓಡಾಡುವ ಸಂಗೀತಗಾರನೊಟ್ಟಿಗೆ ಕಾಣಿಸಿಕೊಳ್ಳುತ್ತಿದ್ದಾರೆ.



ಸಿನಿ ವಾಹಿನಿ

# ಶೂಟಿಂಗ್ ನಿಲ್ಲಿಸಿಲ್ಲ ರಶ್ಮಿಕಾ ಮಂದಣ್ಣ



**ಮದುವೆಗೆ ಕೆಲವೇ ದಿನಗಳು ಬಾಕಿ**

ವಿಜಯ್ ದೇವರಕೊಂಡ ಮತ್ತು ರಶ್ಮಿಕಾ ಮಂದಣ್ಣ ಮದುವೆ ಬಹಳ ಅದ್ದೂರಿಯಾಗಿ ನಡೆಯಲಿದೆ. ಮದುವೆಗೆ ಕೆಲವೇ ದಿನಗಳು ಬಾಕಿ ಇವೆ. ಆದರೂ ಕೂಡ ರಶ್ಮಿಕಾ ಮಂದಣ್ಣ ಶೂಟಿಂಗ್ ಮಾಡುತ್ತಿದ್ದಾರೆ. 'ಪುಷ್ಪ 2' ಬಳಿಕ ಅಲ್ಲು ಅರ್ಜುನ್ ಜೊತೆಗಿನ ಹೊಸ ಸಿನಿಮಾಗೆ ಮುಂಬೈನಲ್ಲಿ ಚಿತ್ರೀಕರಣ ನಡೆಯುತ್ತಿದೆ. ನಟಿ ರಶ್ಮಿಕಾ ಮಂದಣ್ಣ ಅವರು ಶೀಘ್ರದಲ್ಲೇ ದಾಂಪತ್ಯ ಜೀವನಕ್ಕೆ ಕಾಲಿಡಲಿದ್ದಾರೆ. ವಿಜಯ್ ದೇವರಕೊಂಡ ಜೊತೆ ಅವರು ಹಸೆಮಣೆ ಏರಲಿದ್ದಾರೆ. ಮದುವೆಗೆ ಕೆಲವೇ ದಿನಗಳು ಬಾಕಿ ಇವೆ. ಹಾಗಿದ್ದರೂ ಕೂಡ ರಶ್ಮಿಕಾ ಮಂದಣ್ಣ ಅವರು ಸಿನಿಮಾ ಕೆಲಸಗಳಲ್ಲಿ ಬ್ಯುಸಿ ಆಗಿದ್ದಾರೆ. ಅಲ್ಲು ಅರ್ಜುನ್ ಜೊತೆಗಿನ ಹೊಸ ಸಿನಿಮಾದಲ್ಲಿ ರಶ್ಮಿಕಾ ಮಂದಣ್ಣ ನಟಿಸುತ್ತಿದ್ದಾರೆ. ಮುಂಬೈನಲ್ಲಿ ಈ ಚಿತ್ರಕ್ಕೆ ಶೂಟಿಂಗ್ ನಡೆಯುತ್ತಿದೆ. ಅದರಲ್ಲಿ ರಶ್ಮಿಕಾ ಮಂದಣ್ಣ ಅವರು ಭಾಗಿಯಾಗಿದ್ದಾರೆ. ಈ ಸಿನಿಮಾಗೆ ಅಟ್ಲಿ ಅವರು ನಿರ್ದೇಶನ ಮಾಡುತ್ತಿದ್ದಾರೆ. ಈ ಸಿನಿಮಾಗೆ ಇನ್ನೂ ಶೀರ್ಷಿಕೆ ಅಂತಿಮವಾಗಿಲ್ಲ. ಸದ್ಯಕ್ಕೆ ಇದನ್ನು 'AA22xA6' ಎಂದು ಕರೆಯಲಾಗುತ್ತಿದೆ. ಈ ಸಿನಿಮಾದಲ್ಲಿನ ರಶ್ಮಿಕಾ ಮಂದಣ್ಣ ಅವರ ಪಾತ್ರದ ಬಗ್ಗೆ ಅಚ್ಚರಿಯ ಮಾಹಿತಿ ಕೇಳಿಬರುತ್ತಿದೆ.

ಈ ಚಿತ್ರದಲ್ಲಿ ರಶ್ಮಿಕಾ ಮಂದಣ್ಣ ಅವರು ನೆಗೆಟಿವ್ ರೋಲ್ ಮಾಡುತ್ತಿದ್ದಾರೆ ಎನ್ನಲಾಗಿದೆ. ಆ ಕಾರಣದಿಂದ ಅಭಿಮಾನಿಗಳಿಗೆ ಹೆಚ್ಚು ನಿರೀಕ್ಷೆ ಮೂಡಿದೆ. ಮುಂಬೈನಲ್ಲಿ 'AA22xA6' ಚಿತ್ರಕ್ಕೆ ಶೂಟಿಂಗ್ ಮಾಡಲಾಗುತ್ತಿದೆ. ಸದ್ಯಕ್ಕೆ ರಶ್ಮಿಕಾ ಮಾತ್ರ ಚಿತ್ರೀಕರಣದಲ್ಲಿ ಭಾಗಿಯಾಗಿದ್ದಾರೆ. ಈ ಹಂತದ ಶೂಟಿಂಗ್ ಮುಗಿದ ಬಳಿಕ ರಶ್ಮಿಕಾ ಅವರು ಮದುವೆಗಾಗಿ ಬ್ರೇಕ್ ಪಡೆದುಕೊಳ್ಳಲಿದ್ದಾರೆ.

ಇನ್ನುಳಿದ ಪಾತ್ರಧಾರಿಗಳಾದ ಅಲ್ಲು ಅರ್ಜುನ್ ಮತ್ತು ಜಾನ್ವಿ ಕಪೂರ್ ಅವರು ಮುಂದಿನ ಹಂತದ ಚಿತ್ರೀಕರಣದಲ್ಲಿ ಪಾಲ್ಗೊಳ್ಳಲಿದ್ದಾರೆ. ಸೆಲೆಬ್ರಿಟಿ ಮದುವೆ ಎಂದರೆ ಬಹಳ ಅದ್ದೂರಿಯಾಗಿ ಇರುತ್ತದೆ. ಅದಕ್ಕೆ ತಯಾರಿ ಕೂಡ ಅಷ್ಟೇ ಜೋರಾಗಿರುತ್ತದೆ. ರಶ್ಮಿಕಾ ಮಂದಣ್ಣ ಅವರು ಪ್ಯಾನ್ ಇಂಡಿಯಾ ಸ್ಟಾರ್. ಅದೇ ರೀತಿ ವಿಜಯ್ ದೇವರಕೊಂಡ ಕೂಡ ಸಖತ್ ಜನಪ್ರಿಯತೆ ಹೊಂದಿದ್ದಾರೆ. ಅವರಿಬ್ಬರ ಮದುವೆ ತಯಾರಿಗೆ ಹೆಚ್ಚು ಸಮಯ ಬೇಕಾಗುತ್ತದೆ. ಹಾಗಿದ್ದರೂ ಕೂಡ ರಶ್ಮಿಕಾ ಮಂದಣ್ಣ ಅವರು ಇನ್ನೂ ಚಿತ್ರೀಕರಣದಲ್ಲಿ ಬ್ಯುಸಿ ಆಗಿದ್ದಾರೆ.

# ಸಿನಿಮಾ ನಿರ್ಮಾಣಕ್ಕೆ ಕೈ ಹಾಕಿದ ಯಾರೀಕೆ



**ಸಿನಿಮಾ ನಿರ್ಮಾಣಕ್ಕೆ ಬಿರ್ಲಾ ಕುಟುಂಬ**

ಮುಂಚೆಯೆಲ್ಲ ಸಿನಿಮಾ ನಿರ್ಮಾಣ ಎಂಬುದು ವ್ಯವಹಾರದ ಜೊತೆಗೆ ಕಲಾಸಕ್ತಿ ಸಹ ಆಗಿತ್ತು. ಆದರೆ ಈಗ ಕಾರ್ಪೊರೇಟ್ ವ್ಯವಹಾರವಾಗಿದೆ, ಕೆಲವು ದೊಡ್ಡ ಕಾರ್ಪೊರೇಟ್ ಸಂಸ್ಥೆಗಳು ವ್ಯವಸ್ಥಿತ ಉದ್ಯಮವಾಗಿ ಸಿನಿಮಾ ನಿರ್ಮಾಣ ನಡೆಸುತ್ತಿವೆ. ಈಗಾಗಲೇ ಅಂಥಹ ಹಲವು ಸಂಸ್ಥೆಗಳು ಭಾರತದಲ್ಲಿ ಸಕ್ರಿಯವಾಗಿದ್ದು, ಇದೀಗ ಭಾರತದ ಅತಿ ದೊಡ್ಡ ಸಮೂಹ ಸಂಸ್ಥೆ ಮತ್ತು ಶ್ರೀಮಂತ ಕುಟುಂಬಗಳಲ್ಲಿ ಒಂದೆನಿಸಿಕೊಂಡಿರುವ ಬಿರ್ಲಾ ಕುಟುಂಬವೂ ಸಹ ಸಿನಿಮಾ ನಿರ್ಮಾಣಕ್ಕೆ ಕೈ ಹಾಕಿದೆ.

ಸಿನಿಮಾ ನಿರ್ಮಾಣ ಎಂಬುದು ಬಹಳ ರಿಸ್ಕಿ ಉದ್ಯಮ. ಇಲ್ಲಿ ಸಣ್ಣ-ಪುಟ್ಟ ಜೇಬಿನವರು ಉಳಿಯುವುದು, ಬೆಳೆಯುವುದು ಬಹಳ ಕಷ್ಟ. ಈಗಂತೂ ಸಿನಿಮಾಗಳ ಸರಾಸರಿ ಬಜೆಟ್ 500 ಕೋಟಿ ದಾಟಿರುವ ಸಂದರ್ಭದಲ್ಲಿ ಎಲ್ಲಾ ನಿರ್ಮಾಪಕರು ಸಿನಿಮಾಗಳನ್ನು ಮಾಡಿ ಗೆಲ್ಲಲು ಸಾಧ್ಯವಾಗುತ್ತಿಲ್ಲ. ಅಲ್ಲದೆ, ಮುಂಚೆ ಎಲ್ಲಾ ಸಿನಿಮಾ ನಿರ್ಮಾಣ ಎಂಬುದು ವ್ಯವಹಾರದ ಜೊತೆಗೆ ಕಲಾಸಕ್ತಿ ಸಹ ಆಗಿತ್ತು. ಆದರೆ ಈಗ ಕಾರ್ಪೊರೇಟ್ ವ್ಯವಹಾರವಾಗಿದೆ, ಕೆಲವು ದೊಡ್ಡ ಕಾರ್ಪೊರೇಟ್ ಸಂಸ್ಥೆಗಳು ವ್ಯವಸ್ಥಿತ ಉದ್ಯಮವಾಗಿ ಸಿನಿಮಾ ನಿರ್ಮಾಣವನ್ನು ನಡೆಸುತ್ತಿವೆ. ಈಗಾಗಲೇ ಅಂಥಹ ಹಲವು ಸಂಸ್ಥೆಗಳು ಭಾರತದಲ್ಲಿ ಸಕ್ರಿಯವಾಗಿದ್ದು, ಇದೀಗ ಭಾರತದ ಅತಿ ದೊಡ್ಡ ಸಮೂಹ ಸಂಸ್ಥೆ ಮತ್ತು ಶ್ರೀಮಂತ ಕುಟುಂಬಗಳಲ್ಲಿ ಒಂದೆನಿಸಿಕೊಂಡಿರುವ ಬಿರ್ಲಾ ಕುಟುಂಬವೂ ಸಹ ಸಿನಿಮಾ ನಿರ್ಮಾಣಕ್ಕೆ ಕೈ ಹಾಕಿದೆ.

# ರೀಲ್ಸ್ ಮಾಡಿ ಮತ್ತೆ ಇಕ್ಕಟ್ಟಿಗೆ ಸಿಲುಕಿದ ರಜತ್



**ಮತ್ತೊಂದು ದೂರು ದಾಖಲು**

ಬಿಗ್ ಬಾಸ್ ಸ್ಪರ್ಧಿ ರಜತ್ ಮತ್ತೊಮ್ಮೆ ಕಾನೂನು ಸಂಕಷ್ಟಕ್ಕೆ ಸಿಲುಕಿದ್ದಾರೆ. ಮೈಸೂರಿನ ಹಳೆಯ ಜಿಲ್ಲಾಧಿಕಾರಿ ಕಚೇರಿ ಕಟ್ಟಡದ ಬಳಿ ಸಿಗರೇಟ್ ಹಚ್ಚಿ ವಿಡಿಯೋ ಮಾಡಿದ ಆರೋಪ ಅವರ ಮೇಲಿದೆ.

ಈ ಕುರಿತು ಲಕ್ಷ್ಮೀಪುರಂ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ಈ ಹಿಂದೆ ಮಚ್ಚು ಹಿಡಿದು ರೀಲ್ಸ್ ಮಾಡಿ ಜೈಲು ಪಾಲಾಗಿದ್ದ ರಜತ್, ಈಗ ಮತ್ತೆ ಅದೇ ರೀತಿ ವಿವಾದ ಸೃಷ್ಟಿಸಿದ್ದಾರೆ.

ಬಿಗ್ ಬಾಸ್ ಸ್ಪರ್ಧಿ ಹಾಗೂ ನಟ ರಜತ್ ಅವರು ಈಗ ಮತ್ತೆ ಇಕ್ಕಟ್ಟಿಕ್ಕೆ ಸಿಲುಕಿದ್ದಾರೆ. ಈ ಮೊದಲು ಮಚ್ಚು ಹಿಡಿದು ರೀಲ್ಸ್ ಮಾಡಿ ಅವರು ಜೈಲುವಾಸ ಅನುಭವಿಸಬೇಕಾಗಿ ಬಂದಿತ್ತು. ಈಗ ಅವರು ಮತ್ತೆ ರೀಲ್ಸ್ ಮಾಡಿದ ಕಾರಣಕ್ಕೆ ತೊಂದರೆ ಅನುಭವಿಸುವಂತಾಗಿದೆ. ಮೈಸೂರು ಹಳೆ ಜಿಲ್ಲಾಧಿಕಾರಿ ಕಚೇರಿ ಕಟ್ಟಡದ ಬಳಿ ರಜತ್ ವಿಡಿಯೋ ಮಾಡಿದ್ದಾರೆ. ಈ ವೇಳೆ ಅವರು ಸಿಗರೇಟ್ ಹಚ್ಚಿದ್ದಾರೆ. ಇದರಿಂದ ಅವರ ವಿರುದ್ಧ ದೂರು ದಾಖಲಾಗಿದೆ. ಇತ್ತೀಚೆಗೆ ರಜತ್ ಅವರು ವಿಡಿಯೋ ಒಂದನ್ನು ಮಾಡಿದರು. ಈ ವಿಡಿಯೋದಲ್ಲಿ ಅವರು ರೆಟ್ರೋ ಸ್ಟೈಲ್ ಕಾರಲ್ಲಿ ಬರುತ್ತಾರೆ. ಈ ವೇಳೆ ಅವರು ಸಿಗರೇಟ್ ಕೂಡ ಹಚ್ಚುತ್ತಾರೆ. ಈ ವಿಡಿಯೋ ಶೂಟ್ ಆಗಿದ್ದು ಮೈಸೂರು ಹಳೆ ಜಿಲ್ಲಾಧಿಕಾರಿ ಕಚೇರಿ ಕಟ್ಟಡದ ಎದುರು. ಈ ಸಂಬಂಧ ಲಕ್ಷ್ಮೀಪುರಂ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

**ದೂರಿನಲ್ಲಿ ಏನಿದೆ:** ಕರ್ನಾಟಕ ಸೇನಾ ಪಡೆ ಕಾರ್ಯಕರ್ತರು ಈ ದೂರನ್ನು ನೀಡಿದ್ದಾರೆ. ರಜತ್ ವಿರುದ್ಧ ಎಫ್‌ಐಆರ್ ದಾಖಲಿಸಬೇಕು ಎಂದು ಒತ್ತಾಯಿಸಲಾಗಿದೆ. 'ರಜತ್ ಪಾರಂಪರಿಕ ಕಟ್ಟಡದ ಮುಂದೆ ಅನುಮತಿ ಪಡೆಯದೆ ವಿಡಿಯೋ ಮಾಡಿದ್ದಾರೆ. ಸಿಗರೇಟ್ ಹಿಡಿದು ಕಾರಿನಿಂದ ಇಳಿದಿದ್ದಾರೆ. ಇದು ಅವರ ಫಾಲೋವರ್ಸ್‌ಗೆ ಕೆಟ್ಟ ಸಂದೇಶ ನೀಡುತ್ತದೆ. ಈ ಮೊದಲು ಕೂಡ ಮಚ್ಚು ಹಿಡಿದು ರೀಲ್ಸ್ ಮಾಡಿದ್ದಕ್ಕೆ ಎಫ್‌ಐಆರ್ ದಾಖಲಾಗಿತ್ತು. ಇದೀಗ ಮತ್ತೆ ಅದೇ ರೀತಿ ಮಾಡಿದ್ದಾರೆ. ಅವರ ವಿರುದ್ಧ ಕ್ರಮ ಕೈಗೊಳ್ಳಿ' ಎಂದು ದೂರಿನಲ್ಲಿ ಕೋರಲಾಗಿದೆ. ಕಲರ್ಸ್ ರಿಯಾಲಿಟಿ ಶೋ ಒಂದರಲ್ಲಿ ರಜತ್ ಹಾಗೂ ವಿನಯ್ ಗೌಡ ಭಾಗಿ ಆಗಿದ್ದರು. ಶೋ ಶೂಟಿಂಗ್ ಮುಗಿದ ಬಳಿಕ ಸ್ಟುಡಿಯೋ ಹೊರಗೆ ವಿನಯ್ ಹಾಗೂ ರಜತ್ ನಿಜವಾದ ಮಚ್ಚು ಹಿಡಿದು ರೀಲ್ಸ್ ಮಾಡಿದ್ದರು. ಈ ಸಂಬಂಧ ಎಫ್‌ಐಆರ್ ದಾಖಲಿಸಿ, ಇಬ್ಬರನ್ನೂ ಅರೆಸ್ಟ್ ಮಾಡಲಾಗಿತ್ತು. ಆ ಬಳಿಕ ಜಾಮೀನು ಪಡೆದು ಇಬ್ಬರೂ ಹೊರ ಬಂದಿದ್ದರು. ನಂತರ ಕೋರ್ಟ್‌ಗೆ ಸರಿಯಾಗಿ ಹಾಜರಾಗದ ಕಾರಣ ಅವರನ್ನು ಮತ್ತೆ ಬಂಧಿಸಲಾಯಿತು.

# ಇಬ್ಬರಿಲ್ಲದ ಮೊದಲ ಟಿ20 ವಿಶ್ವಕಪ್

ಬಹುನಿರೀಕ್ಷಿತ ಟಿ20 ವಿಶ್ವಕಪ್ 2026 ಫೆಬ್ರವರಿ 7 ರಿಂದ ಶುರುವಾಗಲಿದೆ. ಭಾರತ ಮತ್ತು ಶ್ರೀಲಂಕಾ ಜಂಟಿಯಾಗಿ ಆಯೋಜಿಸಲಿರುವ ಈ ವಿಶ್ವಕಪ್‌ನಲ್ಲಿ ಇಬ್ಬರು ಹಿರಿಯ ಆಟಗಾರರು ಕಾಣಿಸಿಕೊಳ್ಳುವುದಿಲ್ಲ. ಅಂದರೆ ಕಳೆದ 9 ಆವೃತ್ತಿಗಳಲ್ಲಿ ಕಣಕ್ಕಿಳಿದಿದ್ದ ಇಬ್ಬರು ಆಟಗಾರರು ಈ ಬಾರಿಯ ಟಿ20 ವಿಶ್ವಕಪ್ ತಂಡಗಳಲ್ಲಿಲ್ಲ ಎಂಬುದು ವಿಶೇಷ. ಟಿ20 ವಿಶ್ವಕಪ್ ಶುರುವಾಗಿ 18 ವರ್ಷಗಳು ಕಳೆದಿವೆ. ಈ ಹದಿನೆಂಟು ವರ್ಷಗಳಲ್ಲಿ 9 ಟಿ20 ವಿಶ್ವಕಪ್ ಟೂರ್ನಿಗಳು ನಡೆದಿವೆ. ಈ ಒಂಭತ್ತು ಟೂರ್ನಿಗಳಲ್ಲೂ ಇಬ್ಬರು ಆಟಗಾರರು ಕಾಣಿಸಿಕೊಂಡಿದ್ದಾರೆ. ಅಂದರೆ ಈವರೆಗಿನ ಎಲ್ಲಾ ವಿಶ್ವಕಪ್‌ಗಳಲ್ಲೂ ಕಣಕ್ಕಿಳಿದಿರುವುದು ಕೇವಲ ಇಬ್ಬರು ಮಾತ್ರ. ಆದರೆ ಆ ಇಬ್ಬರಿಲ್ಲದೆ ಇದೇ ಮೊದಲ ಬಾರಿಗೆ ಟಿ20 ವಿಶ್ವಕಪ್ ಆಯೋಜನೆಗೊಳ್ಳುತ್ತಿರುವುದು ವಿಶೇಷ.

ಹೌದು, ಟಿ20 ವಿಶ್ವಕಪ್‌ನ ಎಲ್ಲಾ ಆವೃತ್ತಿಗಳಲ್ಲಿ ಕಾಣಿಸಿಕೊಂಡ ಆಟಗಾರರಲ್ಲಿ ಟೀಮ್ ಇಂಡಿಯಾದ ಮಾಜಿ ನಾಯಕ ರೋಹಿತ್ ಶರ್ಮಾ ಕೂಡ ಒಬ್ಬರು. 2007ರ ಟಿ20 ವಿಶ್ವಕಪ್‌ನಲ್ಲಿ ಕಣಕ್ಕಿಳಿಯುವ ಮೂಲಕ ಅಂತಾರಾಷ್ಟ್ರೀಯ ಕೆರಿಯರ್ ಆರಂಭಿಸಿದ್ದ ಹಿಟ್‌ಮ್ಯಾನ್, ಆ ಬಳಿಕ 2009, 2010, 2012, 2014, 2016, 2021, 2022 ಮತ್ತು 2024 ರ ಟಿ20 ವಿಶ್ವಕಪ್ ಟೂರ್ನಿಗಳಲ್ಲಿ ಕಣಕ್ಕಿಳಿದಿದ್ದರು.



ಆದರೆ ಕಳೆದ ಬಾರಿಯ ಟಿ20 ವಿಶ್ವಕಪ್‌ನ ಫೈನಲ್‌ನಲ್ಲಿ ಟೀಮ್ ಇಂಡಿಯಾ ಚಾಂಪಿಯನ್ ಪಟ್ಟಕ್ಕೇರಿದ ಬೆನ್ನಲ್ಲೇ ರೋಹಿತ್ ಶರ್ಮಾ ಟಿ20 ಅಂತಾರಾಷ್ಟ್ರೀಯ ಕ್ರಿಕೆಟ್‌ನಿಂದ ನಿವೃತ್ತಿ ಘೋಷಿಸಿದ್ದರು. ಹೀಗಾಗಿ ಅವರು ಈ ಬಾರಿಯ ಟಿ20 ವಿಶ್ವಕಪ್ ಟೂರ್ನಿಯಲ್ಲಿ ಕಾಣಿಸಿಕೊಳ್ಳುತ್ತಿಲ್ಲ. ರೋಹಿತ್ ಶರ್ಮಾ ಅಲ್ಲದೆ, 2007, 2009, 2010, 2012, 2014, 2016, 2021, 2022 ಮತ್ತು 2024 ರ ಟಿ20 ವಿಶ್ವಕಪ್‌ಗಳಲ್ಲಿ ಕಣಕ್ಕಿಳಿದ ಮತ್ತೋರ್ವ ಆಟಗಾರನೆಂದರೆ ಬಾಂಗ್ಲಾದೇಶದ ಶಾಹಿಬ್ ಅಲ್ ಹಸನ್. 2025 ರಲ್ಲಿ ಶಾಕಿಬ್ ಟಿ20 ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ವಿದಾಯ ಹೇಳಿದ್ದರು. ಒಂದು ವೇಳೆ ಅವರು ನಿವೃತ್ತಿಯಾಗದೇ ಇದ್ದಿದ್ದರೂ ಈ ಬಾರಿ ಕಣಕ್ಕಿಳಿಯುತ್ತಿರಲಿಲ್ಲ. ಏಕೆಂದರೆ ಈ ಬಾರಿಯ ಟಿ20 ವಿಶ್ವಕಪ್ ಟೂರ್ನಿಯಿಂದ ಬಾಂಗ್ಲಾದೇಶ್ ತಂಡ ಹೊರಗುಳಿದಿದೆ. ಅಂದರೆ ಇದೇ ಮೊದಲ ಬಾರಿಗೆ ರೋಹಿತ್ ಶರ್ಮಾ ಹಾಗೂ ಶಾಕಿಬ್ ಅಲ್ ಹಸನ್ ಇಲ್ಲದೆ ವಿಶ್ವಕಪ್ ನಡೆಯಲಿರುವುದು ವಿಶೇಷ. ಇನ್ನು ಟಿ20 ವಿಶ್ವಕಪ್ ಇತಿಹಾಸದಲ್ಲೇ ಅತ್ಯಧಿಕ ಪಂದ್ಯಗಳನ್ನಾಡಿದ ದಾಖಲೆ ರೋಹಿತ್ ಶರ್ಮಾ ಹಾಗೂ ಶಾಕಿಬ್ ಅಲ್ ಹಸನ್ ಹೆಸರಿನಲ್ಲಿದೆ.

# ಇದುವರೆಗೆ ಮುರಿಯಲಾಗದ ದಾಖಲೆಗಳಿವು

2026ರ ಟಿ20 ವಿಶ್ವಕಪ್ ಸಿದ್ಧವಾಗುತ್ತಿದ್ದಂತೆ, ಹಿಂದಿನ 9 ಆವೃತ್ತಿಗಳ ಇತಿಹಾಸದತ್ತ ನೋಡೋಣ. ಭಾರತ, ವೆಸ್ಟ್ ಇಂಡೀಸ್, ಇಂಗ್ಲೆಂಡ್ ತಲಾ ಎರಡು ಬಾರಿ ಚಾಂಪಿಯನ್ ಆಗಿವೆ. ಶ್ರೀಲಂಕಾ ಅತ್ಯಧಿಕ ತಂಡದ ಮೊತ್ತ, ನೆದರ್ಲ್ಯಾಂಡ್ಸ್ ಕಡಿಮೆ ಮೊತ್ತದ ದಾಖಲೆ ಹೊಂದಿವೆ. ವಿರಾಟ್ ಕೊಹ್ಲಿ ಅತಿ ಹೆಚ್ಚು ರನ್ ಗಳಿಸಿದ್ದು, ಯುವರಾಜ್ ವೇಗದ ಅರ್ಧಶತಕ, ಕ್ರಿಸ್ ಗೇಲ್ ಅತಿ ಹೆಚ್ಚು ಶತಕ ಬಾರಿಸಿದ್ದಾರೆ. ಈ ಕುತೂಹಲಕಾರಿ ದಾಖಲೆಗಳು ಟೂರ್ನಿಯ ವೈಭವವನ್ನು ಹೆಚ್ಚಿಸಿವೆ.

2026 ರ ಟಿ20 ವಿಶ್ವಕಪ್ ಇನ್ನೇರಡು ದಿನಗಳಲ್ಲಿ ಆರಂಭವಾಗಲಿದೆ. 2007 ರಿಂದ ಆರಂಭವಾದ ಈ ಟೂರ್ನಿ ಇದುವರೆಗೆ 9 ಆವೃತ್ತಿಗಳನ್ನು ಕಂಡಿದ್ದು, 10ನೇ ಆವೃತ್ತಿಗೆ ಸಜ್ಜಾಗಿದೆ. ಮೊದಲ ಆವೃತ್ತಿಯಿಂದ ಇಲ್ಲಿಯವರೆಗೆ ಕೆಲವು ಅಚ್ಚರಿಯ ಸಂಗತಿಗಳು ನಡೆದಿವೆ. ಹಾಗೆಯೇ ಈ 9 ಆವೃತ್ತಿಗಳಲ್ಲಿ ನಿಮಗೆ ತಿಳಿದುಕೊಳ್ಳಲೇಬೇಕಾದ ಕೆಲವು ಕುತೂಹಲಕಾರಿ ಮಾಹಿತಿ ಇಲ್ಲಿದೆ.



ಹೆಚ್ಚು ಬಾರಿ ಚಾಂಪಿಯನ್ ಆದ ತಂಡಗಳು; ಟಿ20 ವಿಶ್ವಕಪ್‌ನಲ್ಲಿ ಮೂರು ತಂಡಗಳು ಮಾತ್ರ ಎರಡು ಬಾರಿ ಚಾಂಪಿಯನ್ ಪಟ್ಟಕ್ಕೇರಿವೆ. ಆ ಮೂರು ತಂಡಗಳಲ್ಲಿ ಭಾರತ, ವೆಸ್ಟ್ ಇಂಡೀಸ್ ಮತ್ತು ಇಂಗ್ಲೆಂಡ್ ಸೇರಿವೆ. 2007ಮತ್ತು 2024 ರ ಭಾರತ ಪ್ರಶಸ್ತಿ ಎತ್ತಿ ಹಿಡಿದರೆ, 2012 ಮತ್ತು 2016 ರಲ್ಲಿ ವಿಂಡೀಸ್ ಚಾಂಪಿಯನ್ ಆಗಿತ್ತು. ಮತ್ತೊಂದೆಡೆ, ಇಂಗ್ಲೆಂಡ್ 2010 ಮತ್ತು 2022 ರಲ್ಲಿ ವಿಶ್ವಕಪ್ ಎತ್ತಿ ಹಿಡಿದಿತ್ತು.

# ಟಿ20 ವಿಶ್ವಕಪ್‌ನಲ್ಲಿ 10 ಹೊಸ ನಿಯಮಗಳು ಜಾರಿ!

ಭಾರತ ಮತ್ತು ಶ್ರೀಲಂಕಾ ಜಂಟಿಯಾಗಿ ಆಯೋಜಿಸಲಿರುವ ಟಿ20 ವಿಶ್ವಕಪ್ 2026 ರಲ್ಲಿ ಒಟ್ಟು 20 ತಂಡಗಳು ಕಣಕ್ಕಿಳಿಯಲಿವೆ. ಈ 20 ತಂಡಗಳನ್ನು ನಾಲ್ಕು ಗ್ರೂಪ್‌ಗಳಾಗಿ ವಿಂಗಡಿಸಲಾಗಿದ್ದು, ಅದರಂತೆ ಮೊದಲ ಸುತ್ತಿನಲ್ಲಿ ಗ್ರೂಪ್‌ಗಳಲ್ಲಿರುವ ತಂಡಗಳ ನಡುವೆ ಪಂದ್ಯ ನಡೆಯಲಿದೆ. ಈ ಪಂದ್ಯಗಳೊಂದಿಗೆ ಐಸಿಸಿಯ 10 ಹೊಸ ನಿಯಮಗಳು ಜಾರಿಯಾಗಲಿದೆ. ಬಹುನಿರೀಕ್ಷಿತ ಟಿ20 ವಿಶ್ವಕಪ್‌ಗೆ ವೇದಿಕೆ ಸಿದ್ಧವಾಗಿದೆ. ಫೆಬ್ರವರಿ 7 ರಿಂದ ಶುರುವಾಗಲಿರುವ 20 ತಂಡಗಳ ಚುಟುಕು ಮಹಾ ಸಮರಕ್ಕೂ ಮುನ್ನವೇ ಐಸಿಸಿ ಕೆಲ ನಿಯಮಗಳನ್ನು ಜಾರಿಗೊಳಿಸಿದೆ. ಈ ನಿಯಮಗಳ ಮೂಲಕ ಪಂದ್ಯವನ್ನು ಮತ್ತಷ್ಟು ರೋಚಕ ಹಾಗೂ ನ್ಯಾಯಯುತವಾಗಿ ಆಯೋಜಿಸಲು ನಿರ್ಧರಿಸಲಾಗಿದೆ.



ಅದರಂತೆ ಈ ಬಾರಿಯ ಟಿ20 ವಿಶ್ವಕಪ್‌ನಲ್ಲಿ ಜಾರಿಯಲ್ಲಿರುವ ಹೊಸ ನಿಯಮಗಳಾವುವು ಎಂದು ನೋಡುವುದಾದರೆ ಸ್ಟಾಪ್ ಕ್ಲಾಕ್ ನಿಯಮ ಓವರ್‌ಗಳ ನಡುವೆ ಕಡ್ಡಾಯ 60-ಸೆಕೆಂಡ್‌ಗಳ ''ಸ್ಟಾಪ್ ಕ್ಲಾಕ್'' ಈಗ ಜಾರಿಯಲ್ಲಿರಲಿದೆ. ಅಂದರೆ ಹಿಂದಿನ ಓವರ್ ಮುಗಿದ ಒಂದು ನಿಮಿಷದೊಳಗೆ ಫೀಲ್ಡಿಂಗ್ ತಂಡವು ಮುಂದಿನ ಓವರ್ ಎಸೆಯಲು ಸಿದ್ಧರಾಗಿರಬೇಕು. 5 ರನ್‌ಗಳ ಪೆನಾಲ್ಟಿ: ಸ್ಟಾಪ್ ಕ್ಲಾಕ್ ನಿಯಮವನ್ನು ಉಲ್ಲಂಘಿಸಿದರೆ, ಪ್ರತಿ ಇನ್ನಿಂಗ್ಸ್‌ನಲ್ಲಿ ಎರಡು ಬಾರಿ ಎಚ್ಚರಿಕೆ ನೀಡಲಾಗುತ್ತದೆ. ಆ ನಂತರದ ಉಲ್ಲಂಘನೆಗಳಿಗೆ ಪ್ರತಿ ಬಾರಿ 5 ರನ್‌ಗಳ ದಂಡ ವಿಧಿಸಲಾಗುತ್ತದೆ.

ಬೌಂಡರಿಯ ಆಚೆ ಚೆಂಡನ್ನು ತಡೆಯಲು ಫೀಲ್ಡರ್‌ಗಳು ಮೈದಾನದ ಒಳಗಿನಿಂದ ಹಾರಿರಬೇಕು. ಅವರು ಚೆಂಡನ್ನು ಹಿಂದಕ್ಕೆ ತಳ್ಳಲು ಬೌಂಡರಿಯ ಹೊರಗಿನಿಂದ ಹಾರಿದರೆ, ಅದನ್ನು ಬೌಂಡರಿ ಎಂದು ಪರಿಗಣಿಸಲಾಗುತ್ತದೆ.

# ಟಿ20 ವಿಶ್ವಕಪ್‌ಗೆ ಆರಂಭಿಕ ಜೋಡಿ



ಟಿ20 ವಿಶ್ವಕಪ್ 2026 ರಲ್ಲಿ ಭಾರತದ ಪರ ಆರಂಭಿಕರಾಗಿ ಕಣಕ್ಕಿಳಿಯುವವರು ಯಾರು ಎಂಬ ಪ್ರಶ್ನೆಗೆ ಉತ್ತರ ದೊರಕಿದೆ. ಅದು ಕೂಡ ವಿಶ್ವಕಪ್ ಆರಂಭಕ್ಕೆ ಕೇವಲ 2 ದಿನಗಳಿರುವಾಗ. ನವಿ ಮುಂಬೈನ ಡಿವೈ ಪಾಟೀಲ್ ಸ್ಟೇಡಿಯಂನಲ್ಲಿ ನಡೆದ ಸೌತ್ ಆಫ್ರಿಕಾ ವಿರುದ್ಧದ ಅಭ್ಯಾಸ ಪಂದ್ಯದ ವೇಳೆ ಟಾಸ್ ಗೆದ್ದ ಟೀಮ್ ಇಂಡಿಯಾ ನಾಯಕ ಸೂರ್ಯಕುಮಾರ್ ಯಾದವ್‌ಗೆ ಓಪನರ್‌ಗಳು ಯಾರು ಎಂಬ ಪ್ರಶ್ನೆ ಮುಂದಿಡಲಾಗಿತ್ತು. ಈ ಪ್ರಶ್ನೆಗೆ ಸೂರ್ಯಕುಮಾರ್ ಯಾದವ್ ನೀಡಿದ ಉತ್ತರ ಇಶಾನ್ ಕಿಶನ್ ಹಾಗೂ ಅಭಿಷೇಕ್ ಶರ್ಮಾ. ಅದರಂತೆ ಸೌತ್ ಆಫ್ರಿಕಾ ವಿರುದ್ಧದ ಅಭ್ಯಾಸ ಪಂದ್ಯದಲ್ಲಿ ಅಭಿಷೇಕ್ ಶರ್ಮಾ ಜೊತೆ ಇಶಾನ್ ಕಿಶನ್ ಇನಿಂಗ್ಸ್ ಆರಂಭಿಸಿದ್ದರು. ಈ ವೇಳೆ ಇಶಾನ್ ಕೇವಲ 20 ಎಸೆತಗಳಲ್ಲಿ 53 ರನ್ ಚಚ್ಚುವ ಮೂಲಕ ತನ್ನ ಆಯ್ಕೆಯನ್ನು ಸಮರ್ಥಿಸಿಕೊಂಡಿದ್ದಾರೆ.

ಇದರೊಂದಿಗೆ ಈ ಬಾರಿಯ ವಿಶ್ವಕಪ್‌ನಲ್ಲೂ ಸಂಜು ಸ್ಯಾಮ್ಸನ್ ಬೆಂಚ್ ಕಾಯುವುದು ಖಚಿತವಾಗಿದೆ. ಏಕೆಂದರೆ ನ್ಯೂಝಿಲೆಂಡ್ ವಿರುದ್ಧದ 5 ಪಂದ್ಯಗಳ ಟಿ20 ಸರಣಿಯಲ್ಲಿ ಆರಂಭಿಕನಾಗಿ ಕಣಕ್ಕಿಳಿದಿದ್ದ ಸ್ಯಾಮ್ಸನ್ ಕಲೆಹಾಕಿದ್ದು ಕೇವಲ 46 ರನ್‌ಗಳು ಮಾತ್ರ.

ಇದೇ ವೇಳೆ ಮೂರನೇ ಕ್ರಮಾಂಕದಲ್ಲಿ 4 ಪಂದ್ಯಗಳಲ್ಲಿ ಬ್ಯಾಟ್ ಬೀಸಿದ್ದ ಇಶಾನ್ ಕಿಶನ್ ಕ್ರಮವಾಗಿ 8, 76, 28 ಮತ್ತು 103 ರನ್‌ಗಳ ಇನಿಂಗ್ಸ್ ಆಡಿದ್ದರು. ಇದೀಗ ನ್ಯೂಝಿಲೆಂಡ್ ವಿರುದ್ಧದ ಸರಣಿಯಿಂದ ಹೊರಗುಳಿದಿದ್ದ ತಿಲಕ್ ವರ್ಮಾ ಮೂರನೇ ಕ್ರಮಾಂಕಕ್ಕೆ ಆಗಮಿಸಿದ್ದಾರೆ. ಹೀಗಾಗಿಯೇ ಇದೀಗ ಭರ್ಜರಿ ಫಾರ್ಮ್‌ನಲ್ಲಿರುವ ಇಶಾನ್ ಕಿಶನ್ ಅವರನ್ನು ಆರಂಭಿಕನಾಗಿ ಕಣಕ್ಕಿಳಿಸಲು ನಿರ್ಧರಿಸಲಾಗಿದೆ. ಅದರಂತೆ ಫೆಬ್ರವರಿ 7 ರಿಂದ ಶುರುವಾಗಲಿರುವ ಟಿ20 ವಿಶ್ವಕಪ್‌ನಲ್ಲಿ ಭಾರತದ ಪರ ಇಶಾನ್ ಕಿಶನ್ ಹಾಗೂ ಅಭಿಷೇಕ್ ಶರ್ಮಾ ಇನಿಂಗ್ಸ್ ಆರಂಭಿಸಲಿದ್ದಾರೆ. ಅತ್ತ ಕಳೆದ ಟಿ20 ವಿಶ್ವಕಪ್‌ನಲ್ಲಿ ಬೆಂಚ್ ಕಾದಿದ್ದ ಸಂಜು ಸ್ಯಾಮ್ಸನ್ ಈ ಬಾರಿ ಕೂಡ ಬೆಂಚ್ ಕಾಯುವ ಸಾಧ್ಯತೆ ಹೆಚ್ಚಿದೆ.

**ಭಾರತ ಟಿ20 ತಂಡ:** ಸೂರ್ಯಕುಮಾರ್ ಯಾದವ್ (ನಾಯಕ), ಅಕ್ಷರ್ ಪಟೇಲ್ (ಉಪನಾಯಕ), ಅಭಿಷೇಕ್ ಶರ್ಮಾ, ತಿಲಕ್ ವರ್ಮಾ, ಹಾರ್ದಿಕ್ ಪಾಂಡ್ಯ, ಶಿವಂ ದುಬೆ, ಸಂಜು ಸ್ಯಾಮ್ಸನ್ (ವಿಕೆಟ್ ಕೀಪರ್), ಜಸ್‌ಪ್ರೀತ್ ಬುಮ್ರಾ, ಅರ್ಷದೀಪ್ ಸಿಂಗ್, ವರುಣ್ ಚಕ್ರವರ್ತಿ, ಹರ್ಷಿತ್ ರಾಣಾ, ವಾಷಿಂಗ್ಟನ್ ಸುಂದರ್, ಕುಲ್ದೀಪ್ ಯಾದವ್, ಇಶಾನ್ ಕಿಶನ್ (ವಿಕೆಟ್ ಕೀಪರ್), ರಿಂಕು ಸಿಂಗ್.

# ಇತಿಹಾಸ ಬದಲಿಸುತ್ತಾ ಸ್ಮೃತಿ ಪಡೆ



**ನೇರವಾಗಿ ಫೈನಲ್ ಮುಟ್ಟಿದ ಆರ್‌ಸಿಬಿ**

2026ರ ಐಪಿಎಲ್ ಫೈನಲ್‌ನಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಡೆಲ್ಲಿ ಕ್ಯಾಪಿಟಲ್ಸ್ ವಡೋದರಾದಲ್ಲಿ ಕಾದಾಡಲಿವೆ. 2024ರ ಫೈನಲ್‌ನಲ್ಲಿ ಆರ್‌ಸಿಬಿ ಗೆದ್ದಿತ್ತು, ಈಗ ಡೆಲ್ಲಿ ಸೇಡು ತೀರಿಸಿಕೊಳ್ಳಲು ಸಜ್ಜಾಗಿದೆ. ಡಿಸಿ ತನ್ನ ಮೊದಲ ಟ್ರೋಫಿ ಗೆಲ್ಲುವ ಗುರಿಯಲ್ಲಿದ್ದರೆ, ಆರ್‌ಸಿಬಿ ಎರಡನೇ ಪ್ರಶಸ್ತಿ ಮೇಲೆ ಕಣ್ಣಿಟ್ಟಿದೆ.

ಆದರೆ ನೇರವಾಗಿ ಫೈನಲ್ ತಲುಪಿದ ತಂಡವು ಈವರೆಗೆ ಐಪಿಎಲ್ ಟ್ರೋಫಿ ಗೆದ್ದಿಲ್ಲ ಎಂಬ ಇತಿಹಾಸವನ್ನು ಆರ್‌ಸಿಬಿ ಬದಲಿಸಬೇಕಿದೆ.

2026 ರ ಮಹಿಳಾ ಪ್ರೀಮಿಯರ್ ಲೀಗ್‌ನ ಫೈನಲ್ ಪಂದ್ಯ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಡೆಲ್ಲಿ ಕ್ಯಾಪಿಟಲ್ಸ್ ನಡುವೆ ವಡೋದರಾದಲ್ಲಿ ನಡೆಯಲಿದೆ. ಫೈನಲ್ ಪಂದ್ಯದಲ್ಲಿ ಉಭಯ ತಂಡಗಳು ಮುಖಾಮುಖಿಯಾಗುತ್ತಿರುವುದು ಇದು ಎರಡನೇ ಬಾರಿಗೆ. ಇದಕ್ಕೂ ಮುನ್ನ ಎರಡೂ ತಂಡಗಳ ನಡುವೆ 2024 ರಲ್ಲಿ ಫೈನಲ್ ಪಂದ್ಯ ನಡೆದಿತ್ತು. ಆ ಪಂದ್ಯವನ್ನು ಆರ್‌ಸಿಬಿ ಗೆದ್ದುಕೊಂಡಿತ್ತು. ಇದೀಗ ಅದೇ ಇತಿಹಾಸವನ್ನು ಪುನರಾವರ್ತಿಸಲು ಆರ್‌ಸಿಬಿ ಎದುರು ನೋಡುತ್ತಿದ್ದರೆ, ಇತ್ತ ಡೆಲ್ಲಿ ಕ್ಯಾಪಿಟಲ್ಸ್ ತನ್ನ ಹಳೆಯ ಸೋಲಿಗೆ ಸೇಡು ತೀರಿಸಿಕೊಳ್ಳುವ ಇರಾದೆಯಲ್ಲಿದೆ. ಮಾತ್ರವಲ್ಲದೆ ಡೆಲ್ಲಿ ತಂಡ ಸತತ ನಾಲ್ಕನೇ ಬಾರಿಗೆ ಫೈನಲ್ ಆಡುತ್ತಿದ್ದು, ಮೊದಲ ಬಾರಿಗೆ ಟ್ರೋಫಿ ಗೆಲ್ಲುವ ಗುರಿ ಹೊಂದಿದೆ. ಆದರೆ ಆರ್‌ಸಿಬಿ ತನ್ನ ಎರಡನೇ ಟ್ರೋಫಿ ಮೇಲೆ ಕಣ್ಣಿಟ್ಟಿದೆಯಾದರೂ ಇತಿಹಾಸ ಬದಲಿಸುವ ಸವಾಲು ಸ್ಮೃತಿ ಪಡೆಗಿದೆ. ವಾಸ್ತವವಾಗಿ ಡಬ್ಲ್ಯುಪಿಎಲ್ ಇತಿಹಾಸದಲ್ಲಿ ನೇರವಾಗಿ ಫೈನಲ್ ತಲುಪಿರುವ ತಂಡವು ಇದುವರೆಗೆ ಒಮ್ಮೆಯೂ ಚಾಂಪಿಯನ್ ಆಗಿಲ್ಲ. ಅಂದರೆ ಇದುವರೆಗೆ ಚಾಂಪಿಯನ್ ಆಗಿರುವ ತಂಡಗಳೆಲ್ಲ ಎಲಿಮಿನೇಟರ್ ಆಡಿ ಬಂದ ತಂಡಗಳಾಗಿವೆ. ಹೀಗಾಗಿ ಈ ಬಾರಿ ನೇರವಾಗಿ ಫೈನಲ್‌ಗೇರಿರುವ ಆರ್‌ಸಿಬಿ ಇತಿಹಾಸ ಬದಲಿಸಿ ಟ್ರೋಪಿ ಎತ್ತಿ ಹಿಡಿಯಬೇಕಿದೆ. ಈ ಫೈನಲ್ ಪಂದ್ಯ ನಡೆಯಲಿರುವ ವಡೋದರಾದಲ್ಲಿ ಎರಡು ತಂಡಗಳ ದಾಖಲೆಯ ಬಗ್ಗೆ ಹೇಳುವುದಾದರೆ.. ಆರ್‌ಸಿಬಿ ಇಲ್ಲಿ ಆಡಿರುವ ಆರು ಪಂದ್ಯಗಳಲ್ಲಿ ನಾಲ್ಕರಲ್ಲಿ ಗೆದ್ದಿದ್ದರೆ, ಇತ್ತ ಡೆಲ್ಲಿ ಕ್ಯಾಪಿಟಲ್ಸ್ ಆಡಿರುವ ಎಂಟು ಪಂದ್ಯಗಳಲ್ಲಿ ಆರರಲ್ಲಿ ಗೆದ್ದಿದೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966